ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 130 ಸಂಚಿಕೆ- 130 | PAGE- 8 ಪುಟ-8 | ಮಂಗಳವಾರ 01.07.2025 | RS.2/- ಬೆಲೆ 2/-

## ನಾಯಕತ್ವ ಬದಲಾವಣೆ ಕೇವಲ ಊಹಾಪೋಹ: ಸುರ್ಜೇವಾಲಾ



ಮಲ್ಲಮ ನುಡಿ ವಾರ್ತೆ ಬೆಂಗಳೂರು:ಜೂ.30: ಆಡಳಿತ ಪಕ್ಷದೊಳಗಿನ "ಅತೃಪ್ತಿ" ಮತ್ತು ನಾಯಕತ್ವ ಬದಲಾವಣೆಯ ಬಗ್ಗೆ ಕರ್ನಾಟಕ ಉಸ್ತುವಾರಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಸೋಮವಾರ ಬೆಂಗಳೂರಿನಲ್ಲಿ ಪಕ್ಷದ ಶಾಸಕರೊಂದಿಗೆ ಸಭೆ ನಡೆಸಿದರು.

ಇಂದು ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸುರ್ಜೇವಾಲಾ ಅವರು, ಮಾಧ್ಯಮದಲ್ಲಿ ಬರುತ್ತಿರುವ ನಾಯಕತ್ವ ಬದಲಾವಣೆ ಕೇವಲ ಊಹಾಪೋಹ. ಅದೆಲ್ಲವೂ ನಿಮ್ಮ ಕಲ್ಪನೆ ಮಾತ್ರ ಎಂದರು.

ಪಕ್ಷದ ಶಾಸಕರ ಭೇಟಿ ನಿರಂತರ ಪ್ರಕ್ರಿಯೆ. ಇದು ಒಂದು ತಿಂಗಳು ಅಥವಾ ಒಂದೂವರೆ ತಿಂಗಳು ನಡೆಯಲಿದೆ. ಈ ಸಮಯದಲ್ಲಿ ಪಕ್ಷದ ಶಾಸಕರು, ಸಂಸದರು, ಪರಾಜಿತ ಅಭ್ಯರ್ಥಿಗಳು, ಜಿಲ್ಲಾ ಕಾಂಗ್ರೆಸ್ ಸಮಿತಿ ಮುಖ್ಯಸ್ಥರನ್ನು ಭೇಟಿ ಮಾಡುತ್ತೇನೆ. ಬಳಿಕ ಸಿಎಂ ಹಾಗೂ ಡಿಸಿಎಂ ಜೊತೆಗೂ ಅಭಿವೃದ್ಧಿ ವಿಚಾರವಾಗಿ ಮಾತನಾಡುತ್ತೇವೆ ಎಂದರು.

ರಾಜ್ಯ ಸರ್ಕಾರ ಎರಡು ವರ್ಷಗಳನ್ನು ಪೂರೈಸಿರುವುದರಿಂದ ಆಯಾ ವಿಧಾನಸಭಾ ಕ್ಷೇತ್ರಗಳಲ್ಲಿ ಗ್ಯಾರಂಟಿ ಯೋಜನೆ ಬಗ್ಗೆ ಶಾಸಕರಿಂದ ಮಾಹಿತಿ ಪಡೆಯುತ್ತಿದ್ದೇವೆ. ಕಾಂಗ್ರೆಸ್ ಸಂಘಟನೆ ಅವರವರ ಕ್ಷೇತ್ರದಲ್ಲಿ ಹೇಗಿದೆ ಎಂಬ ವರದಿ ಪಡೆಯುತ್ತಿದ್ದೇವೆ. ಮುಂಚೂಣಿ ಘಟಕಗಳು ಹೇಗೆ ಕೆಲಸ ಮಾಡುತ್ತಿವೆ ಎಂಬ ರಿವ್ಯೂ ಮಾಡುತ್ತಿದ್ದೇವೆ. ಎಷ್ಟು ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸಗಳಾಗುತ್ತಿವೆ ಅನ್ನೋದರ ಬಗ್ಗೆ ಮಾಹಿತಿ ಪಡೆಯುತ್ತೇವೆ. ಸಿಎಂ ಹಾಗೂ ಸಚಿವರಿಗೆ ಇದರಿಂದ ಮಾಹಿತಿ ನೀಡಲು ಹಾಗೂ ಅರ್ಥ ಮಾಡಿಕೊಳ್ಳಲು ಅನುಕೂಲವಾಗಲಿದೆ ಎಂದರು.

ಸರ್ಕಾರದ ಮಟ್ಟದಲ್ಲಿ ಆಗಬೇಕಾದ ಕೆಲಸಗಳ ಬಗ್ಗೆ ಶಾಸಕರಿಂದ ಮಾಹಿತಿ ಪಡೆಯುತ್ತಿದ್ದೇವೆ. ಇದು ಸಂಘಟನಾತ್ಮಕ ಚಟುವಟಿಕೆಯಾಗಿದ್ದು, ಎಐಸಿಸಿ ಕೆಪಿಸಿಸಿ ಜಂಟಿಯಾಗಿ ಮಾಡಬೇಕಿದೆ. ಎಂಎ???ಗಳು ಪಕ್ಷ ಸಂಘಟನೆಗೆ ಕೆಲಸ ಮಾಡುತ್ತಿದ್ದಾರೆ. ಒಂದೇ ಒಂದು ರಾಜ್ಯ ಇಡೀ ದೇಶದಲ್ಲಿ 52 ಸಾವಿರ ಕೋಟಿ ನೇರವಾಗಿ ಜನರ ಖಾತೆಗೆ ಹಾಕುತ್ತಿದೆ. ಗೃಹ ಲಕ್ಷ್ಮಿಯರ ಖಾತೆಗೆ ವಾರ್ಷಿಕ 24 ಸಾವಿರ ಹಣವನ್ನು ಖಾತೆಗೆ ಹಾಕುತ್ತಿದ್ದೇವೆ. ಮೋದಿ ಹಾಗೂ ಬಿಜೆಪಿ ಸೃಷ್ಟಿ ಮಾಡಿದ ಹಣದುಬ್ಬರಕ್ಕೆ ಪರಿಹಾರ ನಾವು ಒದಗಿಸಿದ್ದೇವೆ. 4 ಕೋಟಿ ಜನರಿಗೆ ಅಕ್ಕಿ ನೀಡುತ್ತಿದ್ದೇವೆ ಎಂದು ತಿಳಿಸಿದರು.

## ಸುರ್ಜೇವಾಲರ ಭೇಟಿಯಾದ ಮಾಜಿ ಮಂತ್ರಿ ಪಾಟೀಲ :ಕಾರ್ಯಕರ್ತರು ಉಳಿದರೆ ಪಕ್ಷ ಉಳಿಯಲು ಸಾಧ್ಯ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.30: ನಮ್ಮದೇ ಸರ್ಕಾರದಲ್ಲಿ ಬೀದರ್ ಜಿಲ್ಲೆಯ ನಿಷ್ಠಾವಂತ ಕಾರ್ಯಕರ್ತರಿಗೆ ಬೆಲೆ ಇಲ್ಲದಂತಾಗಿದೆ. ಅಡ್ಜಷ್ಟಮೆಂಟ್ ರಾಜಕಾರಣದಿಂದ ಪಕ್ಷ ಕುಂದಿಹೊಗುತ್ತಿದೆ. ಕಾರ್ಯಕರ್ತರು ಉಳಿದರೇ ಮಾತ್ರ ಪಕ್ಷ ಉಳಿಯಲು ಸಾಧ್ಯ ಎಂಬುವುದರ ಬಗ್ಗೆ ಕಾಂಗ್ರೆಸ್ ಪಕ್ಷದ ರಾಜ್ಯ ಉಸ್ತುವಾರಿ ರಣಜೀತ ಸುರ್ಜೆವಾಲರಿಗೆ ಮಾಜಿ ಮಂತ್ರಿ ರಾಜಶೇಖರ ಪಾಟೀಲರವರು ಸೋಮವಾರ ಬೆಂಗಳೂರಿನಲ್ಲಿ ಭೇಟಿ ಮಾಡಿ ಮನವರಿಕೆ ಮಾಡಿದ್ದಾರೆ ಎಂಬ ಮಾಹಿತಿ ಲಭ್ಯ ವಾಗಿದೆ.

ಜಿಲ್ಲೆಯ ಇಬ್ಬರು ಸಚಿವರು ಬಿಜೆಪಿ ಶಾಸಕರುಗಳ ಜೊತೆ ಹೊಂದಾಣಿಕೆ ರಾಜಕಾರಣ ಮಾಡುತ್ತಿದ್ದಾರೆ ಎಂಬ ಆರೋಪ ಜಿಲ್ಲೆಯಲ್ಲಿ ಕೇಳಿಬರುತ್ತಿರುವ ಹಿನ್ನೆಲೆ ತಾವುಗಳು ಮಧ್ಯಸ್ಥಿಕೆ ವಹಿಸುವುದರ ಮೂಲಕ ಕಾರ್ಯಕರ್ತರಿಗೆ ನ್ಯಾಯ ದೊರಕಿಸಿಕೊಡಬೇಕು ಎಂದು ಮನವಿ ಮಾಡಿದ್ದಾರೆ ಎಂದು ತಿಳಿದು ಬಂದಿದೆ. ಜಿಲ್ಲೆಯಲ್ಲಿ ಕಾಂಗ್ರೆಸ್ ಸಂಪೂರ್ಣ ನೆಲಕಚ್ಚುತ್ತಿದೆ. ಕಾರ್ಯಕರ್ತರು ಹುಮ್ಮಸ್ಸು ಕಳೆದುಕೊಳ್ಳುವ ಸ್ಥಿತಿಗೆ ಬಂದು ತಲುಪಿದ್ದಾರೆ ಹಾಗಾಗಿ ತಾವುಗಳು ಈ ವಿಷಯವನ್ನು ಗಂಭಿರವಾಗಿ ಪರಿಗಣಿಸಬೇಕು ಎಂದು ರಾಜಶೇಖರ ಬಿ.ಪಾಟೀಲ ರವರು ಮನವರಿಕೆ ಮಾಡಿದ್ದಾರೆನ್ನಲಾಗಿದೆ.

## ಬಂಡೆಯ ರೀತಿ ನಮ್ಮ ಸರ್ಕಾರ 5 ವರ್ಷ ಸುಭದ್ರ



ಮಲ್ಲಮ್ಮ ನುಡಿ ವಾರ್ತೆ ಮೈಸೂರು:ಜೂ.30: ನಾನು ಡಿ ಕೆ ಶಿವಕುಮಾರ್ ಚೆನ್ನಾಗಿಯೇ ಇದ್ದೇವೆ, ನಮ್ಮ ಸರ್ಕಾರ 5 ವರ್ಷ ಬಂಡೆಯ ರೀತಿ ಭದ್ರವಾಗಿ ಇರುತ್ತದೆ ಎಂದು ಡಿಕೆ ಶಿವಕುಮಾರ್ ಕೈಹಿಡಿದು ಘೋಷಿಸಿದ ಸಿಎಂ ಸಿದ್ದರಾಮಯ್ಯ, ನಮ್ಮಿಬ್ಬರ ನಡುವೆ ತಂದಾಕುವ ಪ್ರಯತ್ನ ಮಾಡಿದರೂ ಅದು ಆಗುವುದಿಲ್ಲ ಎಂದು ಪ್ರತಿಪಕ್ಷಗಳಿಗೆ ತಿರುಗೇಟು ನೀಡಿದರು. ಇಲ್ಲಿನ ವಿಮಾನನಿಲ್ದಾಣದಲ್ಲಿ ಸೋಮವಾರ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜೊತೆ ಕೈ ಹಿಡಿದು ಒಗ್ಗಟ್ಟು ಪ್ರದರ್ಶಿಸಿದ

(2ನೇ ಪುಟ ನೋಡಿ)

## ಜಿಎಸ್‌ಟಿ ಕಲೆಕ್ಷನ್‌ನಲ್ಲಿ ದಾಖಲೆ : 5 ವರ್ಷಗಳಲ್ಲಿ ಡಬಲ್, 22.08 ಲಕ್ಷ ಕೋಟಿ ಸಂಗ್ರಹ




ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.30: ಕಳೆದ 5 ವರ್ಷಗಳಲ್ಲಿ ಸರಕು ಸೇವಾ ತೆ-ರಿಗೆ ಸಂಗ್ರಹ ದ್ವಿಗುಣಗೊಂಡಿದೆ. 2024-25ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒಟ್ಟಾರೆ ತೆರಿಗೆ ಸಂಗ್ರಹ ದಾಖಲೆಯ 22.08 ಲಕ್ಷ ಕೋಟಿ ರೂ.ಗಳಿಗೆ ತಲುಪಿದೆ ಎಂಬುದನ್ನು ಇಂದು ಬಿಡುಯಾದ ಸರ್ಕಾರಿ ಡೇಟಾ ಬಹಿರಂಗಪಡಿಸಿದೆ.

ಇದು ಈವರೆಗಿನ ದಾಖಲೆಯ ತೆರಿಗೆ ಸಂಗ್ರಹವಾಗಿದೆ . 2021ರ ಆರ್ಥಕ ವರ್ಷದಲ್ಲಿ 11.37 ಲಕ್ಷ ಕೋಟಿ ಸಂಗ್ರಹವಾಗಿತ್ತು. ಇದೀಗ 2025ರ ಆರ್ಥಿಕ ವರ್ಷದಲ್ಲಿ ಒಟ್ಟಾರೆ ಸರಾಸರಿ ಮಾಸಿಕ ಜಿಎಸ್‌ಟಿ ಸಂಗ್ರಹ 1.84 ಲಕ್ಷ ಕೋಟಿ ಇದ್ದರೆ, 2024ರ ಆರ್ಥಿಕ ವರ್ಷದಲ್ಲಿ 1.68 ಲಕ್ಷ ಕೋಟಿ ರೂ., 2022ರ ಆರ್ಥಿಕ ವರ್ಷದಲ್ಲಿ 1.51 ಲಕ್ಷ ಕೋಟಿ ರೂ. ಸಂಗ್ರಹವಾಗಿದ್ದು, ಗಮನಾರ್ಹ ಏರಿಕೆಯಾಗಿರುವುದು ಕಂಡುಬಂದಿದೆ.

ಸರಕು ಸೇವಾ ತೆರಿಗೆ ವ್ಯವಸ್ಥೆ ಜಾರಿಗೆ ಬಂದು 8 ವರ್ಷ ತುಂಬಿದೆ. ಒಟ್ಟು ನೋಂದಾಯಿತ ತೆರಿಗೆ ಪಾವತಿದಾರರ ಸಂಖ್ಯೆ 65 ಲಕ್ಷದಿಂದ 1.51 ಕೋಟಿಗೆ ಏರಿಕೆಯಾಗಿದೆ. ಹೀಗಾಗಿ 2024-25ರ ಆರ್ಥಿಕ ವರ್ಷದಲ್ಲಿ ದಾಖಲೆಯ ಜಿಎಸ್‌ಟಿ ಸಂಗ್ರಹವಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದ್ರೆ ಶೇ.9.4 ರಷ್ಟು ಹೆಚ್ಚಿನ ತೆರಿಗೆ ಸಂಗ್ರಹವಾಗಿದೆ ಎಂಬುದನ್ನು ದತ್ತಾಂಶ ಬಹಿರಂಗಗೊಳಿಸಿದೆ.

ಇನ್ನೂ 2025ನೇ ಸಾಲಿನ ಏಪ್ರಿಲ್‌ನಲ್ಲಿ 2.37 ಲಕ್ಷ ಕೋಟಿ, ಮೇ ತಿಂಗಳಲ್ಲಿ 2.01 ಲಕ್ಷ ಕೋಟಿ ಸಂಗ್ರಹವಾಗಿದ್ದು, ಜೂನ್ ತಿಂಗಳ ಅಂಕಿ ಅಂಶ ಜುಲೈ 2ರಂದು ಬಿಡುಗಡೆಯಾಗಲಿದೆ ಎಂದು ತಿಳಿದುಬಂದಿದೆ.

ಜಿಎಸ್‌ಟಿ ಜಾರಿಗೆ ಬಂದಾಗಿನಿಂದ ತೆರಿಗೆ ಸಂಗ್ರಹ ಹೆಚ್ಚಳ ಒಂದು ಕಡೆಯಾದ್ರೆ, ತೆರಿಗೆ ಮೂಲಗಳ ವಿಸ್ತರಣೆಯೂ ಆಗಿದೆ. ಇದು ಭಾರತದ ಹಣಕಾಸಿನ ಸ್ಥಿತಿಯನ್ನು ಇನ್ನಷ್ಟು ಸ್ಥಿರವಾಗಿ ಬಲಪಡಿಸಿದೆ. ಅಲ್ಲದೇ ಪರೋಕ್ಷ ತೆರಿಗೆಯನ್ನು ಹೆಚ್ಚು ಪರಿಣಾಮಕಾರಿ ಮತ್ತು ಪಾರದರ್ಶಕವಾಗಿಸಿದೆ ಎಂದು ಕೇಂದ್ರ ಸರ್ಕಾರ ತನ್ನ ಅಧಿಕೃತ ಪ್ರಕರಣೆಯಲ್ಲಿ ತಿಳಿಸಿದೆ.

## ಮುಖ್ಯಮಂತ್ರಿ ಬದಲಾವಣೆ ಅನಗತ್ಯ ಸಮಸ್ಯೆ ಸೃಷ್ಟಿ ಬೇಡ: ಮಲ್ಲಿಕಾರ್ಜುನ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.30: ಮುಖ್ಯಮಂತ್ರಿ ಬದಲಾವಣೆಯಂತಹ ವಿಚಾರಗಳ ಬಗ್ಗೆ ಪಕ್ಷದ ಹೈಕಮಾಂಡ್ ನಿರ್ಧಾರ ತೆಗೆದುಕೊಳ್ಳುತ್ತದೆ ಮತ್ತು ಈ ಬಗ್ಗೆ ಅನಗತ್ಯ ಸಮಸ್ಯೆಯನ್ನು ಸೃಷ್ಟಿಸಬಾರದು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೋಮವಾರ ಹೇಳಿದರು. ಅಕ್ಟೋಬರ್‌ನಲ್ಲಿ ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯಾಗಲಿದೆ ಎಂದು ಕೆಲವು ಕಾಂಗ್ರೆಸ್ ನಾಯಕರು ಹೇಳಿಕೆ ನೀಡುತ್ತಿರುವ ಬೆನ್ನಲ್ಲೇ ಮಾಧ್ಯಮಗಳ ಪ್ರಶ್ನೆಗೆ ಮಲ್ಲಿಕಾರ್ಜುನ ಖರ್ಗೆ ಉತ್ತರಿಸಿದರು.'ನೋಡಿ, ಅದು ಹೈಕಮಾಂಡ್ ಕೈಯಲ್ಲಿದೆ. ಹೈಕಮಾಂಡ್‌ನಲ್ಲಿ ಏನು ನಡೆ-ಯುತ್ತಿದೆ ಎಂದು ಇಲ್ಲಿ ಯಾರೂ ಹೇಳಲು ಸಾಧ್ಯವಿಲ್ಲ. ಇದು ಹೈಕಮಾಂಡ್‌ಗೆ ಬಿಟ್ಟ ವಿಷಯ ಮತ್ತು ಮುಂದಿನ ನಿರ್ಧಾರ ತೆಗೆದುಕೊಳ್ಳುವ ಅಧಿಕಾರ ಹೈಕಮಾಂಡ್‌ಗೆ ಇದೆ. ಆದರೆ, ಅನಗತ್ಯವಾಗಿ ಯಾರೊಬ್ಬರೂ ಸಮಸ್ಯೆ ಸೃಷ್ಟಿಸಬಾರದು' ಎಂದು ಅವರು ತಿಳಿಸಿದರು. 2023ರಲ್ಲಿ, ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರ ವಹಿಸಿಕೊಂಡಾಗ, ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ನಡುವೆ ಅಧಿಕಾರ ಹಂಚಿಕೆಯ ಮಾತುಕತೆ ನಡೆದಿದ್ದು, ಉಭಯ ನಾಯಕರು ತಲಾ 2.5 ವರ್ಷಗಳ ಕಾಲ ರಾಜ್ಯವನ್ನು ಮುನ್ನಡೆಸುತ್ತಾರೆ ಎಂಬ ಊಹಾಪೋಹಗಳು ಕೇಳಿಬಂದಿದ್ದವು. ಆದರೆ, ಈ ಬಗ್ಗೆ ಪಕ್ಷ ಯಾವುದೇ ಸ್ಪಷ್ಟನೆ ನೀಡಿಲ್ಲ ಅಥವಾ ತಿರಸ್ಕರಿಸಿಲ್ಲ. ಸದ್ಯ, ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದು, ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಕೆ ಶಿವಕುಮಾರ್ ಉಪ ಮುಖ್ಯಮಂತ್ರಿಯಾಗಿದ್ದಾರೆ.

## ಹಣ ಕೊಡುವ ವಿಚಾರಕ್ಕೆ ಜಗಳ:ವ್ಯಕ್ತಿಯ ಕೊಲೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಜೂ.30-ಹಣಕಾಸಿನ ವಿಚಾರದಲ್ಲಿ ಇಬ್ಬರು ವ್ಯಕ್ತಿಗಳ ಮಧ್ಯೆ ಜಗಳ ಉಂಟಾಗಿ ಓರ್ವನ ಕೊಲೆಯಲ್ಲಿ ಅಂತ್ಯಗೊಂಡ ಘಟನೆ ತಾಲೂಕಿನ ಮನ್ನಿಕಟ್ಟಿ ಕ್ರಾಸ್ - ಶಿರೂರ ರಸ್ತೆಯಲ್ಲಿ ರವಿವಾರ ಸಂಜೆ ನಡೆದಿದೆ.

ತಾಲೂಕಿನ ಬೆನಕಟ್ಟಿ ಗ್ರಾಮದ ಮಾಲತೇಶ ಭೀಮಪ್ಪ ದಾಸಪ್ಪನವರ (28) ಕೊಲೆಗೀಡಾದ ವ್ಯಕ್ತಿಯಾಗಿದ್ದು, ಅದೇ ಗ್ರಾಮದ ಚಿನ್ನಪ್ಪ ಅಣ್ಣಪ್ಪ ಬೆಣ್ಣೂರ ಎಂಬಾತ ಕೊಲೆ ಮಾಡಿದ್ದಾನೆ.

ಮಾಲತೇಶನಿಗೆ ಸೇರಿದ್ದ ಕಾರು ಮತ್ತೊಬ್ಬರಿಗೆ ಮಾರಿದ್ದ ಹಣದಲ್ಲಿ ಚಿನ್ನಪ್ಪ 2 ಲಕ್ಷ ರೂಪಾಯಿ ತೆಗೆದುಕೊಂಡಿದ್ದು, ಆ ಹಣ ಕೊಡುವಂತೆ ಮಾಲತೇಶ ಪದೇ ಪದೇ ಒತ್ತಾಯಿಸಿದ್ದಾನೆ. ಆಗ ಅವನನ್ನು ಕೊಲೆ ಮಾಡುವ ಉದ್ದೇಶದಿಂದ ಹಣ ಕೊಡುತ್ತೇನೆ ಬಾ ಎಂದು ಚಿನ್ನಪ್ಪ ತನ್ನ ಹೊಲಕ್ಕೆ ಕರೆಯಿಸಿದ್ದಾನೆ. ಅಲ್ಲಿ ಇಬ್ಬರ ಮಧ್ಯೆ ಮಾತಿಗೆ ಮಾತು ಬೆಳೆದು ಜಗಳ ನಡೆದಿದೆ. ಆಗ ಚಿನ್ನಪ್ಪ ಅಲ್ಲಿಯೇ ತನ್ನ ಹೊಲದ ಮನೆಯಲ್ಲಿದ್ದ ಬೆಡಗ ತಂದು ಮಾಲತೇಶನ ತಲೆ, ಕಪಾಳ ಹಾಗೂ ಕುತ್ತಿಗೆಗೆ ಹೊಡೆದು ತೀವ್ರ ಗಾಯಗೊಳಿಸಿ ಸಾಯಿಸಿದ್ದಾನೆ. ಈ ಕುರಿತು ಮೃತ ಮಾಲತೇಶನ ಚಿಕ್ಕಪ್ಪ ಅಶೋಕ ದಾಸಪ್ಪನವರ ಪೋಲಿಸರಿಗೆ ದೂರು ನೀಡಿದ್ದಾರೆ. ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಪ್ರಸನ್ನ ದೇಸಾಯಿ, ಡಿವೈಎಸ್ಪಿ ಗಜಾನನ ಸುತಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗ್ರಾಮೀಣ ಠಾಣೆ-ಯ ಪಿಎಸ್‌ಐಗಳಾದ ಶರಣಬಸಪ್ಪ ಸಂಗಳದ ಹಾಗೂ ಆರ್.ಡಿ.ಲಮಾಣಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

## ಪ ಜಾತಿ ಮತ್ತು ಪ ಪಂಗಡದವರ ಮೇಲಿನ ದೌರ್ಜನ್ಯ ನಿಯಂತ್ರಣಕ್ಕೆ ಸೂಕ್ತ ಜಾಗೃತಿ ಮೂಡಿಸಿ:ಡಾ.ಸುಶೀಲ.ಬಿ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಜೂ:30: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದ ಮೇಲಿನ ದೌರ್ಜನ್ಯ ನಿಯಂತ್ರಣ-ಕ್ಕೆ ಸೂಕ್ತ ಜಾಗೃತಿ ಮೂಡಿಸಲು ಜಿಲ್ಲಾಧಿಕಾರಿ ಡಾ.ಸುಶೀಲ .ಬಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಎರಡನೇ ತ್ರೈಮಾಸಿಕ ಅನುಸೂಚಿತ ಜಾತಿ/ ಅನು ಸೂಚಿತ ಪಂಗಡ( ದೌರ್ಜನ್ಯ ನಿಯಂತ್ರಣ) ಕಾಯ್ದೆ 1995ರಡಿ ನಿಯಮ 17ರ ರೀತ್ಯಾ ಜಿಲ್ಲಾ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದ ಮೇಲಾಗುವ ದೌರ್ಜನ್ಯ ಪ್ರಕರಣಗಳ ಬಗ್ಗೆ ತೀವ್ರ ನಿಗಾ ಇಡಬೇಕು. ಅದರಂತೆ ನಕಲಿ ಪ್ರಕರಣಗಳ ಮತ್ತು ದೂರುಗಳ ಬಗ್ಗೆಯೂ ನಿಗಾ ಇಡುವ ಮೂಲಕ ಅಧಿಕಾರಿಗಳು ಹಾಗೂ, ಸಮಾಜದ ಮುಖಂಡರು, ಜಿಲ್ಲಾ ಜಾಗೃತಿ ಸಮಿತಿಯ ಸದಸ್ಯರು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸುವಂತೆ ಸೂಚಿಸಿದರು. ದೌರ್ಜನ್ಯ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ರಕ್ಷಣೆ ನೀಡಬೇಕು. ವಿಶೇಷವಾಗಿ ಗ್ರಾಮಾಂತರ ಪ್ರದೇಶಗಳಲ್ಲಿ ಸೂಕ್ತ ಜಾಗೃತಿ ಮೂಡಿಸಬೇಕು. ತಾಲೂಕುವಾರು, ಗ್ರಾಮವಾರು ನಡೆಯುವ ದೌರ್ಜನ್ಯ ನಿಯಂತ್ರಣ ಸಭೆಗಳಿಗೆ ತಪ್ಪದೆ ಸಮಿತಿ ಸದಸ್ಯರನ್ನು ಆಹ್ವಾನಿಸುವಂತೆ ಸೂಚಿಸಿದರು.

ಸುರಪುರ ದೇವಳಗುಡ್ಡ ಸ್ಮಶಾನ ಭೂಮಿ ಒತ್ತುವರಿ ತೆರವುಗೊಳಿಸಬೇಕು.

ಈ ಜನಾಂಗಕ್ಕೆ ಅವಶ್ಯಕತೆ ಇರುವ ಕಡೆ ಆದ್ಯತೆ ಮೇಲೆ ಸ್ಮಶಾನ ಭೂಮಿ ಸೌಲಭ್ಯ ಕಲ್ಪಿಸಬೇಕು. ಜನರ ಭಾವನಾತ್ಮಕ ಈ ವಿಷಯವಾಗಿರುವದರಿಂದ ನಿರ್ಲಕ್ಷ್ಯತೆ ತೋರಿದಂತೆ ಅವರು ಅವರು ಸೂಚಿಸಿದರು.

ಪರಿಶಿಷ್ಟ

(2ನೇ ಪುಟ ನೋಡಿ)

## ರೈತರ ಕಬ್ಬಿನ ಬಾಕಿ ಬಿಲ್ಲು ಸಂಪೂರ್ಣ ಪಾವತಿ:ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜೂ. 30 : ದಿ.ನಾರಂಜಾ ಸಹಕಾರಿ ಸಕ್ಕರೆ ಕಾಖಾನೆ ನಿಯಮಿತ ಇಮಾಪೂರ ಕಾರ್ಖಾನೆಗೆ 2024-25ನೇ ಸಾಲಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರ ಕಬ್ಬಿನ ಬಾಕಿ ಬಿಲ್ಲ 20,98,00,000 ರೂ.ಗಳನ್ನು ರೈತರಿಗೆ ಸಂಪೂರ್ಣವಾಗಿ ಪಾವತಿಸಲಾಗಿದೆ ಎಂದು ಜಿಲ್ಲಾದಿಕಾರಿ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳು ಬೀದರ ಇವರ ಆದೇಶದ ಪ್ರಕಾರ ದಿ.ನಾರಂಜಾ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ಇಮಾಪೂರ ಕಾರ್ಖಾನೆಗೆ 2024-25ನೇ ಸಾಲಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರ ಕಬ್ಬಿನ ಬಿಲ್ಲು ಪಾವತಿಸದೇ ಇರುವುದರಿಂದ ಭೂಕಂದಾಯದಡಿ ವಸೂಲಿ ಪ್ರಮಾಣ ಪತ್ರವನ್ನು ಹೊರಡಿಸಲಾಗಿರುತ್ತದೆ. ಅದರಂತೆ ತಹಸೀಲ್ದಾರರು ಬೀದರ ಇವರು ಸದರಿ ಕಾರ್ಖಾನೆಯಲ್ಲಿರುವ 65000 (ಖ.30) ಕ್ವಿಂಟಲ್ ಸಕ್ಕರೆಯನ್ನು ಜಪ್ತಿ ಮಾಡಿರುತ್ತಾರೆ.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಬೀದರ ಇವರು ಮನವಿ ನೀಡಿ ಕಾರ್ಖಾನೆಗೆ ಕಬ್ಬು ಪೂರೈಸಿದ ರೈತರ ಬಿಲ್ಲು ಪಾವತಿಸಲು ಒತ್ತಾಯಿಸಿದರು. ಸದರಿ ಸಕ್ಕರೆ ಕಾರ್ಖಾನೆಯಲ್ಲಿ ಜಪ್ತಿ ಮಾಡಿರುವ 65000 (ಖ.30) ಕ್ವಿಂಟಲ್ ಸಕ್ಕರೆಯನ್ನು ಮಾರಾಟ ಮಾಡಿ ರೈತರ ಕಬ್ಬಿನ ಸಂಪೂರ್ಣ ಬಿಲ್ಲು ಪಾವತಿ ಮಾಡಲು ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಬೆಂಗಳೂರು ಇವರ ಅನುಮತಿಯನ್ನು ಪಡೆದು ಸದರಿ ಕಾರ್ಖಾನೆಯಲ್ಲಿರುವ 65000 (ಖ.30) ಕ್ವಿಂಟಲ್ ಸಕ್ಕರೆಯನ್ನು ಮಾರಾಟ ಮಾಡಿ ರೈತರ ಬಾಕಿ ಪಾವತಿ ಮೊತ್ತ ಪಾವತಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಒಂದೇ ದಿನ ನಾಲ್ವರು ಹೃದಯಾಘಾತಕ್ಕೆ ಬಲಿ

ಮಲ್ಲಮ್ಮ ನುಡಿ ವಾರ್ತೆ ಹಾಸನ, ಜೂ.30:ಹಾಸನ ಜಿಲ್ಲೆಯಲ್ಲಿ ಹೃದಯಾಘಾತ ಸರಣಿ ಮುಂದುವರಿದಿದ್ದು, ಒಂದೇ ದಿನ ನಾಲ್ವರು ಮೃತಪಟ್ಟಿದ್ದಾರೆ. ಇದರೊಂದಿಗೆ, ಬರೀ 40 ದಿನಗಳಲ್ಲಿ ಹೃದಯಾಘಾತದಿಂದ ಮೃತಪಟ್ಟವರ ಸಂಖ್ಯೆ 22ಕ್ಕೆ ಏರಿಕೆಯಾಗಿರುವುದು ಆತಂಕ ಮನೆ ಮಾಡಿದೆ.

ಬೇಲೂರಿನ ಜೆಪಿ. ಲೇಪಾಕ್ಷಿ (50), ಹೊಳೆನರಸೀಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ

(2ನೇ ಪುಟ ನೋಡಿ)

## ಜು.2ರಿಂದ 4 ದಿನ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ಜೂ.30:ರಾಜ್ಯದಲ್ಲಿ ಕೊಂಚ ಬಿಡುವು ನೀಡಿದ್ದ ಮಳೆರಾಯ ಇದೀಗ ಮತ್ತೆ ಅಬ್ಬರಿಸುವ ಸಾಧ್ಯತೆಯಿದ್ದು, ಜು.2ರಿಂದ 5ರ ವರೆಗೆ ರಾಜ್ಯದ ಎಲ್ಲಾ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಕಳೆದೆರೆಡು ವಾರದಿಂದ ಕರಾವಳಿ, ಮಲೆನಾಡು ಭಾಗದಲ್ಲಿ ಮಳೆ ಪ್ರಮಾಣ ಕಡಿಮೆಯಾಗಿತ್ತು. ಸದ್ಯ ಹವಾಮಾನ ಇಲಾಖೆ ಮಳೆ ಮುನ್ಸೂಚನೆ ನೀಡಿದ್ದು, ಇಂದಿನಿಂದ ರಾಜ್ಯದ ಬಹುತೇಕ ಕಡೆ ಮಳೆಯಾಗುವ ಬಗ್ಗೆ ಸಾಧ್ಯತೆಯಿದೆ. ಇದನ್ನೂ ಓದಿ: ಭಾರತ ಹೊರಗಿಟ್ಟು ಸಾರ್ಕ್‌ಗೆ ಪರ್ಯಾಯವಾಗಿ ಹೊಸ ಪ್ರಾದೇಶಿಕ ಒಕ್ಕೂಟ ರಚಿಸಲು ಚಿಂತನೆ

ಕರಾವಳಿ ಕರ್ನಾಟಕದಲ್ಲಿ ವರುಣನ ಅಬ್ಬರ ತಗ್ಗಲಿದ್ದು, ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಜು.1 ಉಡುಪಿ, ದಕ್ಷಿಣ ಕನ್ನಡ ಹೊರತುಪಡಿಸಿ ಉಳಿದ ಎಲ್ಲ ಜಿಲ್ಲೆಗಳಿಗೆ ಯಲ್ಲೋ ಅಲರ್ಟ್ ನೀಡಲಾಗಿದೆ. ಇನ್ನುಳಿದಂತೆ ಜು.2ರಿಂದ 5ರವರೆಗೆ ರಾಜ್ಯಾದ್ಯಂತ ಯೆಲ್ಲೋ ಅಲರ್ಟ್ ನೀಡಲಾಗಿದೆ.

93 ವರ್ಷಗಳ ಇತಿಹಾಸದಲ್ಲಿ ಮೊದಲ ಬಾರಿಗೆ ಜೂನ್‌ನಲ್ಲಿ ಕೆಆರ್‌ಎ ಭರ್ತಿಯಾಗಿರುವ ಹಿನ್ನೆಲೆ ಸೋಮವಾರ ಸಿಎಂ ಸಿದ್ದರಾಮಯ್ಯ ಅವರು ಬಾಗಿನ ಅರ್ಪಿಸಿದರು. ಅತ್ತ ತಮಿಳುನಾಡಿನ ಮೆಟ್ಟೂರು ಜಲಾಶಯವು ಕೂಡ ಭರ್ತಿಯಾಗಿದೆ.

ಇನ್ನೂ ಉತ್ತರ ಕನ್ನಡ ಜಿಲ್ಲೆಯಲ್ಲಿ ಕಳೆದ ಒಂದು ತಿಂಗಳಿಂದ ಸುರಿಯುತ್ತಿರುವ ಭಾರಿ ಮಳೆಯಿಂದ ಜಿಲ್ಲೆಯ ಜಲಪಾತಗಳಿಗೆ ಜೀವ ಕಳೆ ಬಂದಿದ್ದು, ಅಘನಾಶಿನಿ ನದಿಗೆ ಹೆಚ್ಚಿನ ನೀರು ಹರಿದು ಬಂದಿದೆ. ಉಂಚಳ್ಳಿ ಜಲಪಾತದಲ್ಲಿ ಹೆಚ್ಚಿನ ನೀರು ರಭಸವಾಗಿ ಹರಿಯುವ ಮೂಲಕ ತನ್ನ ಸೌಂದರ್ಯ ಹೆಚ್ಚಿಸಿಕೊಂಡಿದೆ. ನಾರಾಯಣಪುರ ಜಲಾಶಯದಿಂದ 1 ಲಕ್ಷ ಕ್ಯೂಸೆಕ್ ನೀರು ಬಿಡುಗಡೆ ಹಿನ್ನೆಲೆ ರಾಯಚೂರು ತಾಲೂಕಿನ ಕೃಷ್ಣಾ ನದಿ ದಂಡೆಯಲ್ಲಿರುವ ಕಾಡ್ಲೂರು ಉಪೇಂದ್ರ ತೀರ್ಥ ಕರಾರ್ಚಿತ ಪ್ರಾಣದೇವರ ದೇವಸ್ಥಾನ ಜಲಾವೃತಗೊಂಡಿದೆ.

## ಒಂದನೇ ಪುಟದಿಂದ

# ನಿಯಂತ್ರಣಕ್ಕೆ ಸೂಕ್ತ ಜಾಗೃತಿ ಮೂಡಿಸಿ:ಡಾ.ಸುಶೀಲ.ಬಿ

ಜಾತಿ,ಜನಾಂಗದ ಬಾಲಕ , ಬಾಲಕಿಯರ ವಸತಿ ನಿಲಯಗಳಿಗೆ ನಿರಂತರ ಭೇಟಿ ನೀಡಿ, ಮೂಲಸೌಲಭ್ಯ, ಸಮಸ್ಯೆಗಳ ಬಗ್ಗೆ ಪರಿಶೀಲಿಸುವಂತೆ ಅವರು ಸೂಚಿಸಿದರು.

ಚಿನ್ನಾಕಾರ ಗ್ರಾಮದಲ್ಲಿ ಡಾ.ಅಂಬೇಡ್ಕರ್ ಭವನದ ಸಮೀಪ ಗ್ರಾಮ ಪಂಚಾಯತ್ ಕಟ್ಟಡ ನಿರ್ಮಾಣ ಕುರಿತು ಸಂಬಂಧಿಸಿದ ಅಧಿಕಾರಿಗಳು ಪರಿಶೀಲನೆ ನಡೆಸಿ ವರದಿ ನೀಡುವಂತೆ ಅವರು ಸೂಚನೆ ನೀಡಿದರು.

ಜಿಲ್ಲೆಯಲ್ಲಿ ದೌರ್ಜನ್ಯದಲ್ಲಿ ನೊಂದ 16 ಜನ ಸಂತ್ರಸ್ತರಿಗೆ ಜಿಲ್ಲಾಡಳಿತ ವತಿಯಿಂದ ಒಟ್ಟು 29.75 ಲ.ರೂಗಳ ಪರಿಹಾರ ಧನ ವಿತರಿಸಲಾಗಿದೆ.ಬಾಕಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಪರಿಹಾರ ಧನ ನೀಡಬೇಕಾಗಿದ್ದು, ಅನುದಾನ ಬಿಡುಗಡೆ ನಂತರ ನೀಡಲಾಗುವುದು ಎಂದು ಸಭೆಯಲ್ಲಿ ತಿಳಿಸಲಾಯಿತು.

ಇದಕ್ಕೂ ಮುನ್ನ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಅವರು ಎಸ್.ಸಿ.ಎಸ್.ಪಿ/ಟಿ ಎಸ್. ಪಿ ಪ್ರಗತಿ ಪರಿಶೀಲನಾ ಸಭೆ ನಡೆಸಿ

ಶೇ. ನೂರರಷ್ಟು ಅಭಿವೃದ್ಧಿಯಲ್ಲಿ ಪ್ರಗತಿ ಸಾಧಿಸುವಂತೆ ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್, ಜಿಲ್ಲಾ ಜಾಗೃತಿ ಸಮಿತಿಯ ಸದಸ್ಯರಾದ ಮರೆಪ್ಪ ಚಟ್ಟರ್ಕರ್, ಮಲ್ಲಣ್ಣ ಗೋಗಿ,ನಿಂಗಪ್ಪ,ದಿನೇಶ್,ರವಿ ಯಕ್ಷಂತಿ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ನಮ್ಮ ಸರ್ಕಾರ 5 ವರ್ಷ ಸುಭದ್ರ

ಅವರು ' ನಮ್ಮ ಬಗ್ಗೆ ಮಾತನಾಡುವ ಶ್ರೀರಾಮುಲು ಎಷ್ಟು ಚುನಾವಣೆ ಸೋತಿದ್ದಾರೆ. ಬಿಜೆಪಿಯವರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು. ನಾನು ಈ ಬಾರಿಯ ದಸರಾ ಉದ್ಘಾಟಿಸುವುದು ಸತ್ಯ' ಎಂದರು.'ರಣದೀಪಸಿಂಗ್ ಸುರ್ಜೇವಾಲ ಈ ರಾಜ್ಯದ ಕಾಂಗ್ರೆಸ್ ಉಸ್ತುವಾರಿ. ಅವರು ನಮ್ಮ ಪಕ್ಷದ ಶಾಸಕರ ಕಷ್ಟ–ಸುಖ ಕೇಳುತ್ತಾರೆ. ಅದರಲ್ಲಿ ವಿಶೇಷವೇನಿಲ್ಲ' ಎಂದರು. ಕೆಲವು ದಿನಗಳಿಂದ ಪವರ್ ಸೆಂಟರ್ ಬದಲಾವಣೆ, ಕ್ರಾಂತಿ, 3 ತಿಂಗಳಲ್ಲಿ ಅಧಿಕಾರ ಕಳೆದುಕೊಳ್ಳಲಿರುವ ಸಿದ್ದರಾಮಯ್ಯ ಹೀಗೆ ವಿವಿಧ ವಿಚಾರಗಳು ಚರ್ಚೆಯಾಗುತ್ತಿದ್ದು, ಇದಕ್ಕೆ ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಸೂಕ್ತ ಉತ್ತರ ಕೊಟ್ಟು, ಟೀಕಿಸುವವರು ಬಾಯಿ ಮುಚ್ಚಿಸಲು ಯತ್ನಿಸಿದರು.ಕೆಆರ್ ಎಸ್ ಗೆ ಬಾಗೀನ ಅರ್ಪಿಸುವ ಹಿನ್ನೆಲೆಯಲ್ಲಿ ಸೋಮವಾರ ಮೈಸೂರು ವಿಮಾನ ನಿಲ್ದಾಣಕ್ಕರ ಆಗಮಿಸಿದ ಸಿಎಂ ಸಿದ್ದರಾಮಯ್ಯ ಮಾಧ್ಯಮದವರೊಂದಿಗೆ ಮಾತನಾಡಿದರು. ಹಾಸನ ಜಿಲ್ಲೆಯಲ್ಲಿ ಹೃದಾಯಘಾತ ಪ್ರಕರಣಗಳು ಹೆಚ್ಚಾಗುತ್ತಿರುವ ಬಗ್ಗೆ ಮಾತನಾಡಿ ಅದರ ಬಗ್ಗೆ ಪರಿಶೀಲನೆ ನಡೆಸುತ್ತೇನೆ. ಹೃದಯಾಘಾತ ಹೆಚ್ಚಾಗಲು ಕಾರಣ ಏನು ಎಂಬುದಕ್ಕೆ ತಜ್ಞರ ಮೂಲಕ ಮಾಹಿತಿ ತರಿಸಿಕೊಳ್ಳುತ್ತೇನೆ. ಅದರ ನಿಯಂತ್ರಣಕ್ಕೆ ಸೂಕ್ತ ಕ್ರಮ ಕೈಗೊಳ್ಳುತ್ತೇನೆ ಎಂದರು.

# ಹೃದಯಾಘಾತಕ್ಕೆ ಬಲಿ

ಇಂಗ್ಲಿಷ್ ಪ್ರಾಧ್ಯಾಪಕ ಮುತ್ತಯ್ಯ (58), ನುಗ್ಗೆಹಳ್ಳಿ ನಾಡಕಚೇರಿ ಡಿ ಗ್ರೂಪ್ ನೌಕರ ಕುಮಾರ್ (53) ಹಾಗೂ ಚನ್ನರಾಯಪಟ್ಟಣ ತಾಲೂಕಿನ ಕೆಂಬಾಳು ಗ್ರಾಮದ ಲೋಹಿತ್ (38) ಹೃದಯಾಘಾತದಿಂದ ಅಸುನೀಗಿದ್ದಾರೆ.

ಬೇಲೂರಿನ ಜೆಪಿ. ಲೇಪಾಕ್ಷಿ (50), ಹೊಳೆನರಸೀಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇಂಗ್ಲಿಷ್ ಪ್ರಾಧ್ಯಾಪಕ ಮುತ್ತಯ್ಯ (58), ನುಗ್ಗೆಹಳ್ಳಿ ನಾಡಕಚೇರಿ ಡಿ ಗ್ರೂಪ್ ನೌಕರ ಕುಮಾರ್ (53) ಕೂಡ ಹೃದಯಾಘಾತದಿಂದ ಸಾವಿಗೀಡಾಗಿದ್ದಾರೆ

ಲೋಹಿತ್ ಕಳೆದ 18 ವರ್ಷಗಳಿಂದ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ರಜೆಯಲ್ಲಿ ಊರಿಗೆ ಬಂದಿದ್ದ ಅವರು, ಜುಲೈ 3ರಂದು ರಜೆ ಮುಗಿಸಿ ಕರ್ತವ್ಯಕ್ಕೆ ಮರಳುವವರಿದ್ದರು. ದುರದೃಷ್ಟವಶಾತ್, ಹೃದಯಾಘಾತದಿಂದ ಮೃತಪಟ್ಟಿದ್ದಾರೆ.

ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲೂಕಿನ ನುಗ್ಗೆಹಳ್ಳಿ ಗ್ರಾಮದ ನಾಡಕಚೇರಿ ಡಿ ಗ್ರೂಪ್ ನೌಕರ ಕುಮಾರ್‌ಗೆ ಮನೆಯಲ್ಲಿ ಮಲಗಿದ್ದ ವೇಳೆ ಎದೆನೋವು ಕಾಣಿಸಿಕೊಂಡಿದೆ.

ತಕ್ಷಣವೇ ಅವರನ್ನು ಚನ್ನರಾಯಪಟ್ಟಣ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಚಿಕಿತ್ಸೆ ಫಲಕಾರಿಯಾಗದೆ ಆಸ್ಪತ್ರೆಯಲ್ಲಿ ಅವರು ಮೃತಪಟ್ಟಿದ್ದಾರೆ. ಇವರು ಚನ್ನರಾಯಪಟ್ಟಣ ತಾಲೂಕಿನ ನಲ್ಲೂರು ಗ್ರಾಮದ ನಿವಾಸಿಯಾಗಿದ್ದಾರೆ.

# ಶೈಕ್ಷಣಿಕ ಪ್ರಗತಿಗೆ ಅವಿರತ ಶ್ರಮ



ಶಿಕ್ಷಣ ಕ್ಷೇತ್ರದಲ್ಲಿ ಸುಮಾರು ಮೂರು ದಶಕಗಳ ಕಾಲ ಸೇವೆ ಸಲ್ಲಿಸಿ ಮಕ್ಕಳ ಭವಿಷ್ಯ ರೂಪಿಸಿದ ಶರಣಪ್ಪ ಬಿರಾದಾರ್ ಅವರ ವಿಶ್ರಾಂತ ಜೀವನ ಸುಖಮಯವಾಗಿರಲಿ.

– ಶಶಿಧರ ಕೋಸಂಬೆ ಸದಸ್ಯರು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.30:ತಾಲೂಕಿನ ಬಾಜೋಳಗಾ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಸಹ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಶರಣಪ್ಪ ಬಿರಾದಾರ್ ಅವರನ್ನು ಗ್ರಾಮಸ್ಥರು,ಶಾಲಾ ಉಸ್ತುವಾರಿ ಸಮಿತಿ, ಶಾಲೆಯ ಸಿಬ್ಬಂದಿ ವತಿಯಿಂದ ಸೋಮವಾರ ಆತ್ಮೀಯವಾಗಿ ಬೀಳ್ಕೊಡುಗೆ ನೀಡಿದರು.

ಗ್ರಾಮದ ಬೀದಿಗಳಲ್ಲಿ ಭಾಜ ಭಜಂತ್ರಿಯೊಂದಿಗೆ ಮೆರವಣಿಗೆ ನಡೆಸಿ ವಯೋನಿವೃತ್ತಿ ಹೊಂದಿದ ಶರಣಪ್ಪ ಬಿರಾದಾರ್ ದಂಪತಿಗಳನ್ನು ಸತ್ಕರಿಸಿ ಸಂಭ್ರಮದಿಂದ ಬೀಳ್ಕೊಟ್ಟರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ಮಾತನಾಡಿ, ಈ ಶಾಲೆಯಲ್ಲಿ ಸುದೀರ್ಘ 27 ವರ್ಷಗಳ ಕಾಲ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಶರಣಪ್ಪ ಬಿರಾದಾರ್ ಅವರು ಸಾವಿರಾರು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅವಿರತವಾಗಿ ಶ್ರಮ ವಹಿಸಿದ್ದಾರೆ.

ಅವರು ಸೇವೆಯಿಂದ ನಿವೃತ್ತಿ ಹೊಂದಿದ್ದರೂ ಕೂಡ ವಿದ್ಯಾರ್ಥಿಗಳ ಮನಸ್ಸಿನಲ್ಲಿ ಶಾಶ್ವತವಾಗಿ ಸ್ಥಾನ ಪಡೆದುಕೊಳ್ಳುತ್ತಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ

ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ವೆಂಕಟರಾವ ಬಿರಾದಾರ್, ನಿವೃತ್ತ ಪ್ರಾಧ್ಯಾಪಕ ಚಂದ್ರಶೇಖರ ಬಿರಾದಾರ್, ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ನ ಆಡಳಿತಾಧಿಕಾರಿ ಮೋಹನ ರೆಡ್ಡಿ, ಕುಸುಮಕುಮಾರಿ ರೆಡ್ಡಿ, ಧನರಾಜ ಬಂಬುಳಗೆ ಸೇರಿದಂತೆ ಮುಂತಾದವರು ಇದ್ದರು.

# ಪುನರುಜ್ಜೀವನ ತುರ್ತು ಚಿಕಿತ್ಸೆ ಕಾರ್ಯಾಗಾರ




ಬೀದರ. ಜೂ. 30 : ರೋಟರಿ ಕ್ಲಬ ಬೀದರ ನ್ಯೂ ಸೆಂಚುರಿ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ನಿಗಮ ಬೀದರ ವಿಭಾಗದ ಸಹ ಭಾಗೀತ್ವದಲ್ಲಿ ಇತ್ತೀಚಿಗೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಬೀದರ ಘಟಕ–1ರಲ್ಲಿ ಹಮ್ಮಿಕೊಂಡಿದ್ದ "ಹೃದಯ ಶ್ವಾಸಕೋಶದ ಪುನರುಜ್ಜೀವನ ತುರ್ತು ಚಿಕಿತ್ಸೆ ಕಾರ್ಯಾಗಾರ" ಕ್ಕೆ ಕಕರಸಾ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಕಾಂತ ಫುಲೇಕರ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸವನ್ನು ಡಾ.ಸಂಗಮೇಶ ಕುಣಕೇರಾ, ಡಾ.ಶ್ವೇತಾ ಕುಣಕೇರಾ,ಡಾ.ವೈಭವ ಭದಭದೆ,ಡಾ.ನಾಗೇಶ ಪಾಟೀಲ ಅವರುಗಳು ನೀಡಿದರು.ಬೀದರ ವಿಭಾಗದ ಸಾರಿಗೆ ಅಧಿಕಾರಿಗಳು, ಘಟಕ ವ್ಯವಸ್ಥಾಪಕರು ಹಾಗೂ ಸಿಬ್ಬಂದಿಗಳು ಭಾಗವಹಿಸಿ ಕಾರ್ಯಕ್ರಮದ ಸದುಪಯೊಗ ಪಡೆದುಕೊಂಡರು.ಈ ಸಂದರ್ಭದಲ್ಲಿ ಶಿವಕುಮಾರ ಪಾಕಲ, ಪ್ರಭು ತಟಪಟ್ಟಿ ಸೇರಿದಂತೆ ಇತರರು ಉಪಸ್ತಿತರಿದ್ದರು.

# ಸೌಲಭ್ಯ ಪಡೆಯಲು ಯುಡಿಐಡಿ ಕಾರ್ಡ್ ಕಡ್ಡಾಯ:ರಾಠೋಡ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಜೂ.30:ಪ್ರತಿ ಮಗುವಿನಲ್ಲಿ ಅದರೆಯಾಗಿರುತಕ್ಕಂತಹ ಪ್ರತಿಭೆಯನ್ನು ಅಡಗಿರುತ್ತದೆ ವಿಕಲಚೇತನರಲ್ಲಿ ವಿಶೇಷವಾಗಿರತಕ್ಕಂತ ಪ್ರತಿಭೆ ಅಡಗಿದು ಹಲವಾರು ಕ್ಷೇತ್ರಗಳಲ್ಲಿ ಸಾಮಾನ್ಯ ಮಕ್ಕಳಿಗೆ ಮೀರಿಸುವ ಸಾಧನೆ ಮಾಡಿರುವುದು ವಿಕಲಚೇತನ ಮಕ್ಕಳು, ವಿಕಲಚೇತನರಿಗೆ ಅವಕಾಶ ನೀಡುವುದರ ಮೂಲಕ ಸರ್ಕಾರದ ಸೌಲಭ್ಯಗಳನ್ನು ಪಡೆದು ಮುಖ್ಯ ವಾಹಿನಿಗೆ ತರುವ ಕಾರ್ಯ ನಾವೆಲ್ಲರೂ ಮಾಡಬೇಕಾಗಿದೆ ಎಂದು ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಕಾಶ್ ರಾಥೋಡ್ ಅಭಿಪ್ರಾಯಪಟ್ಟರು.

ಶಾಲಾ ಶಿಕ್ಷಣ ಇಲಾಖೆಯ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆ ಅಡಿಯಲ್ಲಿ ಸಮನ್ವಯ ಶಿಕ್ಷಣದ ವಿಭಾಗದಿಂದ ಇಂದು ಕ್ಷೇತ್ರ ಸಂಪನ್ಮೂಲ ಕೇಂದ್ರ ಔರಾದನಲ್ಲಿ ತೀವ್ರ ನ್ಯೂನತೆಗೆ ಒಳಗಾಗಿರುವ ವಿಕಲಚೇತನ ಮಕ್ಕಳಿಗೆ, ಅಗತ್ಯತೆಯ ಸಾಮಗ್ರಿಗಳನ್ನು ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಸಾಮಗ್ರಿಗಳನ್ನು ವಿತರಿಸಿದರು.

ಕ್ಷೇತ್ರ ಸಮನ್ವಯ ಶಿಕ್ಷಣದ ಸಂಪನ್ಮೂಲ ವ್ಯಕ್ತಿಗಳಾದ ಡಾ ಶಾಲಿವಾನ ಉದಗಿರೆ ಪ್ರಸ್ತಾವಿಕ ಮಾತನಾಡಿ ಸಮನ್ವಯ ಶಿಕ್ಷಣದ ಸರ್ಕಾರದ ಯೋಜನೆಗಳು ಪಾಲಕರು ಮತ್ತು ಶಿಕ್ಷಕರು ಅರಿತುಕೊಂಡು ಅದರ ಪ್ರಯೋಜನ ಪಡೆದುಕೊಳ್ಳಿ , ವಿಕಲಚೇತನ ಮಕ್ಕಳು ಕಡ್ಡಾಯ ಸರ್ಕಾರಿ ಶಾಲೆಯಲ್ಲಿ ದಾಖಲಾತಿ ಹೊಂದಿರಬೇಕು, ಎಸ್‌ಟಿಎಸ್‌ನಲ್ಲಿ ವಿಕಲತೆಯ ವಿಧ ನಮೂದು ಮಾಡಿರಬೇಕು, ಆಧಾರ ಕಾರ್ಡ್ ಮತ್ತು ಯುಡಿಐಡಿ ಕಾರ್ಡ್ ಹೊಂದಿರುವ ಮಕ್ಕಳಿಗೆ ಮಾತ್ರ ಸರ್ಕಾರಿ ಸೌಲಭ್ಯ ಸಿಗುತ್ತದೆ ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾದ ಡೋಂಬಾಳೆ ರಮೇಶ,ಎಂಡಿ ನೈಮೋದ್ದೀನ್ ಲಿಂಬಾಪುರೆ, ಶಶಿಕಾಂತ ಬಿಡವೆ, ಇಸಿಓ ಸಂಜಯ ಮೇತ್ರೆ, ಸಂತೋಷ್ ರೆಡ್ಡಿ ಯಾಮಲೆ ವಿಕಲಚೇತನ ಮಕ್ಕಳು, ಪಾಲಕರು, ಸಿ ಆರ್ ಪಿ, ಶಿಕ್ಷಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಜು.1 ರಿಂದ ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ ತಂಡದ ಬೀದರ ಜಿಲ್ಲಾ ಪ್ರವಾಸ

ಬೀದರ. ಜೂ. 30 : ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ ಅಧ್ಯಕ್ಷರನ್ನೊಳಗೊಂಡಂತೆ ಒಟ್ಟು 08 ಜನ ಸದಸ್ಯರುಗಳು, ಪರಿಷತ್ತಿನ ಅಧಿಕಾರಿ/ಸಿಬ್ಬಂದಿಗಳು ಹಾಗೂ ವರದಿಗಾರರು ಸೇರಿದಂತೆ ಒಟ್ಟು 07 ಜನರನ್ನು ಹೊಂದಿರುವ ತಂಡವು ಜುಲೈ.1ರಿಂದ ಜುಲೈ.3 ರವರೆಗೆ ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದೆ ಎಂದು ಕರ್ನಾಟಕ ವಿಧಾನ ಪರಿಷತ್ತು ಕಾರ್ಯದರ್ಶಿ–2 ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜುಲೈ.1 ರಂದು ಬೆಳಿಗ್ಗೆ 7.30 ಗಂಟೆಗೆ ಬೆಂಗಳೂರಿನಿಂದ ನಿರ್ಗಮಿಸಿ ಬೆಳಿಗ್ಗೆ 9.30 ಗಂಟೆಗೆ ಬೀದರ ಆಗಮಿಸಿ ವಾಸ್ತವ್ಯ ಮಾಡಲಿದ್ದಾರೆ.

ಜುಲೈ.2ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಸಭೆ ಸೇರಿ ಸರ್ಕಾರದಿಂದ ಶಿಷ್ಠಾಚಾರ ಪಾಲನೆ ಕುರಿತು ಹೊರಡಿಸಲಾಗಿರುವ ಆದೇಶ, ಸುತ್ತೋಲೆ/ಮಾರ್ಗಸೂಚಿಗಳನ್ನು ಪಾಲಿಸದೆ ಶಿಷ್ಠಾಚಾರ ಉಲ್ಲಂಘನೆ ಪ್ರಕರಣಗಳು ಪದೇ ಪದೇ ಮರುಕಳಿಸುತ್ತಿರುವ ಹಾಗೂ ಶಾಸಕರಾದ ಭೀಮರಾವ ಬಸವರಾಜ ಪಾಟಿಲ ಅವರಿಗೆ ಬೀದರ ಜಿಲ್ಲೆಯ ಔರಾದ ನಗರದಲ್ಲಿ ಕಛೇರಿ ಒದಗಿಸುವ ಕುರಿತು ಸ್ಥಳೀಯ ವಿಧಾನ ಪರಿಷತ್ತಿನ ಶಾಸಕರುಗಳ ಉಪಸ್ಥಿತಿಯಲ್ಲಿ ಹಾಗೂ ತಮ್ಮ ಸಮ್ಮುಖದಲ್ಲಿ ಜಿಲ್ಲಾಮಟ್ಟದ ಎಲ್ಲಾ ಇಲಾಖೆಗಳ ಮುಖ್ಯಸ್ಥರು, ಜಿಲ್ಲಾ ಪಂಚಾಯತ್

ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾದಿಕಾರಿಗಳು ಹಾಗೂ ಕಾರ್ಪೋರೇಷನ್/ ಮುನಿಸಿಪಾಲಿಟಿ ಆಯುಕ್ತರುಗಳೊಂದಿಗೆ ಚರ್ಚಿಸಲಾಗುತ್ತದೆ.

# ಹಿರಿಯ ನಾಗರಿಕರು ಸಮಾಜದ ಆಸ್ತಿ: ಬಸವರಾಜ ಮರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.30: ಪಿಂಚಣಿ ವ್ಯವಸ್ಥೆ ರದ್ದುಗೊಳಿಸಬಾರದು ಎಂದು ಆಗ್ರಹಿಸಿ ತಾಲೂಕ ನಿವೃತ್ತ ನೌಕರರ ಸಂಘದಿಂದ ಕೇಂದ್ರ ಸರ್ಕಾರಕ್ಕೆ ಬರೆದ ಮನವಿ ಪತ್ರವನ್ನು ಶಿರಸ್ತೇದಾರ ಗೋಪಾಲ ಹಿಪ್ಪರಗಿ ಅವರಿಗೆ ಸಲ್ಲಿಸಲಾಯಿತು.

ಕೇಂದ್ರ ಸರ್ಕಾರ ಈ ಬಗ್ಗೆ ಮಸೂದೆ ಮಂಡನೆಗೆ ಸಿದ್ಧತೆ ಮಾಡಿಕೊಳ್ಳುತ್ತಿರುವುದು ಸರಿಯಲ್ಲ. ಇದರಿಂದ ಅನೇಕರು ಮುಪ್ಪಿನಾವಸ್ಥೆಯಲ್ಲಿ ಕಷ್ಟ ಅನುಭವಿಸಬೇಕಾಗುತ್ತದೆ. ಹಿರಿಯ ನಾಗರಿಕರು ಸಮಾಜದ ಆಸ್ತಿ ಎನ್ನುವುದನ್ನು ಸರಕಾರ ಮರೆಯಬಾರದು. ನಿವೃತ್ತಿ ಪಿಂಚಣಿಯಿಂದ ಜೀವನ ನಿರ್ವಹಿಸುವವರು ಅನೇಕರು. ಅವರಿಗೆ ತೊಂದರೆಯಾಗದಂತೆ ಸರಕಾರ ಗಮನಹರಿಸಬೇಕೆಂದು ನಿವೃತ್ತ ನೌಕರರ ಸಂಘದ ಅಧ್ಯಕ್ಷರಾದ ಬಸವರಾಜ ಮರೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಶಾಂತವೀರ್ ಪಾಟೀಲ್, ಶಿವಾನಂದ ಗುಂದಗೆ ,ಮಲ್ಲಿಕಾರ್ಜುನ್ ಬಿರಾದಾರ್, ಅಶೋಕ ಕಾರಬಾರಿ,ಬಸವರಾಜ ಅಂಬರಶೆಟ್ಟಿ,

ಜೈ ರಾಜ್ ಬಿರಾದಾರ, ವಿಶ್ವನಾಥ್ ಬೆಳಕೆರೆ, ಷಣ್ಮುಖಪ್ಪ ಮಾಶೆಟ್ಟಿ ಜಿ ಆರ್ ವಾಲಿ, ಶಂಭುಲಿಂಗ ಕಾಮಣ್ಣ ಶಿವರಾಜ್ ಜೊತಪ್ಪ,ಗುಂಡಪ್ಪ ಸಂಗಮಕರ ಇನ್ನಿತರರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಸಚಿವರ ವಿರುದ್ಧ ಬಹಿರಂಗ ಆರೋಪ



ಬೀದರ. ಜೂ. 30 : ಬೀದರ್ ಕಾಂಗ್ರೆಸ್ ನಲ್ಲಿ ಭಿನ್ನಮತ ಸ್ಫೋಟಗೊಂಡಿದ್ದು, ಹಿರಿಯ ನಾಯಕರು ಕೂಡ ತಲೆ ಕೆಡಿಸಿಕೊಳ್ಳುವಂತಾಗಿದೆ. ಬಿಜೆಪಿ ಶಾಸಕರು ಹಾಗೂ ಕಾಂಗ್ರೆಸ್ ಸಚಿವರ ಒಳ ಒಪ್ಪಂದದಿಂದಾಗಿ ಭಿನ್ನಮತ ಸ್ಫೋಟಗೊಂಡಿದೆ ಎಂಬ ಆರೋಪ ಕೇಳಿ ಬಂದಿದೆ.

ಕಳೆದ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಬಿಜೆಪಿ ಶಾಸಕರು ಬೆಂಬಲಿಸಿದ್ದಾರೆಂಬ ಆರೋಪ ಕೇಳಿ ಬಂದಿದೆ.

ಮಗನ ಗೆಲುವಿಗಾಗಿ ಬಿಜೆಪಿ ಶಾಸಕರು, ಕಾರ್ಯಕರ್ತರಿಗೆ ಸಚಿವ ಈಶ್ವರ್ ಖಂಡ್ರೆ ಅಭಯಹಸ್ತ ಚಾಚಿದ್ದಾರೆ. ಹೀಗಾಗಿ ಬಿಜೆಪಿ ಶಾಸಕರು ಸಹಾಯ ಮಾಡಿದ್ದಾರೆಂಬ ಆರೋಪ ಕೇಳಿ ಬಂದಿದೆ.

2023ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಸೋಲಿಗೆ ಸಚಿವ ಈಶ್ವರ್ ಖಂಡ್ರೆ ಕಾರಣ ಎಂದು ಹಲವರು ಆರೋಪಿಸುತ್ತಿದ್ದಾರೆ. ಅತೃಪ್ತರ ಸಭೆ ನಿನ್ನೆ ಖಾಸಗಿ ಹೋಟೆಲ್ ನಲ್ಲಿ ನಡೆದಿದ್ದು, ಈ ವೇಳೆ ಅತೃಪ್ತರು ಬಹಿರಂಗವಾಗಿ ಆರೋಪಿಸಿದ್ದಾರೆ.

ಮಾಜಿ ಸಚಿವ ರಾಜಶೇಖರ್ ಪಾಟೀಲ್ ಸಮ್ಮುಖದಲ್ಲೇ ಮಾಜಿ ಎಂಎಲ್‌ಸಿ ಅರವಿಂದಕುಮಾರ್ ಅರಳಿ ಬಹಿರಂಗವಾಗಿ ಅಸಮಾಧನ ವ್ಯಕ್ತಪಡಿಸಿದ್ದಾರೆ. 2023ರ ವಿಧಾನಸಭೆ ಚುನಾವಣೆಯಲ್ಲಿ ಸಚಿವ ಈಶ್ವರ್ ಖಂಡ್ರೆ ಕೆಪಿಸಿಸಿ ಕಾರ್ಯಾಧ್ಯಕ್ಷರಾಗಿದ್ದರು. ಅವರಿದ್ದಾಗಲೇ ಜಿಲ್ಲೆಯ 6 ಕ್ಷೇತ್ರಗಳ ಪೈಕಿ ಕೇವಲ 2 ಕ್ಷೇತ್ರಗಳಲ್ಲಿ ಮಾತ್ರ ಗೆದ್ದಿದ್ದೇವೆ. ವಿಧಾನಸಭೆ ಚುನಾವಣೆಯಲ್ಲಿ ಬೀದರ್‌ನ 4 ಕ್ಷೇತ್ರಗಳಲ್ಲಿ ಸೋಲು ಕಂಡಿದ್ದೇವೆ. ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಸೋತ ಕ್ಷೇತ್ರದಲ್ಲೇ ಕೈ ಅಭ್ಯರ್ಥಿಗೆ ಹೆಚ್ಚು ಮತ ಬಂದಿವೆ. ಅದು ಹೇಗೆ ಎಂದು ಪ್ರಶ್ನಿಸಿದ್ದಾರೆ.

ಬಿಜೆಪಿಯವರು ಸಪೋರ್ಟ್ ಮಾಡಿದ್ದಾರೆ ಎಂದು ಖುದ್ದು ಜಿಲ್ಲಾ ಉಸ್ತುವಾರಿ ಸಚಿವರೇ ಹೇಳಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಕಾರ್ಯಕರ್ತರು ಉಪವಾಸ–ವನವಾಸ ಬಿದ್ದು ಹಗಲಿರುಳು ಶ್ರಮಿಸಿದ್ದಾರೆ. ಗೆದ್ದ ಮೇಲೆ ಬಿಜೆಪಿಯವರು ಸಪೋರ್ಟ್ ಮಾಡಿದ್ದಾರೆ ಅಂದ್ರೆ ಕಾರ್ಯಕರ್ತರಿಗೆ ಅವಮಾನ ಮಾಡಿದ ಹಾಗೆ ಅಲ್ವಾ? ಇವತ್ತು, ನಾಳೆ ಸರಿ ಹೋಗುತ್ತೆ ಅಂತಾ ಸುಮ್ಮನಿದ್ದೇವು. ಆದರೆ, ಇದು ಈಗ ಜಾಸ್ತಿ ಆಗುತ್ತಿದೆ. ನಾವು ಪಕ್ಷದಲ್ಲಿ ವೈಮನಸ್ಸು, ಭಿನ್ನಮತ ಬೇಡ ಅಂತಾ ಸಭೆ ಮಾಡುತ್ತಿದ್ದೇವೆ ಎಂದು ಸಚಿವ ಈಶ್ವರ್ ಖಂಡ್ರೆ ವಿರುದ್ಧ ಗಂಭೀರವಾದ ಆರೋಪ ಮಾಡಿದ್ದಾರೆ.

# ಬೀದರ್ ನಗರದಲ್ಲಿ ಸಂಭ್ರಮದಿಂದ ಜಗನ್ನಾಥ ರಥಯಾತ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 30 : ಬೀದರ್ ನಗರದಲ್ಲಿ ಭಾನುವಾರ ಜಗನ್ನಾಥ ದೇವರ ರಥಯಾತ್ರೆ ಅತ್ಯಂತ ಸಡಗರ, ಸಂಭ್ರಮದಿಂದ ಜರುಗಿತು.

ರಾಂಪೂರೆ ಕಾಲೊನಿಯ ಲಕ್ಷ್ಮಿ ಸತ್ಯನಾರಾಯಣ ಮಂದಿರದಿಂದ ಆರಂಭಗೊಂಡ ರಥಯಾತ್ರೆ, ಬಿ.ವಿ. ಭೂಮರಡ್ಡಿ ಕಾಲೇಜು, ಬೊಮ್ಮಗೊಂಡೇಶ್ವರ ವೃತ್ತ, ಬಸವೇಶ್ವರ ವೃತ್ತ, ಭಗವಾನ್ ಮಹಾವೀರ ವೃತ್ತ,ಡಾ.ಬಿ.ಆರ್. ಅಂಬೇಡ್ಕರ್ ವೃತ್ತದ ಮೂಲಕ ಚಿಕ್ಕಪೇಟೆ ರಿಂಗ್‌ರೋಡ್ ನಲ್ಲಿರುವ ಜಗನ್ನಾಥ ಮಂದಿರದ ವರೆಗೆ ಸಾಗಿತು.

ಕಿರಿಯರಿಂದ ಹಿರಿಯರ ವರೆಗೆ ಎಲ್ಲರೂ ಶ್ರದ್ಧಾ, ಭಕ್ತಿಯಿಂದ ತೇರೆ ಎಳೆದರು. 'ಜೈ ಜಗನ್ನಾಥ' ಎಂದು ಘೋಷಣೆ ಹಾಕಿದರು. ಮಾರ್ಗದುದ್ದಕ್ಕೂ ಯುವತಿಯರು,ಮಹಿಳೆಯರು ಭಕ್ತಿಯಿಂದ ಹೆಜ್ಜೆ ಹಾಕಿದರು.

ಯುವಕರು ಶ್ವೇತ ವರ್ಣದ ಕುರ್ತಾ ಪೈಜಾಮ ಧರಿಸಿ ಗಮನ ಸೆಳೆದರೆ, ಮಹಿಳೆಯರು ಹಳದ ಬಣ್ಣದ ರವಿಕೆ, ಹಸಿರು ಬಣ್ಣದ ಸೀರೆಗಳಿಂದ ಕಂಗೊಳಿಸಿದರು. ರಥಯಾತ್ರೆಯುದ್ದಕ್ಕೂ 'ಜೈ ಜಗನ್ನಾಥ, ಜೈ ಜಗನ್ನಾಥ' ಎನ್ನುತ್ತ ಸಂಭ್ರಮಿಸಿದರು.

ರಥಯಾತ್ರೆ ಸಾಗಿದ ರಾಂಪೂರೆ ಕಾಲೊನಿಯ ಮುಖ್ಯರಸ್ತೆಯುದ್ದಕ್ಕೂ ಮಹಿಳೆಯರು ರಂಗೋಲಿ ಬಿಡಿಸಿದ್ದರು. ನಗರದ ಮೈಲೂರ ಕ್ರಾಸ್‌ನಲ್ಲಿ ವೇದಿಕೆ ನಿರ್ಮಿಸಿ, ರಥದ ಮೇಲೆ ಹೂಮಳೆಗರೆದು ಸ್ವಾಗತಿಸಲಾಯಿತು. ಪಾನಕ, ಪ್ರಸಾದ ವಿತರಿಸಲಾಯಿತು.

ಅಲಂಕರಿಸಿದ ರಥದಲ್ಲಿ ಬಲರಾಮ, ಸುಭದ್ರೆ ಮತ್ತು ಕೃಷ್ಣನ ಮೂರ್ತಿಗಳ ಶೋಭಾಯಾತ್ರೆ ನಡೆಯಿತು. ರಸ್ತೆಯುದ್ದಕ್ಕೂ ಭಕ್ತರು ಭಗವಂತನ ಮೇಲೆ ಪುಷ್ಪವೃಷ್ಟಿ ಮಾಡಿ, ಆರತಿ, ಕಾಯಿ ಕರ್ಪೂರ, ನೈವೇದ್ಯ ಸಮರ್ಪಿಸಿದರು. ರಥಯಾತ್ರೆಗೂ ಮುನ್ನ ಲಕ್ಷ್ಮಿ ಸತ್ಯನಾರಾಯಣ ಮಂದಿರದಲ್ಲಿ ವಿಶೇಷ ಪೂಜೆ ನೆರವೇರಿಸಿದರು.

ಉತ್ತರ ಪ್ರದೇಶದ ಇಸ್ಕಾನ್ ವೃಂದಾವನದ ಭಕ್ತಿ ಕಿಂಕರ ದಾಮೋದರ ಗೋಸ್ವಾಮಿ, ರಥಯಾತ್ರೆ ಉತ್ಸವ ಸಮಿತಿ ಗೌರವ ಅಧ್ಯಕ್ಷ ರಾಮಕೃಷ್ಣನ್ ಸಾಳೆ, ರಥಯಾತ್ರೆ ಸಮಿತಿ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ, ವೀರಶೆಟ್ಟಿ ಮಣಗೆ, ಶಿವರಾಮ ಜೋಷಿ, ರಾಜಕುಮಾರ ಅಳ್ಳೆ, ನಿಲೇಶ ದೇಶಮುಖ,ಸುನೀಲ ಶರ್ಮಾ ಮತ್ತಿತರರು ಹಾಜರಿದ್ದರು. ಸಂಜೆ ಜಗನ್ನಾಥ ಮಂದಿರದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.


# ಶಿವಾನಿ ಶಿವದಾಸ್ ಸ್ವಾಮಿಯವರಿಗೆ ಹಾರಕೂಡ ಶ್ರೀಗಳಿಂದ ಒಂದು ತೊಲಿ ಚಿನ್ನ ನೀಡಿ ಸತ್ಕಾರ.



(ವರದಿ. ಡಿ. ಕೆ. ಪ್ರಹ್ಲಾದ.)
ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ ಜೂ; 30–ಜೀ ಕನ್ನಡ ವಾಹಿನಿಯ ಸರಿಗಮಪ ಸೀಜನ್ 21ರ ವಿಜೇತೆ ಕುಮಾರಿ ಶಿವಾನಿ ಶಿವದಾಸ್ ಸ್ವಾಮಿ ಬೀದರ ಅವರನ್ನು ಹಾರಕೂಡ ಶ್ರಿ ಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು 1 ತೊಲಿ ಚಿನ್ನದ ಉಂಗುರವನ್ನಿಟ್ಟು ಸೋಮವಾರ ಶ್ರೀಮಠದಲ್ಲಿ ಸತ್ಕರಿಸಿ ಆಶೀರ್ವದಿಸಿದರು.ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿ, ಬಿ. ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಶಿವದಾಸ ಸ್ವಾಮಿ, ಹಾರಕೂಡ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಮಹಾದೇವ ಪೂಜಾರಿ ಹಾಗೂ ಕವಿತಾ ಸ್ವಾಮಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಮೈಸಲಗಾ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ತಡೆಗೆ ಒತ್ತಾಯ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜೂ 30 ತಾಲೂಕಿನ ಮೈಸಲಗಾ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ನಡೆಯುತ್ತಿರುವ ತಡೆಗೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಇಲ್ಲಿನ ಬಹುಜನ ಸಮಾಜ ಪಕ್ಷದ ವತಿಯಿಂದ ಒತ್ತಾಯಿಸಿದೆ ಈ ಸಂಬಂಧ ಅಬಕಾರಿ ಇಲಾಖೆಯ ಕಚೇರಿಗೆ ತೆರಳಿದ ಪಕ್ಷದ ಸ್ಥಳೀಯ ಘಟಕದ ಪದಾಧಿಕಾರಿಗಳ ನಿಯೋಗ ಬೇಡಿಕೆ ಕುರಿತು ಸ್ಥಳದಲ್ಲಿ ಅಬಕಾರಿ ಉಪ ನಿರೀಕ್ಷಕ ಅವರಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಬಿಎಸ್ಪಿ ತಾಲೂಕು ಅಧ್ಯಕ್ಷರಾದ ಶಂಕರ್ ಫುಲೆ. ಗ್ರಾಮದ ಪ್ರಮುಖರು ಹಾಗೂ ಮಹಿಳೆಯರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಅತಿಥಿ ಉಪನ್ಯಾಸಕರನ್ನು ಆಯ್ಕೆ ಪ್ರಕ್ರಿಯೆ ಪರಿಗಣಿಸಬೇಕೆಂದು ಅಗ್ರಹಿಸಿ ಜುಲೈ 10 ರಂದು ಬೃಹತ್ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– 2025 – 26ನೇ ಶೈಕ್ಷಣಿಕ ಸಾಲಿನ ಸರಕಾರಿ ಪದವಿ ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರ ಅಯ್ಕೆ ಪ್ರಕ್ರಿಯೆಗೆ ಈಗಾಗಲೇ ಅರ್ಜಿ ಅಹ್ವಾನಿಸಿದ್ದು ಸ್ವಾಗತಾರ್ಹ ಆದರೆ ಶೈಕ್ಷಣಿಕ ಅರ್ಹತೆ ಮತ್ತು ಸೇವಾನುಭವ ಇದ್ದವರನ್ನು ಮಾತ್ರ ಅಯ್ಕೆಗೆ ಪರಿಣಿಸಲಾಗುವುದು ಎಂದು ಉನ್ನತ ಶಿಕ್ಷಣ ಇಲಾಖೆ ತಿಳಿಸಿರುವುದು ಸಮಂಜಸವಲ್ಲ ಎಂದು ರಾಜ್ಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ಜಿಲ್ಲಾ ಅಧ್ಯಕ್ಷ ಅನೀಲಕುಮಾರ ಸಿಂಧೆ ರಾಜ್ಯಸರ್ಕಾರಕ್ಕೆಒತ್ತಾಯಿಸಿದ್ದಾರೆ. ಈಗಾಗಲೇ 10–15 ವರ್ಷಗಳಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬೋಧನೆ ಮಾಡಿದ ಅನುಭವ ಇರುವ ಮತ್ತು ಶೈಕ್ಷಣಿಕ ಅರ್ಹತೆ ಇಲ್ಲದ ಅನೇಕ ಅತಿಥಿ ಉಪನ್ಯಾಸಕರು ಸರಕಾರದ ಈ ಕ್ರಮದಿಂದ ಅತಂತ್ರರಾಗಿ ಬೀದಿಗೆ ಬರುವ ಪರಿಸ್ಥಿತಿ ಕಣ್ಣೆದುರಿಗಿದೆ ಸಚಿವರು ಮತ್ತು ಸರಕಾರ ಅತಿಥಿ ಉಪನ್ಯಾಸಕರ ಪರ ಇದ್ದರೂ ಇಲಾಖೆಯ ಅಯಕಟ್ಟಿನ ಹುದ್ದೆಗಳಲ್ಲಿರುವ ಕೆಲವು ಅಧಿಕಾರಿಗಳು ಸರಕಾರದ ಹಾದಿ ತಪ್ಪಿಸುವ ಮೂಲಕ ಅತಿಥಿ ಉಪನ್ಯಾಸಕರ ಆಯ್ಕೆಪ್ರಕ್ರಿಯೆಯಲ್ಲಿ ಪದೇ ಪದೇ ಕಾನೂನು ತೊಡಕು ಉಂಟು ಮಾಡುವ ಮೂಲಕ ಅತಿಥಿ ಉಪನ್ಯಾಸಕರ ಬದುಕಿನ ಜೊತೆ ಚೆಲ್ಲಾಟ ಆಡುತ್ತಿದ್ದಾರೆ. ಇದು ಕೊನೆಗಾಣಬೇಕು ಅತಿಥಿ ಉಪನ್ಯಾಸಕರ ಅಯ್ಕೆಗೆ ಎಂ.ಫಿಲ್ ಪದವಿಯನ್ನು ಶೈಕ್ಷಣಿಕ ಅರ್ಹತೆ ಎಂದು ಪರಿಗಣಿಸಬೇಕು ಈ ಮೂಲಕ ನೂರಾರು ಜನ ಎಂ ಫಿಲ್ ಪದವೀಧರರ ಅತಂಕಕ್ಕೆ ತೆರೆ ಎಳೆಯಬೇಕು ಜೊತೆಗೆ ಶೈಕ್ಷಣಿಕ ಅರ್ಹತೆ ಗಳಿಸಲು ಮತ್ತಷ್ಟೂ ಕಾಲವ ಕಾಶ ನೀಡಬೇಕು ಈ ಬಗ್ಗೆ ಉನ್ನತ ಶಿಕ್ಷಣ ಇಲಾಖೆ ಬಂದು ವಾರದೊಳಗೆ ಸ್ಪಷ್ಟ ಮಾಹಿತಿ ನೀಡಿ ಕಾನೂನು ತೊಡಕುಗಳಿಗೆ ಎಡೆ ಮಾಡದೇ ಎಲ್ಲ ಅತಿಥಿ ಉಪನ್ಯಾಸಕರು ಅನಿರ್ದಿಷ್ಟಾವಧಿ ಹೋರಾಟ ನಡೆಸುವುದು. ಅನಿವಾರ್ಯ ಮತ್ತು ಶತಸಿದ್ಧ ಎಂದು ಈ ಮೂಲಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅಥಿತಿ ಉಪನ್ಯಾಸಕರ ಸಂಘ ಇಲಾಖೆಯ ಅಧಿಕಾರಿಗಳನ್ನು ಎಚ್ಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಬಾಲಾಜಿ, ಚಂದ್ರಕಾಂತ ನಾರಾಯಣಪುರ, ಜಗದೀಶ ಬಡಗೇರ, ಧನರಾಜ ತುಳಮೆ, ಭಂಡಯ್ಯಾ ಸ್ವಾಮಿ, ಅಮರ ದೀಪ, ದೇವರಾಜ, ಬಸವರಾಜ, ವೆಂಕಟ ಜಾಧವ, ಶರಣಪ ಬಗದುರಗೆ, ಅನೀಲ ಬೋಸಲ್ಲೆ, ಸಚಿನ ಕಟ್ಟಿಮನಿ, ಮಲ್ಲಿಕಾರ್ಜುನ್ ತಿರಲಾಪೂರ, ಡಾ ಗಾಯತ್ರಿ, ಗಂಗು, ಡಾ ಬೇಬಿ, ಡಾ ಸಂಗೀತಾ, ಸೇರಿದಂತೆ ಇತರರು ಉಪಸ್ಥಿತರಿದ್ದರು.



> ಸರ್ಕಾರದ ಈ ಆದೇಶದಿಂದ 5 ಸಾವಿರಕ್ಕೂ ಹೆಚ್ಚು ಅತಿಥಿ ಉಪನ್ಯಾಸಕರ ಬದುಕು ಬೀದಿಗೆ ಬೀಳಲಿದೆ ಆದ್ದರಿಂದ ಸರ್ಕಾರ ನಿಯಮ ಬದಲಿಸದಿದ್ದಲ್ಲಿ ಬೃಹತ ಹೋರಾಟ ನಡೆಸಲಾಗುವುದು.
> **–ಜಿಲ್ಲಾಧ್ಯಕ್ಷ ಅನೀಲಕುಮಾರ ಸಿಂಧೆ**

> ಸರ್ಕಾರವು ಮಾನವೀಯತೆ ದೃಷ್ಟಿಯಿಂದ ನಿಯಮ ಸಡಿಲ ಮಾಡಿ ಸೇವೆಯಲ್ಲಿ ಮುಂದುವರಿಯಲು ಅವಕಾಶ ನೀಡಬೇಕು ಇಲ್ಲದಿದ್ದರೆ ಅತ್ಮಹತ್ಯೆಯೊಂದೇ ನಮ್ಮ ಮುಂದಿರುವ ಆಯ್ಕೆ.
> –ವಾಣಿಶ್ರೀ
> **ನೊಂದ ಅತಿಥಿ ಉಪನ್ಯಾಸಕಿ**

# ಜುಲೈ 2ರಂದು ಡಾ. ಫಾ ಗು ಹಳಕಟ್ಟಿ ಹಾಗೂ ಸ್ವಾಮಿ ಲಿಂಗಾನಂದರ ಸಂಸ್ಮರಣೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜೂ 30 ನಗರದಲ್ಲಿ ದಿನಾಂಕ: 02–07–2025ರಂದು ಸಂಜೆ: 5:00 ಗಂ–ಟೆಗೆ ಸ್ಥಳೀಯ ಪಾಟೀಲ ಹಾಸ್ಪಿಟಲ್ ಹಿಂದುಗಡೆ ಅರಿವು ಆಚಾರ ಅನುಭಾವ ಕೇಂದ್ರ "ಶಿವ ಸದನ" (ಎಸ್ ಎಸ್ ನಾಗರಾಳೆ ಮನೆ) ಶಿವಾಜಿ ನಗರ–ಬಸವಕಲ್ಯಾಣದಲ್ಲಿ ವಚನ ಪಿತಾಮಹ ಪೂಜ್ಯ ಡಾ.ಫ ಗು ಹಳಕಟ್ಟಿಯವರ ಹಾಗೂ ಪ್ರವಚನ ಪಿತಾಮಹ ಪೂಜ್ಯ ಶ್ರೀ ಮಹಾಜಗದ್ಗುರು ಲಿಂಗಾನಂದ ಸ್ವಾಮೀಜಿಯವರ ಸಂಸ್ಮರಣೆ ಕಾರ್ಯಕ್ರಮವನ್ನು ಕಲ್ಯಾಣ ಮಹಾಮನೆ ಸಂಸ್ಥೆ ಮತ್ತು ಅರಿವು ಆಚಾರ ಅನುಭಾವ ಕೇಂದ್ರದ ವತಿಯಿಂದ ಹಮ್ಮಿಕೊಳ್ಳಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಬಸವ ಭಕ್ತರು ಬಸವಾಭಿಮಾನಿಗಳು ಆಗಮಿಸಬೇಕೆಂದು ಪೂಜ್ಯ ಶ್ರೀ ಸದ್ಗುರು ಬಸವಪ್ರಭು ಸ್ವಾಮೀಜಿಯವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಲಿಗಾಡೆಯವರ ಜನ್ಮ ದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜೂ 30 ಜಯದೇವಿತಾಯಿ ಲಿಗಾಡೆ ಯವರು ಕನ್ನಡ ಮತ್ತು ಮರಾಠಿ ಸಂಸ್ಕೃತಿಗಳ ನಡುವಿನ ಕೊಂಡಿಯಾಗಿದ್ದರು. ಕನ್ನಡದ ವಚನ ಸಾಹಿತ್ಯವನ್ನು ಮರಾಠಿಗೆ ಅನುವಾದಿಸಿ ಶರಣ ಸಂಸ್ಕೃತಿಯನ್ನು ಮರಾಠಿಗರಿಗೆ ಪರಿಚಯಿಸಿದ್ದರು ಎಂದು ಬರಹಗಾರ ರಮೇಶ ಬಿರಾದಾರ ಅಭಿಪ್ರಾಯ ಪಟ್ಟರು. ಡಾ. ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನ ಬಸವಕಲ್ಯಾಣ ಮತ್ತು ಪ್ರಭುರಾವ ಕಂಬಳಿವಾಲೆ ಪ್ರತಿಷ್ಠಾನ ಬೀದರ ಇವರ ಸಹಯೋಗದಲ್ಲಿ ನಗರದ ಕರ್ನಾಟಕ ಪುಸ್ತಕ ಮಳಿಗೆಯಲ್ಲಿ ನಡೆದ ಲಿಗಾಡೆಯವರ 113ನೇ ಜನ್ಮ ದಿನ ಕಾರ್ಯಕ್ರಮದಲ್ಲಿ ಮಾತನಾಡಿ ಕನ್ನಡ ನಾಡು, ನುಡಿಯ ಮೇಲೆ ಅಪಾರ ಪ್ರೀತಿ ಹೊಂದಿದ ಲಿಗಾಡೆ ತಾಯಿ ಅವರು ಕರ್ನಾಟಕ ಏಕೀಕರಣ ಚಳುವಳುಯಲ್ಲಿ ಭಾಗವಹಿಸಿ ಹೈದ್ರಾಬಾದ್ ಕರ್ನಾಟಕ ಭಾಗ ಅಖಂಡ ಕರ್ನಾಟಕದಲ್ಲಿ ವಿಲಿವಾಗಲು ಕಾರಣೀಕರ್ತರಾದರು. ಅಪ್ಪಟ ಕನ್ನಡದ ಪ್ರದೇಶವಾದ ಸೆದಲ್ಲಾಪೂರ ಕರ್ನಾಟಕದ ಭಾಗವಾಗದೆ ಇದ್ದಾಗ ಮನನೊಂದು ಬಸವಕಲ್ಯಾಣಕ್ಕೆ ಬಂದು ನೆಲಸಿದರು ಎಂದರು. ಬೀದರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನಿಕಟ ಪೂರ್ವ ಅಧ್ಯಕ್ಷರಾದ ಎಮ್. ಎಸ್. ಮನೋಹರ ಮಾತನಾಡಿ ಲಿಗಾಡೆ ತಾಯಿಯವರು ಮತ್ತು ಪ್ರಭುರಾವ ಕಂಬಳಿವಾಲೆ ಅವರು ಕನ್ನಡ ನಾಡಿಗೆ ಸಲ್ಲಿಸಿದ ಸೇವೆ ಅವಿಸ್ಮರಣೀಯ. ಇಬ್ಬರು ಮಹಾರಾಷ್ಟ್ರದವರಾದರು ಕನ್ನಡ ಏಳಿಗೆಗೆ ಶ್ರಮಿಸಿದರು. ಅಸ್ತಿ, ಅಂತಸ್ತು ತೋರೆದು ಕನ್ನಡ ನೆಲವನ್ನು ತಮ್ಮ ಕಾಯಕ ಕ್ಷೇತ್ರವಾಗಿಸಿಕೊಂಡರು ಎಂದರು. ಕಂಬಳಿವಾಲೆ ಪ್ರತಿಷ್ಠಾನದ ನಿರ್ದೇಶಕರಾದ ಶಾಂತಕುಮಾರ ಉದಗಿರೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು. ಬಸವರಾಜ ಮಯೂರ, ವಿಷ್ಣುಕಾಂತ ಮಹೆಂದ್ರಕರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಲಿಗಾಡೆ ಪ್ರತಿಷ್ಠಾನದ ಕಾರ್ಯದರ್ಶಿ ದೇವಿಂದ್ರ ಬರಗಾಲೆ ನಿರೂಪಿಸಿದರು.

# ಲಿಂಗೈಕ್ಯ ವಿರಕ್ತ ಸ್ವಾಮಿಗಳ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮ ಪಟ್ಟಣದಲ್ಲಿ ಬೃಹತ್ ಬೈಕ್ ರ್‍ಯಾಲಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಆರಾಧ್ಯ ದೈವ ಶ್ರೀ ಖಾಸ್ಗತೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಲಿಂಗೈಕ್ಯ ಶ್ರೀ ವಿರಕ್ತ ಮಹಾಸ್ವಾಮಿಗಳ ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ರವಿವಾರ ಬೃಹತ್ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಯಿತು. ಪಟ್ಟಣದ ಕೌಟಿಲ್ಯ ಅಕಾಡೆಮಿ ಅಧ್ಯಕ್ಷ ರಾಜಶೇಖರ ಸಜ್ಜನ ಅವರ ಕುಟುಂಬ ಸದಸ್ಯರು ಭಕ್ತಿಯಿಂದ ಕೊಡಮಾಡಿದ 4 ಅಡಿ ಎತ್ತರದ ಲಿಂಗೈಕ್ಯ ಶ್ರೀ ವಿರಕ್ತಶ್ರೀಗಳ ಮೂರ್ತಿಯ ಭವ್ಯ ಮೆರವಣಿಗೆಯ ಬೃಹತ್ ಬೈಕ್ ರ್‍ಯಾಲಿಗೆ ಪೂಜ್ಯ ಸಿದ್ದಲಿಂಗ ದೇವರು ಶ್ರೀ ಬಸವೇಶ್ವರ ವೃತ್ತದಲ್ಲಿ ಚಾಲನೆ ನೀಡಿದರು.

ಅಲ್ಲಿಂದ ನೂರಾರು ಬೈಕ್ ಸವಾರರು ಓಂ ನಮಃ ಶಿವಾಯ ಶ್ರೀ ಖಾಸ್ಗತೇಶ್ವರ ಹಾಗೂ ಶ್ರೀ ವಿರಕ್ತ ಮಹಾ ಸ್ವಾಮಿಗಳ ಹೆಸರಲ್ಲಿ ಜಯ ಘೋಷಗಳನ್ನು ನಾಲ್ಕೂ ದಿಕ್ಕಿನಲ್ಲಿ ಮೊಳಗಿಸಿ ಆರಂಭಿಸಿದ ರ್‍ಯಾಲಿಯು ಬಸ್ ನಿಲ್ದಾಣ ಮಾರ್ಗವಾಗಿ ಮಹಾರಾಣಾ ಪ್ರತಾಪ್ ಸಿಂಹ ವೃತ್ತ ಶಿವಾಜಿ ವೃತ್ತ ಕತ್ರಿ ಬಜಾರ್ ರಸ್ತೆಯಿಂದ ಶ್ರೀ ಖಾಸ್ಗತೇಶ್ವರ ಮಠಕ್ಕೆ ತಲುಪಿತು ಅಲ್ಲಿ ಸಕಲ ಪೂಜಾ ವಿಧಿ ವಿಧಾನಗಳನ್ನು ಪೂರೈಸಿದ ನಂತರ ಮೂರ್ತಿಯ ಪ್ರತಿಷ್ಠಾಪನೆಯನ್ನು ಮಾಡಲಾಯಿತು. ಕಾರ್ಯಕ್ರಮದಲ್ಲಿ ಗಣ್ಯರಾದ ಪ್ರಭುಗೌಡ ಮದರಕಲ್ಲ, ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಎಸ್.ಬಿ.ಕಟ್ಟಿಮನಿ, ಪರಪ್ಪ ಸಂಗಪ್ಪ ಸಜ್ಜನ, ಕಾಶಿನಾಥ ಸಜ್ಜನ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಡಿ. ವಿ.ಪಾಟೀಲ, ಜೈಸಿಂಗ್ ಮೂಲಿಮನಿ, ಮಹಾಂತೇಶ ಮುರಾಳ, ರಾಜು ಸಜ್ಜನ, ಇಬ್ರಾಹಿಂ ಮನ್ಸೂರ, ಅಶೋಕ ಚಿನಗುಡಿ, ತಿಪ್ಪಣ್ಣ ಸಜ್ಜನ, ರವಿಕಾಂತ ಚಂದುಕರ್, ರಾಜು ಅಲ್ಲಾಪೂರ, ನದೀಮ ಕಡು ಮತ್ತಿತರರು ಇದ್ದರು.

ಅದ್ದೂರಿಯಾಗಿ ಜರುಗಿದ ವಯೋನಿವೃತ್ತಿ ಸಮಾರಂಭ

# ದಿಲೀಪಕುಮಾರ್ ಹಿಲಾಲಪುರೆ ಅವರ ಸೇವೆ ಅನನ್ಯ: ರಾಜಪ್ಪ ಜಮಾದರ್





(ಮಲ್ಲಮ್ಮ ನುಡಿ ವಾರ್ತೆ)

ಚಿಟಗುಪ್ಪ: ಅಜ್ಞಾನದ ಕತ್ತಲೆಯಿಂದ ಜ್ಞಾನದ ಬೆಳಕು ತೋರುವ ಶಿಕ್ಷಕರ ಸ್ಥಾನ ಅತ್ಯಂತ ಪವಿತ್ರವಾದುದಾಗಿದೆ. ಅಂತಹ ಶಿಕ್ಷಣ ಸೇವೆಯಲ್ಲಿ ವಯೋನಿವೃತ್ತಿ ಹೊಂದಿದ ಹಿಲಾಲಪುರೆ ಅವರ ಸೇವೆ ಅನನ್ಯವಾಗಿದೆ, ಸಮಾಜ ಮುಖಿ ನಿಸ್ವಾರ್ಥ ಸೇವೆ ಸಲ್ಲಿಸಿದವರಿಗೆ ಸಮಾಜ ಯಾವತ್ತೂ ಋಣಿಯಾಗಿರುತ್ತದೆ ಎಂಬುದಕ್ಕೆ ನಿವೃತ್ತಿಯಾದ ದಿಲೀಪಕುಮಾರ್ ಹಿಲಾಲಪುರೆ ಅವರೇ ಉದಾಹರಣೆ ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲುಕಾಧ್ಯಕ್ಷ ರಾಜಪ್ಪ ಜಮಾದರ್ ತಿಳಿಸಿದರು. ಪಟ್ಟಣದ ಫಾತಿಮಾಪುರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕ ದಿಲೀಪಕುಮಾರ್ ಹಿಲಾಲಪುರೆ ಅವರ ವಯೋನಿವೃತ್ತಿ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ದಿಲೀಪಕುಮಾರ ಅವರು ಸುದೀರ್ಘ 28 ವರ್ಷಗಳ ಕಾಲ ಸಹ ಶಿಕ್ಷಕರಾಗಿ ಸೇವೆ ಸಲ್ಲಿಸಿ ಸಾವಿರಾರು ಶಿಷ್ಯ ಬಳಗ–ಕ್ಕೆ ಸ್ಫೂರ್ತಿದಾಯಕ ಆಗಿರುವ ದಿಲೀಪಕುಮಾರ ಅವರು ಅನೇಕ ಬಡ ಮಕ್ಕಳಿಗೆ ದಾರಿ ದೀಪವಾಗಿದ್ದು, ಅವರ ನಿಸ್ವಾರ್ಥ ಸೇವೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ಹೇಳಿದರು. ಕಸಾಪ ತಾಲುಕಾಧ್ಯಕ್ಷ ಅನೀಲಕುಮಾರ್ ಸಿಂಧೆ ಮಾತನಾಡಿ, ಶಿಕ್ಷಕ ವೃತ್ತಿ ಬಹಳ ಪವಿತ್ರವಾದುದು. ಶಿಕ್ಷಕರು ತಮ್ಮ ಸೇವಾವಧಿಯಲ್ಲಿ ಗಳಿಸುವ ಜ್ಞಾನ ಮತ್ತು ಅನುಭವವನ್ನು ನಿವೃತ್ತಿಯ ನಂತರವು ಸಮಾಜಕ್ಕೆ ನೀಡಬೇಕೆಂದರು. ದಿಲೀಪಕುಮಾರ ಅವರು 60 ವರ್ಷಕ್ಕೆ ವಯೋನಿವೃತ್ತಿ ಹೊಂದಿದರೂ ಸಹ ಅವರ ಮನಸ್ಸು ಮುಗ್ಧ ಮಗುವಿನಂತೆ. ಅವರ ನಿವೃತ್ತಿ ಜೀವನ ಸುಖ ಮಯವಾಗಿರಲಿ ಎಂದು ಶುಭ ಹಾರೈಸಿದರು. ಶಾಲೆಯ ಮುಖ್ಯ ಗುರುಗಳಾದ ಪ್ರೇಮಿಳಾ ರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದಿಲೀಪಕುಮಾರ್ ಹಿಲಾಲಪುರೆ ಅವರು ತಮ್ಮ ಕರ್ತವ್ಯದಲ್ಲಿ ನಿಷ್ಠೆ, ಪ್ರಾಮಾಣಿಕತೆಯೊಂದಿಗೆ ಸಿಬ್ಬಂದಿ ಬಳಗದ ಜೊತೆಗೆ ಹೊಂದಾಣಿಕೆ, ಪ್ರೀತಿ–ವಿಶ್ವಾಸ ಉತ್ತಮ ಕರ್ತವ್ಯದೊಂದಿಗೆ ನಮ್ಮೆಲರಿಗೆ ಮಾರ್ಗದರ್ಶಕರಾಗಿ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದುತ್ತಿರುವುದು ನಮ್ಮ ಸಿಬ್ಬಂದಿಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ನೋವು ತಂದಿದೆ ಎಂದು ಹೇಳಿದರು. ಶಾಲೆಯಲ್ಲಿ ಮಕ್ಕಳಿಗೆ ಕುಡಿಯುವ ನೀರಿನ ಸಮಸ್ಯೆ ಆಗುತ್ತಿದೆ ಎಂದು ಮನವಿ ಮಾಡಿದಾಗ, ಪುರಸಭೆ ಸದಸ್ಯರು ಮನವಿಗೆ ಸ್ಪಂದಿಸಿ ನಮ್ಮ ಶಾಲೆಗೆ ಬೋರ್ವೆಲ್ ವ್ಯವಸ್ಥೆ ಕಲ್ಪಿಸಿದ್ದಾರೆ ಅವರಿಗೂ ಕೂಡ ಧನ್ಯವಾದಗಳು ಸಲ್ಲಿಸುತ್ತೇನೆ ಎಂದರು. ಕಸಾಪ ನಗರ ಘಟಕ ಅಧ್ಯಕ್ಷ ರಾಜಕುಮಾರ ಆರ್. ಹಡಪದ ಮಾತನಾಡಿ, ಸಮಾಜದಲ್ಲಿ ಯಾವುದೇ ಅಪೇಕ್ಷೆಗಳಿಲ್ಲದೆ ಮಕ್ಕಳ ಶ್ರೇಯಸ್ಸು ಮತ್ತು ಯಶಸ್ಸು ಬಯಸುವವರು ತಂದೆ, ತಾಯಿ ಮಾತ್ರ. ಅವರಂತೆ ಶಿಕ್ಷಕರು ಸಹ ವಿದ್ಯಾರ್ಥಿಗಳಿಂದ ಯಾವುದೇ ಫಲಾಪೇಕ್ಷೆ ಇಲ್ಲದೆ ನಿಸ್ವಾರ್ಥತೆಯಿಂದ ಸೇವೆ ಸಲ್ಲಿಸುತ್ತಾರೆ. ಮಕ್ಕಳ ಭವಿಷ್ಯ ರೂಪಿಸುತ್ತಾರೆ, ಶಿಕ್ಷಕರು ಹೇಳಿಕೊಟ್ಟ ಪಾಠವನ್ನು ವಿದ್ಯಾರ್ಥಿಯೊಬ್ಬ ಭವಿಷ್ಯದಲ್ಲಿ ದೊಡ್ಡ ಹುದ್ದೆಗೇರಿ ಸಮಾಜದಲ್ಲಿ ಗೌರವ ಪಡೆದುಕೊಳ್ಳುವಾಗ ಶಿಕ್ಷಕರಿಗೆ ಹೆಮ್ಮೆ ಎನಿಸುತ್ತದೆ. ಅಂತಹ ಶ್ರೇಯಸ್ಸು ಬಯಸುವವರು ಶಿಕ್ಷಕರು ಮಾತ್ರ ಎಂದು ಹೇಳಿದರು. ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಸರ್ಕಾರಿ ಶಾಲೆಯಲ್ಲಿ, ಅದು ಕನ್ನಡ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಕೊಡಿಸಬೇಕು ಎಂದು ಹೇಳಿದರು. ನಿವೃತ್ತ ಸಹ ಶಿಕ್ಷಕ ದಿಲೀಪಕುಮಾರ್ ಹಿಲಾಲಪುರೆ ಮಾತನಾಡಿ, ನನ್ನ ಸೇವಾ ವಯೋನಿವೃತ್ತಿ ಅಭಿನಂದನಾ ಸಮಾರಂಭ ಕಾರ್ಯಮವನ್ನು ಆಯೋಜಿಸಿದ್ದ ಶಾಲೆಯ ಮುಖ್ಯ ಗುರುಗಳಿಗೆ ಮತ್ತು ಸಿಬ್ಬಂದಿ ವರ್ಗದವರಿಗೆ ಕೃತಜ್ಞತೆಗಳು ಸಲ್ಲಿಸುತ್ತೇನೆ ಎಂದರು. ಮಾತನಾಡಿ ಈ ಗ್ರಾಮದಲ್ಲಿ ಸುಮಾರು 11 ವರ್ಷಗಳಕ್ಕೂ ಹೆಚ್ಚು ಕಾಲ ಸೇವೆ ಸಲ್ಲಿಸಿದ್ದೇನೆ ಇಲ್ಲಿಯ ಜನರ ಪ್ರೀತಿ–ವಿಶ್ವಾಸಕ್ಕೆ ನಾನು ಚಿರಋಣಿಯಾಗಿರುತ್ತೇನೆ ಎಂದು ನುಡಿದರು. ಒಬ್ಬ ಸಾಮಾನ್ಯ ವ್ಯಕ್ತಿಯನ್ನು ದೇಶದ ಸತ್ಪ್ರಜೆಯನ್ನಾಗಿ ಮಾಡುವ ಶಕ್ತಿ ಕೇವಲ ಗುರುವಿನಲ್ಲಿದೆ, ಕಲಿಸಿದ ಗುರುಗಳಿಗೆ ಗೌರವ ಸಮರ್ಪಿಸುವುದರಿಂದ ಧನ್ಯತಾಭಾವ ಪ್ರಾಪ್ತಿಯಾಗುವುದೆಂದರು, ಇಂಥ ಖುಷಿಗೆ ಮತ್ತೇನು ಬೇಕಿಲ್ಲ ಎಂದು ಹೇಳುತ್ತ ಭಾವುಕತೆಗೆ ಒಳಗಾದರು. ಬಿ.ಆರ್.ಸಿ. ರಾಮುಲು, ಎಸ್ಸಿ, ಎಸ್ಟಿ ಶಿಕ್ಷಕರ ಸಂಘದ ತಾಲುಕಾಧ್ಯಕ್ಷ ಪಂಡಿತ್ ಕಲ್ಯಾಣಿ ಮಾತನಾಡಿದರು. ಈ ಸಂದರ್ಭದಲ್ಲಿ ಸಿ.ಆರ್.ಪಿ. ರಾಮಚಂದ್ರ, ಕಸಾಪ ತಾಲೂಕ ಉಪಾಧ್ಯಕ್ಷ ಸಂಜೀವನ ಭೋಸ್ಲೆ, ಸರ್ಕಾರಿ ನೌಕರರ ಸಂಘದ ತಾಲುಕಾಧ್ಯಕ್ಷ ರಾಜಶೇಖರ ಉಪ್ಪಿನ, ಜಯಮಣಿ, ಪ್ರಭು ಕಂಚನಾಳ, ದಿಲೀಪ ನರನಾಳ, ಅಂಬಾಜಿ ಪವರ್, ಸಂತೋಷ ತಾಂಡುರ್, ಹಸನ್ ಲಚ್ಚಿಕೆ, ಮಂಜುನಾಥ ಸ್ವಾಮಿ, ನರಸಪ್ಪ ನರನಾಳ, ವೆಂಕಟ ಪೂಜಾರಿ, ವಿಜಯಕುಮಾರ್ ಸ್ವಾಮಿ ಜಗನಾಥ ನರನಾಳ, ಅನೀಲಕುಮಾರ ಪಾಟೀಲ್, ಸುನೀಲರೆಡ್ಡಿ ಇಟಗಾ, ಮಲ್ಲಿಕಾರ್ಜುನ ಸೀತಾಳಗೇರಾ, ಖಾಜಾ ಪಟೇಲ್ ಸೇರಿದಂತೆ ಎಸ್ಡಿಎಂಸಿ ಸದಸ್ಯರು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಶಿಕ್ಷಕಿ ಅನ್ನಪೂರ್ಣ ನಿರೂಪಿಸಿ ವಂದಿಸಿದರು.

> ಶಿಕ್ಷಕರಾದವರು ವಿದ್ಯಾರ್ಥಿಯ ಜೀವನುದ್ದಕ್ಕೂ ಮಾರ್ಗದರ್ಶಕರಾಗಿ ಇರುತ್ತಾರೆ. ರಾಷ್ಟ್ರ ನಿರ್ಮಾಣ, ಸಾಮಾಜಿಕ ಚಿಂತನೆವುಳ್ಳವರೇ ಉತ್ತಮ ಶಿಕ್ಷಕರಾಗಲು ಸಾಧ್ಯವಿದೆ. ದಿಲೀಪಕುಮಾರ ಅವರ ಸೇವಾ ಅವಧಿಯಲ್ಲಿ ಒಂದೇ ಒಂದು ಕಪ್ಪುಚುಕ್ಕೆಯೂ ಇಲ್ಲದಂತೆ ಕರ್ತವ್ಯ ನಿರ್ವಹಿಸಿರುವ ದಿಲೀಪಕುಮಾರ ಹಿಲಾಲಪೂರೆ ಅವರ ನಿವೃತ್ತ ಜೀವನ ಸುಖ–ಶಾಂತಿಯಿಂದ ತುಂಬಿರಲಿ.
> **–ರಾಜಪ್ಪಾ ಜಮಾದಾರ**
> **ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲ್ಲೂಕಾ ಅಧ್ಯಕ್ಷ ಚಿಟಗುಪ್ಪ**

ಮೂವರು ಬಸ್ ಚಾಲಕರ ವಯೋನಿವೃತ್ತಿ ಸಮಾರಂಭ

# ವೃತ್ತಿಜೀವನದಲ್ಲಿ ಸಂಸ್ಥೆಗೆ ಹೆಸರು ತಂದ ಚಾಲಕರು:



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ವೃತ್ತಿ ಜೀವನದಲ್ಲಿ ಯಾವೊಬ್ಬ ಪ್ರಯಾಣಿಕರಿಗೂ ತೆ–ಊಂದರೆಯಾಗದಂತೆ ನೋಡಿಕೊಂಡು, ಅಪಘಾತ ರಹಿತವಾಗಿ ಚಾಲನೆ ಮಾಡಿ, ಸಂಸ್ಥೆಗೆ ಉತ್ತಮ ಹೆಸರು ತಂದ ಕೀರ್ತಿ ಮೂವರು ವಾಹನ ಚಾಲಕರಿಗೆ ಸಲ್ಲುತ್ತದೆ ಎಂದು ವಿಭಾಗೀಯ ಸಂಚಲನಾಧಿಕಾರಿ ವಿ.ಆರ್.ರೆಡ್ಡಿ ತಿಳಿಸಿದರು.

ನಗರದ ಸಾರಿಗೆ ಘಟಕದಲ್ಲಿ ಸಾರ್ಥಕ ಸೇವೆ ಸಲ್ಲಿಸಿ, ವಯೋ ನಿವೃತ್ತಿ ಹೊಂದಿದ ಹಿರಿಯ ಚಾಲಕರಾದ ಬಾಪುಗೌಡ ಬಾಚಿಮಟ್ಟಿ, ಮಶಾಕ ಸಾಬ್ ಹಳಿಸಗರ ಮತ್ತು ಸಲೀಂಸಾಬ ಗೋಗಿ ಅವರಿಗೆ ಘಟಕದ ವತಿಯಿಂದ ಸನ್ಮಾನಿಸಿ ಅಭಿಪ್ರಾಯ ಹಂಚಿಕೊಂಡ ಅವರು, ಬಸ್ ಚಾಲಕರ ಹುದ್ದೆ ಅತ್ಯಂತ ಜವಾಬ್ದಾರಿಯುತವಾಗಿದ್ದು, ಕಾಯಕವೇ ಕೈಲಾಸ ಎಂದು ನಂಬಿ ಕರ್ತವ್ಯ ನಿಷ್ಠೆಗೆ ಹೆಸರಾದ ಮೂವರು ಚಾಲಕರ ವಯೋನಿವೃತ್ತಿ ಜೀವನ ಸುಖಮಯವಾಗಲಿ, ಯುವ ಚಾಲಕರಿಗೆ ಮಾರ್ಗದರ್ಶನ ಮಾಡಲಿ ಎಂದು ತಿಳಿಸಿದರು. ಸಹಾಯಕ ಸಂಚಾರಿ ಅಧೀಕ್ಷಕ ಪಾಂಡುರಂಗ ಕುಲ್ಕರ್ಣಿ, ಮಲ್ಲಿಕಾರ್ಜುನ ಸಹಾಯಕ ತಾಂತ್ರಿಕ ಅಧಿಕಾರಿ ಸೇರಿದಂತೆ ರಸ್ತೆ ಸಾರಿಗೆ ನಿಗಮ ಅಧಿಕಾರಿಗಳು, ಚಾಲಕರು, ನಿರ್ವಾಹಕರು ಸೇರಿದಂತೆ ಅಭಿಮಾನಿಗಳು ಹಿತೈಷಿಗಳು ಪಾಲ್ಗೊಂಡಿದ್ದರು. ನಿಂಗಣ್ಣ ಗೋಗಿ ನಿರೂಪಿಸಿದರು, ಪರಮಣ್ಣ ವಂದಿಸಿದರು.

# ಅಂಚೆ ಇಲಾಖೆಯಿಂದ ಡಿಸಿಡಿಪಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 30–ನಗರದ ಯರಮರಸ್ ಕ್ಯಾಂಪಿನ ಉಪ ಅಂಚೆ ಕಚೇರಿಯಲ್ಲಿ ಇತ್ತಿಚೇಗೆ ಕಚೇರಿಯಲ್ಲಿ ಡಿಸಿಡಿಪಿ ಕಾರ್ಯಕ್ರಮವನ್ನು ನೆರವೇರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉಪ ಶಾಖಾ ಪಾಲಕರಾದ ಅಂಜನೇಯ ಗೆನೇರಿ ಅವರು ವಹಿಸಿದರು.

ಇದೇ ಸಂದರ್ಭದಲ್ಲಿ ಅಂಚೆ ಮೇಲ್ವಿಚಾರಕರಾದ ರಾಜಕುಮಾರ್, ರಾಯಚೂರಿನ ಉಪ ವಿಭಾಗದ ಸಹಾಯಕರಾದ ಶಿವಪಾದ ಶಿವಂಗಿ ಸೇರಿದಂತೆ ಉಪ ಅಂಚೆ ಕಚೇರಿಯ ಎಲ್ಲಾ ಬಿಪಿಎಂ, ಏಬಿಪಿಎಂ, ಜೆಡಿಎಸ್ ಸಿಬ್ಬಂದಿ ವರ್ಗದವರು ಹಾಗೂ ಯರಮರಸ್ ಕ್ಯಾಂಪಿನ ಸಾರ್ವಜನಿಕರು ಭಾಗವಹಿಸಿದ್ದರು.



ಬೀದರ: ನಗರದ ಇನ್ನೈರ ರೆಸ್ಟೋರೆಂಟ್ ಬೀದರ ಕ್ಕೆ ಆಗಮಿಸಿ ತಂಗಿದ್ದ ಕರ್ನಲ ಶ್ರೀ ವ್ಹಿ.ಎನ. ಥಾಪರ ಹಾಗೂ ಶ್ರೀಮತಿ ತ್ರಿಪ್ತಿ ಥಾಪರ ದಂಪತಿಗಳನ್ನು ಬೀದರ ಹಿಂದೂ ರಾಷ್ಟ್ರೀಯ ಜಾಗರಣ ಸಮಿತಿಯ ಮಾನ್ಯ ಅಧ್ಯಕ್ಷರು ಶ್ರೀ ಶಂಕ್ರೇಪ್ಪ ಪಾಟೀಲಜಿ, ಪ್ರೊ ಬಸವರಾಜ ಸ್ವಾಮಿ ಹೆಡಗಾಪೂರಕರ ಪ್ರಧಾನ ಕಾರ್ಯದರ್ಶಿಗಳು ಹಾಗೂ ಇನ್ನಿತರ ಪ್ರಮುಖ ಪದಾಧಿಕಾರಿಗಳು ಸನ್ಮಾನಿಸಿದರು.

# ಸಂಗೀತದಿಂದ ಶರೀರದಲ್ಲಿ ನವಚೈತನ್ಯ: ಡಾ. ಮಲ್ಲಿಕಾರ್ಜುನ ಚಟ್ನಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 30 : ಸಂಗೀತ ಕಲಿಯುವುದರಿಂದ ಮತ್ತುಆಲಿಸುವಿಕೆಯಿಂದವ್ಯಕ್ತಿಯ ಶರೀರ ಮತ್ತು ಮನಸ್ಸಿನಲ್ಲಿ ನವಚೈತನ್ಯ ತುಂಬುತ್ತದೆ ಎಂದು ಖ್ಯಾತ ನೇತ್ರ ತಜ್ಞ ಡಾ. ಮಲ್ಲಿಕಾರ್ಜುನ ಚಟ್ನಳ್ಳಿ ತಿಳಿಸಿದರು.

ಗಾನಯೋಗಿ ಪಂಚಾ–ಕ್ಷರ ಗವಾಯಿ ಸೇವಾ ಸಂಘ ವತಿಯಿಂದ ನಗರದ ಹಳೆ ನಾವದಗೇರಿಯ ಚಂದ್ರಶೇಖರ ಹೆಬ್ಬಾಳೆ ತೋಟದ ಮನೆಯಲ್ಲಿ ಆಯೋಜಿಸಿದ "ನೂತನ ಸಂಗೀತ ಪಾಠಶಾಲೆ" ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಜಾಗತಿಕರಣ ಮತ್ತು ಆಧುನಿಕತೆಯ ಭರಾಟೆಯಲ್ಲಿ ವ್ಯಕ್ತಿ ವಿವಿಧ ರೋಗಗಳಿಗೆ ತುತ್ತಾಗುತಿದ್ದಾನೆ. ಒತ್ತಡದ ಬದುಕಿನಿಂದ ಮನುಷ್ಯ ವಿಶ್ರಾಂತಿ ಪಡೆಯಲು ಸಂಗೀತ ದಿವ್ಯೌಷಧಿಯಾಗಿದೆ. ಸಂಗೀತ ನಮಗರಿವಿಲ್ಲದಂತೆಯೇ ಆನಂದ ನೀಡುತ್ತದೆ. ಹಾಡು ಕೇಳುತ್ತಲೇ ಶರೀರದ ಅವಯವಗಳಲ್ಲಿ ರೋಮಾಂಚನ ಉಂಟಾಗಿ ಮನಸ್ಸಿನಲ್ಲಿ ನವಚೈತನ್ಯ ಮೂಡುತ್ತದೆ. ಪಾಲಕರು ತಮ್ಮ ಮಕ್ಕಳಿಗೆ ಸಂಗೀತ ಕಲಿಸಬೇಕು. ಏಕೆಂದರೆ ಇದರಿಂದ ಮಕ್ಕಳಿಗೆ ಸಂಸ್ಕಾರ ಲಭಿಸುತ್ತದೆ. ವಿನಯ, ಭಕ್ತಿ, ಪ್ರೀತಿ, ತಾಳ್ಮೆ ಜೊತೆಗೆ ಗುರು–ಶಿಷ್ಯರ ಭಾವನಾತ್ಮಕ ಪರಂಪರೆ ಬೆಳೆಯುತ್ತದೆ. ಚಂದ್ರಶೇಖರ ಹೆಬ್ಬಾಳೆ ಸಂಗೀತದ ಪೋಷಕರಾಗಿ ಸಮಾಜದಲ್ಲಿ ಧನಾತ್ಮಕ ಪರಿವರ್ತನೆಗಾಗಿ ದುಡಿಯುತ್ತಿದ್ದಾರೆ. ಅವರ ಕಾರ್ಯ ಇತರರಿಗೆ ಆದರ್ಶಪ್ರಾಯವಾಗಿದೆ ಎಂದು ಚಟ್ನಳ್ಳಿ ತಿಳಿಸಿದರು.

ಗಾನಯೋಗಿ ಪಂಚಾಕ್ಷರ ಗವಾಯಿ ಸೇವಾ ಸಂಘದ ಗೌರವಾಧ್ಯಕ್ಷ ಪ್ರೊ. ಎಸ್.ವಿ.ಕಲ್ಮಠ ಪ್ರಾಸ್ತಾವಿಕ ಮಾತನಾಡಿ ಸಂಘವು ಎರಡು ದಶಕಗಳಿಂದ ಸಂಗೀತ ಕಲಾವಿದರನ್ನು ಪೋಷಿಸುವ ಕಾರ್ಯ ಮಾಡುತ್ತಾ ಬರುತ್ತಿದೆ. ಸಂಘದ ಅಡಿಯಲ್ಲಿ ಹೆಚ್ಚು ಮಕ್ಕಳಿಗೆ ಸಂಗೀತ ಕಲಿಸಬೇಕು ಎಂಬ ಧ್ಯೇಯೋದ್ದೇಶ ಇಟ್ಟು–ಕೊಂಡು ನೂತನ ಪಾಠಶಾಲೆ ಆರಂಭ ಮಾಡಲಾಗಿದೆ. ನಗರದ ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷ ಪ್ರೊ. ಜಗನ್ನಾಥ ಹೆಬ್ಬಾಳೆ ಮಾತನಾಡಿ ಕ.ಕ. ಭಾಗದ ಅದರಲ್ಲೂ ಬೀದರ ಜಿಲ್ಲೆಯ ಕಲಾವಿದರು ದೇಶದ ತುಂಬಾ ಹೆಸರು ಮಾಡಬೇಕೆಂಬ ಉದ್ದೇಶದಿಂದ ಡಾ. ರಾಜಕುಮಾರ ಹೆಬ್ಬಾಳೆಯವರು ರಾಷ್ಟ್ರೀಯ ಜನಪದ ಬುಡಕಟ್ಟು ಕಲಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿಯಾಗಿ ಉತ್ತಮ ಕಾರ್ಯ ಮಾಡುತಿದ್ದಾರೆ. ಕಲಾವಿದರು ತಮ್ಮ ಕಲೆ, ವಾದ್ಯ ಮತ್ತು ಸಂಗೀತದಿಂದ ಹೆಸರು ಮಾಡಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಗಾನಯೋಗಿ ಪಂಚಾಕ್ಷರ ಗವಾಯಿ ಸೇವಾ ಸಂಘದ ಅಧ್ಯಕ್ಷ ಚಂದ್ರಶೇಖರ ಹೆಬ್ಬಾಳೆ ಹಾಗೂ ಹಿರಿಯ ಕಲಾವಿದ ಪಂ. ರಾಮುಲು ಗಾದಗಿ ಮಾತನಾಡಿದರು. ದಿವ್ಯ ಸಾನಿಧ್ಯವನ್ನು ರಾಮಕೃಷ್ಣ ವಿವೇಕಾನಂದ ಆಶ್ರಮದ ಪೂಜ್ಯ ಶ್ರೀ ಜ್ಯೋತಿರ್ಮಯಾನಂದ ಸ್ವಾಮಿಜಿ ವಹಿಸಿದ್ದರು. ವೇದಿಕೆ ಮೇಲೆ ಗುತ್ತಿಗೆದಾರ ಸಚಿನ ಕೊಳ್ಳೂರು, ಪ್ರಮುಖರಾದ ಜಯರಾಜ ಖಂಡ್ರೆ, ಕಂಟೆಪ್ಪ ಗಂದಿಗುಡೆ, ಏಕನಾಥ ಸಿದ್ದೆಪುರೆ, ರಾಜೇಂದ್ರಸಿಂಗ್ ಪವಾರ, ಡಾ. ರಾಜೇಂದ್ರ ಬಿರಾದಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಅಶೋಕ ಹೆಬ್ಬಾಳೆ ಸ್ವಾಗತಿಸಿದರು. ಸುರೇಶ ಸ್ವಾಮಿ ನಿರೂಪಿಸಿದರೆ ಡಾ. ರಾಜಕುಮಾರ ಹೆಬ್ಬಾಳೆ ವಂದಿಸಿದರು. ಕೊನೆಯಲ್ಲಿ ಪಂ. ರಾಮುಲು ಗಾದಗಿಯವರ ಸಂಗೀತ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದಲ್ಲಿ ನೂರಾರು ಜನ ಕಲಾಸಕ್ತರು, ಕಲಾಪ್ರೇಮಿಗಳು ಹಾಗೂ ಕಲಾವಿದರು ಉಪಸ್ಥಿತರಿದ್ದರು.

# ಆನಂದಮಯ ಜೀವನಕ್ಕೆ ಯೋಗ ಸಹಕಾರಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 30 : ಒತ್ತಡ ರಹಿತ ಆನಂದಮಯ ಜೀವನಕ್ಕೆ ಯೋಗ ಸಹಕಾರಿಯಾಗಿದೆ ಎಂದು ಬರ್ದಿಪುರ ಆಶ್ರಮದ ಡಾ. ಮಹಾಂತ ಮಹಾ ಮಂಡಲೇಶ್ವರ ಸಿದ್ಧೇಶ್ವರ ಆನಂದಗಿರಿ ಮಹಾರಾಜ್ ಹೇಳಿದರು.

ನಗರದ ಚಿಟ್ಟಾ ರಸ್ತೆಯಲ್ಲಿ ಇರುವ ಶ್ರೀದತ್ತಗಿರಿ ಮಹಾರಾಜ್ ಪದವಿಪೂರ್ವ ಕಾಲೇಜಿನಲ್ಲಿ ಪತಂಜಲಿ ಯೋಗ ಸಮಿತಿಯ ಜಿಲ್ಲಾ ಘಟಕದ ವತಿಯಿಂದ ಭಾನುವಾರ ಆಯೋಜಿಸಿದ್ದ 11ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯೋಗವು ಮನಸ್ಸು, ಶರೀರ ಹಾಗೂ ಉಸಿರನ್ನು ಒಂದಾಗಿಸುತ್ತದೆ. ಮನುಷ್ಯನನ್ನು ಪರಮಾತ್ಮನೆಡೆಗೆ ಕರೆದೊಯ್ಯುತ್ತದೆ. ಸದೃಢ ಸಮಾಜ ಹಾಗೂ ದೇಶ ನಿರ್ಮಾಣಕ್ಕಾಗಿ ಎಲ್ಲರೂ ದೈನಂದಿನ ಜೀವನದಲ್ಲಿ ಯೋಗ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಭಾರತ ಶೇಷ್ಠ ಸನಾತನ ಸಂಸ್ಕೃತಿಯ ಭಂಡಾರವಾಗಿದೆ. ವೇದ, ಉಪ ನಿಷತ್ತು, ಶಾಸ್ತ್ರ, ಆಗಮ, ಪುರಾಣಗಳು ಬದುಕಿನ ಮಾರ್ಗ ಕಲಿಸುತ್ತವೆ ಎಂದು ಹೇಳಿದರು.

ಯೋಗ ಪಾತ್ಯಕ್ಷಿಕೆ ನಡೆಸಿಕೊಟ್ಟ ಪತಂಜಲಿ ಯೋಗ ಸಮಿತಿಯ ಜಿಲ್ಲಾ ಘಟಕದ ಅಧ್ಯಕ್ಷ ಯೋಗೇಂದ್ರ ಯದಲಾಪುರೆ ಮಾತನಾಡಿ, ಯೋಗವು ಪಾದದಿಂದ ಶಿರದ ವರೆಗಿನ ರೋಗಗಳನ್ನು ನಿವಾರಿಸುತ್ತದೆ. ಕ್ಯಾನ್ಸರ್, ರಕ್ತದೊತ್ತಡ, ಮಧುಮೇಹ, ಮೂತ್ರ ಪಿಂಡದ ಸಮಸ್ಯೆ ಹಾಗೂ ಮಾನಸಿಕ ಖಿನ್ನತೆಯನ್ನು ದೂರವಾಗಿಸುತ್ತದೆ ಎಂದು ತಿಳಿಸಿದರು.

ಯೋಗ ಒಂದು ಕಸರತ್ತು ಅಥವಾ ವ್ಯಾಯಾಮ ಅಲ್ಲ. ಅದೊಂದು ಜೀವನ ಪದ್ಧತಿ. ಸಹಜ ಹಾಗೂ ಸುಖಿ ಜೀವನದ ಸೂತ್ರವೇ ಯೋಗ. ಆರೋಗ್ಯ ಉತ್ತಮವಾಗಿದ್ದರೆ ಎಲ್ಲವನ್ನೂ ಸಾಧಿಸಬಹುದು. ಸದೃಢ ಆರೋಗ್ಯಕ್ಕೆ ಯೋಗ ಅವಶ್ಯಕ ಎಂದು ಹೇಳಿದರು.

ನಗರಸಭೆ ಮಾಜಿ ಸದಸ್ಯ ಧನರಾಜ ಹಂಗರಗಿ ಮಾತನಾಡಿ, ಯೋಗದಿಂದ ದೈಹಿಕ ಹಾಗೂ ಮಾನಸಿಕ ನೆಮ್ಮದಿ ದೊರೆಯುತ್ತದೆ. ಉಲ್ಲಾಸಮಯ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಗಾನಯೋಗಿ ಪಂಚಾಕ್ಷರ ಗವಾಯಿ ಸೇವಾ ಸಂಘದ ಅಧ್ಯಕ್ಷ ಚಂದ್ರಶೇಖರ ಹೆಬ್ಬಾಳೆ ಮಾತನಾಡಿ, ಯೋಗವು ಭಾರತಕ್ಕೆ ಋಷಿ, ಮುನಿಗಳು ನೀಡಿದ ಮಹಾಶಕ್ತಿ. ಅಷ್ಟು ಮಾತ್ರವಲ್ಲದೆ, ಅವರು ಆಚಾರ, ವಿಚಾರಗಳು ಹೇಗಿರಬೇಕು ಎಂಬುದ್ದನ್ನೂ ಹೇಳಿಕೊಟ್ಟಿದ್ದಾರೆ. ಅವುಗಳನ್ನು ನಿತ್ಯ ಜೀವನದಲ್ಲಿ ಪಾಲಿಸಿದ್ದಲ್ಲಿ ಬದುಕು ಸುಂದರವಾಗುತ್ತದೆ ಎಂದು ಹೇಳಿದರು.

ದೇಶಪಾಂಡೆ ಸಾಹಿತ್ತಿಕ ಮತ್ತು ಸಂಸ್ಕೃತಿಕ ಪ್ರತಿಷ್ಠಾನದ ಅಧ್ಯಕ್ಷ ಎಂ.ಜಿ.ದೇಶಪಾಂಡೆ ಮಾತನಾಡಿ, ಶರೀರದ ಜೀವ ಕೋಶಗಳು ಕ್ರಿಯಾಶೀಲವಾಗಿರಲು ನಿತ್ಯ ಯೋಗಾಭ್ಯಾಸ ಮಾಡಬೇಕು. ಉತ್ತಮ ಆರೋಗ್ಯ ಕಾಯ್ದುಕೊಳ್ಳಲು ಫಾ?????ಫುಡ್, ಜಂಕ್ ಫುಡ್, ರಾಸಾಯನಿಕ ಪದಾರ್ಥಗಳಿಂದ ದೂರವಿರಬೇಕು ಎಂದು ತಿಳಿಸಿದರು.

ಯುವ ಉದ್ಯಮಿ ಅಮೃತರಾವ್ ಪಾಟೀಲ ಮಾತನಾಡಿದರು. ಆಶಾರಾಣಿ ಹೌದಖಾನಿ ಕಮಠಾಣ ಯೋಗ ಪ್ರದರ್ಶನ ನೀಡಿದರು. ಪತಂಜಲಿ ಯೋಗ ಸಮಿತಿಯ ಪದಾಧಿಕಾರಿಗಳು ಹಾಗೂ ಯೋಗ ಶಿಕ್ಷಕರನ್ನು ಸನ್ಮಾನಿಸಲಾಯಿತು.

ಶ್ರೀ ದತ್ತಗಿರಿ ಮಹಾರಾಜ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಹತ್ತಿ ಅಧ್ಯಕ್ಷತೆ ವಹಿಸಿದ್ದರು. ಅಂತರರಾಷ್ಟ್ರೀಯ ನೆಚರೋಪತಿ ಆರ್ಗನೈಸೇಷನ್ ಬೀದರ್ ಘಟಕದ ಅಧ್ಯಕ್ಷ ಗೋರಕನಾಥ ಕುಂಬಾರ ವೇದಿಕೆಯಲ್ಲಿದ್ದರು.

ಪ್ರಮುಖರಾದ ರವೀಂದ್ರ ಗಚ್ಚಿನಮನಿ, ನಾಗರಾಜ ಸ್ವಾಮಿ ಕಮಠಾಣ, ಸಂತೋಷ್ ಶೇರಿಕಾರ್, ಸಂತೋಷ್ ಬೆಲ್ದಾಳೆ, ಬಸವರಾಜ ಬುಳ್ಳಾ, ಮಲ್ಲಿಕಾರ್ಜುನ ನೆಲವಾಡ, ಶಿವಮೂರ್ತಿ ಬಟನಾಪುರೆ, ವಿಶ್ವನಾಥ ಮಠಪತಿ, ವೈಜಿನಾಥ ಬಿರಾದಾರ, ವಿಜಯಕುಮಾರ ಬಾಬಣೆ, ರವಿ ತೆಲಗಾಣೆ, ಅಣ್ಣಯ್ಯ ಸ್ವಾಮಿ, ಜಗನ್ನಾಥ ಭಂಗೂರೆ, ರಾಘವೇಂದ್ರ ಕುಲಕರ್ಣಿ, ಕಲ್ಲಪ್ಪ ಮುಗಟೆ, ವಿಜಯ ಮಹಾಂತೇಶ್, ರೇವಣಪ್ಪ ಮೂಲಗೆ, ಡಾ. ಬಸವರಾಜ ಬಲ್ಲೂರ, ಜಗನ್ನಾಥ ಕಮಲಾಪುರೆ, ಸತ್ಯವಾನ್ ಚಾಂಡೇಶ್ವರೆ, ಶಿವಶರಣಪ್ಪ ಮೂಲಗೆ, ರಮೇಶ ಬಿರಾದಾರ, ಚಂದ್ರಕಾಂತ ಪಟ್ನೆ, ಗುರುನಾಥ ಮೂಲಗೆ, ಶರಣಪ್ಪ ದಾನಾ, ಡಾ. ವೈಜಿನಾಥ ಬಿರಾದಾರ, ಬಸವರಾಜ ಮೂಲಗೆ, ಶಿವಾನಂದ ಡೊಣ್ಣೆ, ಗುರಪ್ಪ ಗಿರಮಲ್, ಸಂಜುಕುಮಾರ ಅಷ್ಟೂರೆ, ಈಶ್ವರ ರೂಪನೋರ್, ಶಿವಾಜಿ ಭೋಸ್ಲೆ, ಕೃಷ್ಣಾರೆಡ್ಡಿ, ಅಶೋಕ ರೆಡ್ಡಿ, ಉಮಾದೇವಿ ಹೂಗಾರ್, ರಾಜೇಶ್ವರಿ ಕಲೀಮ್, ಮಹಾನಂದಾ, ಜಗದೇವಿ ಸ್ವಾಮಿ, ನಾಗಮಣಿ ರೆಡ್ಡಿ ಯ???ಚಲ್, ಶಿವಕುಮಾರ ಕೋತಮೀರ್, ನಂದಾ ರಮೇಶ್, ಶಂಕರೆಪ್ಪ ವರದಾ, ಅನಿತಾ ಮಡಿವಾಳ, ವರ್ಷಾ ಮಡಿವಾಳ, ಬಸವರಾಜ ಕೆರಳೆ, ಭದ್ರು ಮಾಳಗೆ, ಕಾಶಿನಾಥ ಸಜ್ಜನಶೆಟ್ಟಿ ರಘುನಾಥ, ವೈಜಿನಾಥ ಬೆಲ್ಲಾಳೆ, ಬಸವಶ್ರೀ ಸ್ವಾಮಿ, ಪೂಜಾ ಸ್ವಾಮಿ, ವಿಲಾಸಮತಿ ಸ್ವಾಮಿ, ಜ್ಯೋತಿ, ಸುಧಾ, ಮಧುಮತಿ, ರೇಣುಕಾ, ಚಂದ್ರಕಲಾ ಕುಲಕರ್ಣಿ, ಸುಮಂಗಲಾ, ವಿಷ್ಣುಮಡಿವಾಳ, ಪೂರ್ಣಿಮಾ, ರುಕ್ಮಿಣಿ, ಅನಿತಾ, ರಘುನಾಥರಾವ್ ಪಾಂಚಾಳ್, ಕಂಟೆಪ್ಪ ಕಾರಂಜೆ, ವೈಜಿನಾಥ, ಜ್ಯೋತಿ, ಭವಾನಿ, ಶಿವಶರಣಪ್ಪ ಹಣಮಶೆಟ್ಟಿ, ಜ್ಯೋತಿ ತಗಾರೆ ಮತ್ತಿತರರು ಭಾಗವಹಿಸಿದ್ದರು.

ನವೀನ್ ಘುಳೆ ಸ್ವಾಗತಿಸಿದರು. ವೈಜಿನಾಥ ಸ್ವಾಮಿ ನಿರೂಪಿಸಿದರು. ಹುಲೆಪ್ಪ ಬರಿದಾಬಾದೆ ವಂದಿಸಿದರು.

# ನಾಳೆ ವಡಗಾಂವದಲ್ಲಿ ಬುದ್ದನ ಮೂರ್ತಿ ಅನಾವರಣ: ಮಲ್ಲಪ್ಪ ನೇಳಗೆ



ಬೀದರ. ಜೂ. 30 : ನಾಳೆ( ಜುಲೈ 2ರಂದು ಬುಧವಾರ) ಔರಾದ್ ತಾಲ್ಲೂಕಿನ ವಡಗಾಂವ(ದೆ) ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿಯೇ ಅತಿ ಎತ್ತರದ ತಥಾಗತ ಗೌತಮ ಭಗವಾನ್ ಬುದ್ಧರ 15 ಅಡಿ ಎತ್ತರದ ಮೂರ್ತಿ ಅನಾವರಣ ಕಾರ್ಯಕ್ರಮ ನಡೆಯಲಿದೆ ಎಂದು ಅಲ್ಲಿಯ ಮಾಜಿ ಗ್ರಾಮ ಪಂಚಾಯತ ಅಧ್ಯಕ್ಷ ಮಲ್ಲಪ್ಪ ನೇಳಗೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಭಗವಾನ್ ಬುದ್ಧರ ತತ್ವಮತ್ತು ಸಿದ್ಧಾಂತಗಳಿಂದ ಪ್ರೇರೆಪಿತರಾದ ವಡಗಾಂವ (ದೆ) ಗ್ರಾಮದ ಕೆಎಎಸ್ ಅಧಿಕಾರಿ ಖಾಜಾ ಖಲಿಲುಲ್ಲಾರವರು ಈ ಬೃಹತ್ ಪ್ರತಿಮೆಯ ರೂವಾರಿಗಳು. ಮೂಲತ: ಮುಸಲ್ಮಾನ ಸಮುದಾಯದಲ್ಲಿ ಜನಿಸಿದ್ದರು ಕೂಡಾ ವಿವಿಧತೆಯಲ್ಲಿ ಏಕತೆ–ಯ ತತ್ವವನ್ನು ತಮ್ಮ ನೈಜ ಜೀವನದಲ್ಲಿ ರೂಢಿಸಿಕೊಂಡಿರುವ ಇವರು, ಬುದ್ಧರ ಬೃಹತ್ ಪ್ರತಿಮೆ ತಮ್ಮ ಸ್ವಂತ ದುಡ್ಡಿನಲ್ಲಿ ಆಕರ್ಷಕವಾಗಿ ನಿರ್ಮಾಣ ಮಾಡಿದ್ದಾರೆ. ವೃತ್ತಿಯಲ್ಲಿ ಅಧಿಕಾರಿಯಾಗಿದ್ದರೂ ಕೂಡಾ ಪ್ರತಿ ವರ್ಷ ಹುಟ್ಟು ಹಬ್ಬದ ಪ್ರಯುಕ್ತ ತಮ್ಮ ಗ್ರಾಮದ ಶೈಕ್ಷಣಿಕ, ಪಾರಿಸಾರಿಕ, ಸಾಮಾಜಿಕ, ಧಾರ್ಮಿಕ ಸೇವೆ ಮಾಡಿಕೊಂಡು ಬರುತ್ತಿದ್ದು ಈ ವರ್ಷದ ವಿಶೇಷತೆಯಾಗಿ ಅವರ ಹುಟ್ಟು ಹಬ್ಬದ ದಿನದಂದು ಭಗವಾನ್ ಬುದ್ಧರ ಮೂರ್ತಿ ಅನಾವರಣ ಕಾರ್ಯಕ್ರಮ ನಡೆಯಲಿದೆ.

ನಾಳೆ ಮಧ್ಯಾಹ್ನ 2.00 ಗಂಟೆಗೆ ವಡಗಾಂವ ಗ್ರಾಮದ ಅಂಬೇಡ್ಕರ್ ವೃತ್ತದಿಂದ ಮೂರ್ತಿ ಅನಾವರಣ ಕಾರ್ಯಕ್ರಮದ ವೇದಿಕೆ ಬೀದರ ರಸ್ತೆ ವರೆಗೆ ವಿವಿಧ ಕಲಾ ತಂಡಗಳೊಂದಿಗೆ ವಿವಿಧ ಸಮಾಜ ಸುಧಾರಕರ ಭಾವಚಿತ್ರ ಮೆರವಣಿಗೆ ನಡೆಯಲಿದ್ದು, ಭಗವಾನ್ ಬುದ್ಧರ ಮೂರ್ತಿಯನ್ನು ನಾಳೆ ಸಂಜೆ 4.00 ಗಂ–ಟೆಗೆ ನಾಡೋಜ ಭಾಲ್ಕಿಯ ಪೂಜ್ಯ ಡಾ.ಬಸವಲಿಂಗ ಪಟ್ಟದೇವರ ಅಮೃತ ಹಸ್ತದಿಂದ ಅನಾವರಣ ನಡೆಯಲಿದೆ. ಮುಂದೆ ಶ್ರೀ ಶರಣಬಸವ ಕಲ್ಯಾಣ ಮಂಟಪದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಕಾರ್ಯಕ್ರಮದಲ್ಲಿ ಸರ್ವಧರ್ಮದ ಮಠಾಧೀಶರು, ಭಾಗವಹಿಸುತ್ತಿದ್ದು ಸಾಹಿತಿಗಳಾದ ಡಾ. ಶಿವಲಿಂಗ ಹೇಡೆರವರು ಭಗವಾನ್ ಬುದ್ಧರ ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ. ತದನಂತರ ಸಂಜೆ 6.00 ಗಂಟೆಗೆ ಖಾಜಾ ಖಲಿಲುಲ್ಲಾ ರವರ ಹುಟ್ಟು ಹಬ್ಬ ಕೂಡಾ ನಡಿಯಲಿದ್ದು ಇದೇ ವೇದಿಕೆಯ ಮೂಲಕ ಪತ್ರಕರ್ತರ ದಿನಾಚರಣೆ ಅಂಗವಾಗಿ ಪತ್ರಕರ್ತರು ಹಾಗೂ ವೈದ್ಯರಿಗೆ ಗೌರವ ಸನ್ಮಾನ ಕಾರ್ಯಕ್ರಮ ನಡೆಯಲಿದೆ. ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಅಣಿಯಾಗಿ ಭಗವಾನ್ ಬುದ್ಧರ ಆಶೀರ್ವಾದ ಪಡೆದು ಪುನಿತರಾಗಬೇಕೆಂದು ನೇಳಗೆ ಕರೆ ನೀಡಿದರು.

ಕಾರ್ಯಕ್ರಮದ ವಿವರಣೆ ನೀಡಿದ ನೇಳಗೆ ಅವರು, ವೈಶಾಲಿ ನಗರದ ಪೂಜ್ಯ ಭಂತೆ ಜ್ಞಾನಸಾಗರ ಅವರು ಸಾನಿಧ್ಯ ವಹಿಸಲಿದ್ದು, ಜೈ ಭಾರತ ಮಾತಾ ಸೇವಾ ಸಮಿತಿ ಅಧ್ಯಕ್ಷರಾದ ಪೂಜ್ಯ ಹವಾ ಮಲ್ಲಿನಾಥ ಮಹಾರಾಜರು ನೇತೃತ್ವ ವಹಿಸುವರು. ಮಂಗಲಪೇಟ್ ಮೆಥೋಲಿಸ್ಟ್ ಚರ್ಚಿನ ಜಿಲ್ಲಾ ಮೇಲ್ವಿಚಾರಕರಾದ ಡಿಸೋಜ ಥಾಮಸ್ ಸಮ್ಮುಖ ವಹಿಸಲಿದ್ದು, ಕಲಬುರಗಿಯ ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿ ಖಾಜಾ ಖಲಿಲೂಲ್ಲಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಶಾಹಿನ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಅಬ್ದುಲ್ ಖಾದಿರ್, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸುರೇಶ ಚನಶೆಟ್ಟಿ, ಲಕ್ಷ್ಮೀಬಾಯಿ ಕಂಠಾಣೆ ಕಾಲೇಜಿನ ಉಪನ್ಯಾಸಕಿ ಕು. ಲತಾ ದಂಡೆ, ವಡಗಾಂವ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸಿದ್ದಾರೆಡ್ಡಿ, ಸಿದ್ದಗಂಗಾ ಮಠದ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಶಿವಕುಮಾರ ಪಾಟೀಲ್ ತೇಗಂಪುರ್, ನ್ಯಾಯವಾದಿ ಖಾಜಾ ಕಲಮ್ ಉಲ್ಲಾ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದರು. ಅಣದೂರ ವೈಶಾಲಿ ನಗರದ ಪೂಜ್ಯ ಭಂತೇ ಜ್ಞಾನಸಾಗರ, ಭಂತೇ ಸಂಘಸೇವಕ, ಮುಖಂಡರಾದ ಶಿವಕುಮಾರ ಪಾಟೀಲ್ ತೇಗಂಪುರ, ಗ್ರಾಮದ ಮುಖಂಡರಾದ ರವಿ ವಡಗಾಂವ, ಓಂಕಾರ ಮೇತ್ರೆ, ರಾಜಕುಮಾರ ಅಡಕೆ, ಪ್ರಣಿತ ಅತನೂರೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಅಮರೇಶ್ವರ ದೇವಾಲಯ, ಔರಾದ ಬೀದರ್ ಇತಿಹಾಸ ಮತ್ತು ಮಹಿಮೆ



ಬೀದರ. ಜೂ. 30: ಶ್ರೀ ಅಮರೇಶ್ವರ ದೇವಾಲಯವು ಬೀದರ್ ಜಿಲ್ಲೆಯ ಔರಾದ್ ಪಟ್ಟಣದ ಹೃದಯಭಾಗದಲ್ಲಿ ನೆಲೆಗೊಂಡಿರುವ ಒಂದು ಐತಿಹಾಸಿಕ ಮತ್ತು ಪ್ರಮುಖ ಧಾರ್ಮಿಕ ಕೇಂದ್ರವಾಗಿದೆ. ಈ ದೇವಾಲಯವು ಭಗವಾನ್ ಶಿವನಿಗೆ ಸಮರ್ಪಿತವಾಗಿದೆ.

ಇತಿಹಾಸ

ನಿರ್ಮಾಣ ಕಾಲ: ಶ್ರೀ ಅಮರೇಶ್ವರ ದೇವಾಲಯವನ್ನು 10ನೇ ಶತಮಾನದಲ್ಲಿ ನಿರ್ಮಿಸಲಾಗಿದೆ ಎಂದು ನಂಬಲಾಗಿದೆ.

ಪ್ರಾಚೀನ ಹೆಸರು: ಔರಾದ್ ಪ್ರದೇಶವು ಹಿಂದೆ 'ಅಮರೇಶ್ವರವಾಡಿ', 'ಅಮರವಾಡಿ', 'ಅವರವಾಡಿ', 'ಅವರಾದಿ' ಮತ್ತು 'ಅವರಾದ' ಎಂಬ ಹೆಸರುಗಳಿಂದ ಕರೆಯಲ್ಪಡುತ್ತಿತ್ತು ಎಂದು ದೇವಾಲಯದಲ್ಲಿ ದೊರೆತ ಶಾಸನಗಳಿಂದ ತಿಳಿದುಬರುತ್ತದೆ. ಕಾಲಾನಂತರದಲ್ಲಿ, ಇದು 'ಔರಾದ್' ಎಂದು ಹೆಸರು ಪಡೆಯಿತು. ಸ್ಥಳಪುರಾಣ: ಸ್ಥಳೀಯ ಐತಿಹ್ಯಗಳ ಪ್ರಕಾರ, 10ನೇ ಶತಮಾನಕ್ಕಿಂತ ಮೊದಲು ಸ್ವರ್ಗದಿಂದ ಬಂದ ಅಮರೇಶ್ವರ ಎಂಬ ಸಂತರು ಇಲ್ಲಿ ತೀವ್ರ ತಪಸ್ಸು ಮಾಡುತ್ತಿದ್ದರು. ಆ ಸಮಯದಲ್ಲಿ, ಅವರ ಸುತ್ತ ಒಂದು ದೊಡ್ಡ ಇರುವೆಗಟ್ಟವು ಬೆಳೆಯಿತು. ಪ್ರತಿದಿನ ಒಂದು ಹಸು ಬಂದು ಈ ಇರುವೆಗಟ್ಟದ ಮೇಲೆ ಹಾಲು ಸುರಿಯುತ್ತಿತ್ತು. ಇದನ್ನು ಗಮನಿಸಿದ ಹಸುವಿನ ಮಾಲೀಕನು ಆ ಸ್ಥಳವನ್ನು ಅಗೆದಾಗ, ಅಲ್ಲಿ ಒಂದು 'ಉದ್ಭವ ಲಿಂಗ' (ಸ್ವ–ಯಂ ಉದ್ಭವಿಸಿದ ಲಿಂಗ) ಕಂಡುಬಂದಿತು. ಈ ಪವಿತ್ರ ಘಟನೆಯ ನೆನಪಿಗಾಗಿ ಭಕ್ತರು ಪ್ರಸ್ತುತ ದೇವಾಲಯವನ್ನು ನಿರ್ಮಿಸಿದ್ದಾರೆ.

ಶಾಸನಗಳು: ದೇವಾಲಯದಲ್ಲಿ ದೊರೆತ 12ನೇ ಶತಮಾನದ ಶಾಸನದ ಪ್ರಕಾರ, ದೇವಸ್ಥಾನದ ಅಭಿವೃದ್ಧಿಗಾಗಿ ದೋಡ್ಡ ಬೆಟ್ಟದ ಪಶ್ಚಿಮಕ್ಕೆ 15 ಘಳೆ ಭೂಮಿಯನ್ನು ಶ್ರೀ ಅಮರೇಶ್ವರನಿಗೆ ದಾನ ಮಾಡಲಾಗಿತ್ತು.

ವಾಸ್ತುಶಿಲ್ಪ: ಈ ದೇವಾಲಯವು ಸಾಂಪ್ರದಾಯಿಕ ದ್ರಾವಿಡ ಶೈಲಿಯ ವಾಸ್ತುಶಿಲ್ಪವನ್ನು ಹೊಂದಿದೆ. ಸುಂದರವಾಗಿ ಕೆತ್ತಿದ ಕಂಬಗಳು ಮತ್ತು ದೊಡ್ಡ ಮಂಟಪ ಇದರ ವೈಶಿಷ್ಟ್ಯಗಳಾಗಿವೆ. ದೇವಾಲಯದ ಪ್ರವೇಶದ್ವಾರದಲ್ಲಿ ಸಮೃದ್ಧಿ ಮತ್ತು ಯೋಗಕ್ಷೇಮವನ್ನು ಪ್ರತಿನಿಧಿಸುವ ಎರಡು ಗಜ ಲಕ್ಷ್ಮಿಯರ ಶಿಲ್ಪಗಳನ್ನು ಕಾಣಬಹುದು.

ಮಹಿಮೆ ಶಿವನ ನೆಲೆ: ಶ್ರೀ ಅಮರೇಶ್ವರ ದೇವಾಲಯವು ಭಗವಾನ್ ಅಮರೇಶ್ವರ (ಶಿವನ ರೂಪ) ನೆಲೆಸಿರುವ ಪವಿತ್ರ ಸ್ಥಳವಾಗಿದೆ. ಇಲ್ಲಿನ ಶಿವಲಿಂಗವನ್ನು 'ಅಮರಲಿಂಗ' ಎಂದು ಕರೆಯಲಾಗುತ್ತದೆ. ಪ್ರಮುಖ ಯಾತ್ರಾ ಕೇಂದ್ರ: ಔರಾದ್ ಬೀದರ್‌ನ ಪ್ರಮುಖ ಧಾರ್ಮಿಕ ಕೇಂದ್ರಗಳಲ್ಲಿ ಒಂದಾಗಿದೆ. ಇಲ್ಲಿಗೆ ಕರ್ನಾಟಕ, ಮಹಾರಾಷ್ಟ್ರ ಮತ್ತು ಆಂಧ್ರಪ್ರದೇಶದಿಂದ ಸಾವಿರಾರು ಭಕ್ತರು ಭೇಟಿ ನೀಡುತ್ತಾರೆ. ಜಾತ್ರೆ: ಪ್ರತಿ ವರ್ಷ ಮಹಾ ಶಿವರಾತ್ರಿಯ ಸಂದರ್ಭದಲ್ಲಿ ಅಮರೇಶ್ವರ ಜಾತ್ರೆಯನ್ನು ಏಳು ದಿನಗಳ ಕಾಲ ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಈ ಜಾತ್ರೆಯು ಫೆಬ್ರವರಿ–ಮಾರ್ಚ್ ತಿಂಗಳುಗಳಲ್ಲಿ ನಡೆಯುತ್ತದೆ ಮತ್ತು ಇದು ಜಾನುವಾರು ವ್ಯಾಪಾರದ ಪ್ರಮುಖ ಕೇಂದ್ರವೂ ಹೌದು. ಆಶೀರ್ವಾದ: ಭಕ್ತರು ಇಲ್ಲಿಗೆ ಬಂದು ಶ್ರೀ ಅಮರೇಶ್ವರನ ಆಶೀರ್ವಾದವನ್ನು ಪಡೆ–ಯುತ್ತಾರೆ. ಪುನರುತ್ಥಾನ ಮತ್ತು ನವೀಕರಣ: ಕಾಲಕಾಲಕ್ಕೆ ದೇವಾಲಯದ ನವೀಕರಣ ಮತ್ತು ಅಭಿವೃದ್ಧಿ ಕಾರ್ಯಗಳು ನಡೆಯುತ್ತಿರುತ್ತವೆ. ಶ್ರೀ ಅಮರೇಶ್ವರ ದೇವಾಲಯವು ಔರಾದ್‌ನ ಧಾರ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಯ ಒಂದು ಅವಿಭಾಜ್ಯ ಅಂಗವಾಗಿದೆ. ಇದು ಭಕ್ತರಿಗೆ ಶಾಂತಿ ಮತ್ತು ಆಧ್ಯಾತ್ಮಿಕ ಅನುಭವವನ್ನು ನೀಡುವ ತಾಣವಾಗಿದೆ.

# ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 30: 2025-26ನೇ ಸಾಲಿನ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಆನ್‌ಲೈನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮ ನಿಯಮಿತ ಜಿಲ್ಲಾ ವ್ಯವಸ್ಥಾಪಕರಾದ ಟಿ.ಪ್ರಿಯದರ್ಶಿನಿ ಅವರು ತಿಳಿಸಿದ್ದಾರೆ.

**ಸಾಮಾನ್ಯ ಅರ್ಹತೆಗಳು :** ಸಾಮಾನ್ಯ ವರ್ಗದಲ್ಲಿ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿರಬೇಕು, ಜಾತಿ ಮತ್ತು ಆದಾಯ ಪ್ರಮಾಣ ಪತ್ರ "ನಮೂನೆ-ಜಿ"ಯಲ್ಲಿ ಪಡೆದಿರಬೇಕು (ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು), ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು, ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು, ಅರ್ಜಿದಾರರು ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡಿಂಗ್ ಮಾಡಿಸಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33ರಷ್ಟು ವಿಶೇಷಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.5 ರಷ್ಟು ಮೀಸಲಾತಿ ಇರಿಸಿದೆ. ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. (ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಮಾತ್ರ ಇಬ್ಬರಿಗೆ ಅವಕಾಶವಿರುತ್ತದೆ.)

ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯ ಅರ್ಹತೆಗಳು : ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ರೂ.3,00,000 ರೂ.ಗಳ ಒಳಗಿರಬೇಕು, 18 ರಿಂದ 55 ವರ್ಷ ಒಳಗಿರಬೇಕು, ಈ ಯೋಜನೆಯಲ್ಲಿ 1,00,000 ರೂ.ಗಳ ಸಾಲ ಒದಗಿಸಲಾಗುವುದು. ಈ ಮೊತ್ತದಲ್ಲಿ ಶೇ.20ರಷ್ಟು ಸಹಾಯಧನ ಹಾಗೂ ಶೇ.80ರಷ್ಟು ಸಾಲವನ್ನು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಮಂಜೂರು ಮಾಡಲಾಗುವುದು, 2 ತಿಂಗಳ ವಿರಾಮ ಅವಧಿ ಇರುತ್ತದೆ ನಂತರ ಸಾಲವನ್ನು 34 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು, 2019-20ನೇ ಸಾಲಿನಿಂದ 2021-22ನೇ ಸಾಲಿನವರೆಗೆ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ಸಾಲ ಪಡೆದು ಸಕಾಲದಲ್ಲಿ ಸಾಲವನ್ನು ಪೂರ್ಣ ಪ್ರಮಾಣದಲ್ಲಿ ಮರುಪಾವತಿಸಿದ ಫಲಾನುಭವಿಗಳಿಗೆ ಪುನಃ ಅರ್ಜಿಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಬ್ಯಾಂಕ್‌ಗಳ ಸಹಯೋಗದೊಂದಿಗೆ ಆರ್ಯವೈಶ್ಯ ಆಹಾರ ವಾಹಿನಿ, ಯೋಜನೆಯ ಅರ್ಹತೆಗಳು : ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ 6,00,000 ರೂ.ಗಳ ಒಳಗಿರಬೇಕು, 21 ರಿಂದ 55 ವರ್ಷ ಒಳಗಿರಬೇಕು, ಅಭ್ಯರ್ಥಿಯು ಜಜಟಟಡಂತಿ ಛಿಂಚಿಡಿಜ (ಎಲೆಕ್ಟ್ರಿಕ್, ಸಿ.ಎನ್.ಜಿ) ತ್ರಿಚಕ್ರ ವಾಹನ ಅಥವಾ ನಾಲ್ಕು ಚಕ್ರದ ವಾಹನವನ್ನು ಖರೀದಿಸಲು ನಿಗಮದಿಂದ 1.00 ಲಕ್ಷ ರೂ.ಗಳ ಋಣಭುಜಥಿ ನೀಡಲಾಗುವುದು. ಬಾಕಿ ಮೊತ್ತವನ್ನು ಯಾವುದಾದರು ಬ್ಯಾಂಕ್‌ಗಳಿಂದ ಸಾಲ ಪಡೆಯಬೇಕಾಗಿರುತ್ತದೆ. ವಾಹನವನ್ನು ಆಹಾರವಾಹಿನಿಯನ್ನಾಗಿ ಪರಿವರ್ತಿಸಿದ್ದಲ್ಲಿ ಮಾತ್ರ ಎರಡನೇ ಕಂತಿನ ಮೊತ್ತ 1 ಲಕ್ಷ ರೂ.ಗಳ ಋಣಭುಜಥಿಯನ್ನು ನೇರವಾಗಿ ಫಲಾನುಭವಿಗೆ ಡಿ.ಬಿ.ಟಿ ಮೂಲಕ ಬಿಡುಗಡೆ ಮಾಡಲಾಗುವುದು. Only after doing fabrication of vehicle in kitchengradesteel2nd instalmentof1.00lakh subsidywillbereleased through DBT.

ವಾಸವಿ ಜಲಶಕ್ತಿ ಯೋಜನೆಯ ಅರ್ಹತೆಗಳು: ಈ ಯೋಜನೆಯಡಿ 2 ರಿಂದ 15 ಎಕರೆ ಕೃಷಿ ಭೂಮಿ ಹೊಂದಿರುವವರಿಗೆ ನೀರಾವರಿ ಸೌಲಭ್ಯವನ್ನು ಒದಗಿಸಲು ಸಾಲ ಸಹಾಯಧನವನ್ನು ನೀಡಲಾಗುವುದು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ 6,00,000 ರೂ.ಗಳ ಒಳಗಿರಬೇಕು, 21 ರಿಂದ 55 ವರ್ಷ ಒಳಗಿರಬೇಕು, ಈ ಯೋಜನೆಯಡಿ ಗರಿಷ್ಠ 2,00,000 ರೂ.ಗಳ ಸಾಲವನ್ನು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ಒದಗಿಸಲಾಗುವುದು ಹಾಗೂ ವಿದ್ಯುದೀಕರಣಕ್ಕಾಗಿ 50,000 ರೂ.ಗಳ ಸಹಾಯಧನ ನೀಡಲಾಗುವುದು. 6 ತಿಂಗಳ ವಿರಾಮಾವಧಿ ಇರುತ್ತದೆ ನಂತರ ಸಾಲವನ್ನು 34 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು.

**ಅರಿವು ಶೈಕ್ಷಣಿಕ ಸಾಲ ಯೋಜನೆಯ ಅರ್ಹತೆಗಳು :** ಈ ಯೋಜನೆಯಲ್ಲಿ ಸಿ.ಇ.ಟಿ., ಎನ್.ಇ.ಇ.ಟಿ ಪ್ರವೇಶ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ವೃತ್ತಿಪರ ಕೋರ್ಸ್ ಹಾಗೂ ಪಿ.ಹೆಚ್.ಡಿನಲ್ಲಿ ವ್ಯಾಸಂಗ ಮಾಡುವ ಆರ್ಯ ವೈಶ್ಯ ವಿದ್ಯಾರ್ಥಿಗಳಿಗೆ ವಾರ್ಷಿಕ 1,00,000 ರೂ.ಗಳ ಸಾಲವನ್ನು ಶೇ.2ರ ಬಡ್ಡಿದರದಲ್ಲಿ ಶೈಕ್ಷಣಿಕ ಸಾಲ ನೀಡಲಾಗುವುದು. ವ್ಯಾಸಂಗ ಪೂರ್ಣಗೊಂಡ ನಂತರ 4 ತಿಂಗಳ ವಿರಾಮಾವಧಿ ಇರುತ್ತದೆ. ನಂತರ ಸಾಲವನ್ನು 36 ಮಾಸಿಕ ಕಂತುಗಳಲ್ಲಿ ಮರುಪಾವತಿಸಬೇಕು. 18 ರಿಂದ 35 ವರ್ಷ ಒಳಗಿರಬೇಕು, ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ 6,00,000 ರೂ.ಗಳ ಒಳಗಿರಬೇಕು, (ಈ ಯೋಜನೆಗೆ ಸಂಬಂಧಪಟ್ಟಂತೆ ಸಿ.ಇ.ಟಿ ಮತ್ತು ನೀಟ್ Counseling ಮುಗಿದ ನಂತರ ಅರ್ಜಿಗಳನ್ನು ಸ್ವೀಕರಿಸಲಾಗುವುದು)

ವಿಶೇಷ ಸೂಚನೆ : ಯೋಜನೆಗಳ ಮಾರ್ಗಸೂಚಿ ಹಾಗೂ ಅರ್ಹತೆಗಳ ಸಂಕ್ಷಿಪ್ತ ವಿವರಗಳನ್ನು ಈ ಕ್ಯೂಆರ್ ಕೋಡ್‌ಅನ್ನು ಗೂಗಲ್‌ನಲ್ಲಿ ಸ್ಕ್ಯಾನ್ ಮಾಡಿ ಪಡೆಯಬೇಕು. ಸಂಪರ್ಕ ವಿವರ ನಿಗಮದ ಸಹಾಯವಾಣಿ 9448451111 (ಬೆಳಿಗ್ಗೆ 10 ರಿಂದ ಸಂಜೆ 5.30ರ ವರೆಗೆ ಸಂಪರ್ಕಿಸಬಹುದಾಗಿದೆ), ಯೋಜನೆಗಳ ಮಾರ್ಗಸೂಚಿಗಳು, ಸಲ್ಲಿಸಬೇಕಾದ ದಾಖಲೆಗಳು, ಜಿಲ್ಲಾ ವ್ಯವಸ್ಥಾಪಕರ ಕಛೇರಿ ವಿಳಾಸಗಳನ್ನು ಹಾಗೂ ಎಲ್ಲಾ ವಿವರ kacdc.karnataka.gov.inನಲ್ಲಿ ಭೇಟಿ ನೀಡಬೇಕು.

ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ ಈ ಯೋಜನೆಗಳಡಿ ಸಾಲ ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಆನ್‌ಲೈನ್ ಇಚಿಛಿಜಘಿ.ಇಚಿಡಿ-ಟಿಚಿಣಚಿಞಚಿ.ರಂತಿ.ಎಟಿ ನಲ್ಲಿ 2025ರ ಜುಲೈ 31ರ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿ ಕೇಂದ್ರ ಕಛೇರಿಯ ಸಹಾಯವಾಣಿ ಸಂಖ್ಯೆ 9448451111, ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ (ನಿ), ಮಿನಿ ವಿಧಾನಸೌಧ 2ನೇ ಮಹಡಿ ಸಿ ಬ್ಲಾಕ್ ರೂ.ನಂ ಸಿ 14 ಚಿತ್ತಾಪೂರ ರೋಡ ಯಾದಗಿರಿ ದೂ.ಸಂ.08473 253746ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಂಸ್ಕೃತಿಕ ಸೌರಭ, ಯುವಸೌರಭ, ಚಿಗುರು ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜೂನ್30-2025ನೇ ಸಾಲಿನ ಕ್ರಿಯಾಯೋಜನದಿಂದ ಸಾಂಸ್ಕೃತಿಕಸೌರಭ, ಯುವಸೌರಭ, ಚಿಗುರು ಕಾರ್ಯಕ್ರಮ ಜಿಲ್ಲಾ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ.

ಸಾಂಸ್ಕೃತಿಕಸೌರಭಕಾರ್ಯಕ್ರಮ : ಯಾದಗಿರಿ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2025-26ನೇ ಸಾಲಿನ "ಸಾಂಸ್ಕೃತಿಕ ಸೌರಭ" ಕಾರ್ಯಕ್ರಮವನ್ನು ಜಿಲ್ಲಾಮಟ್ಟದಲ್ಲಿ ಏರ್ಪಡಿಸಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಆಕಾಶವಾಣಿಯ ಬಿ, ಬಿ-ಹೈ ಬಿ, ಬಿ-ಹೈ ಮತ್ತು 'ಎ' ಗ್ರೇಡ್ ಕಲಾವಿದರು ಹಾಗೂ ಸರ್ಕಾರದಿಂದ ಕೊಡಮಾಡುವ ಪ್ರಶಸ್ತಿ ಪುರಸ್ಕೃತ ಕಲಾವಿದರಾಗಿರಬೇಕು ಹಾಗೂ ಕಾರ್ಯಕ್ರಮದಲ್ಲಿ ಭಾಗವಹಿಸುವ ಶಾಸ್ತ್ರೀಯ ಸಂಗೀತ, ಕರ್ನಾಟಕ, ಹಿಂದೂಸ್ಥಾನಿ, ಗಾಯನ ವಾದ್ಯ ಸಂಗೀತ, ಸುಗಮ ಸಂಗೀತ, ವಚನ ಸಂಗೀತ, ಜನಪದ ಗೀತೆಗಳು, ಸಮೂಹನೃತ್ಯ, ನೃತ್ಯರೂಪಕ, ಜನಪದ ಮೂಡಲಪಾಯ, ಬಯಲಾಟ, ಗೊಂಬೆಮೇಳ ಮಾಡುವ ಕಲಾವಿದರು ಸ್ವವಿವರ ಹಾಗೂ ತಂಡದ ವಿವರಗಳನ್ನು ಪಾಸ್ ಪೋರ್ಟ್ ಸೈಜ್ ಭಾವ ಚಿತ್ರದೊಂದಿಗೆ ಜುಲೈ 6ರ ಒಳಗೆ ಸಹಾಯಕ ನಿರ್ದೇಶಕರ ಕಛೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯಾದಗಿರಿ ಜಿಲ್ಲೆಗೆ ತಮ್ಮ ಸ್ವ ವಿವರವನ್ನು ಸಲ್ಲಿಸಬೇಕು.

ಯುವಸೌರಭ ಕಾರ್ಯಕ್ರಮ: ಯಾದಗಿರಿ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2025-26ನೇ ಸಾಲಿನ ಯುವಸೌರಭ ಕಾರ್ಯಕ್ರಮವನ್ನು ಜಿಲ್ಲಾಮಟ್ಟದಲ್ಲಿ ಏರ್ಪಡಿಸಲಾಗುತ್ತಿದ್ದು, ಈ ಕಾರ್ಯಕ್ರಮದಲ್ಲಿ ಭಾಗವಹಿಸುವವರು ಸುಗಮ ಸಂಗೀತ, ವಚನ ಸಂಗೀತ, ಜನಪದ ಗೀತೆಗಳು, ಸಮೂಹ ನೃತ್ಯ, ನೃತ್ಯ ರೂಪಕ ಜನಪದ ಪ್ರದರ್ಶನ ಕಲಾತಂಡ, ನಾಟಕ, ಯಕ್ಷಗಾನ, ಮೂಡಲಪಾಯ, ಬಯಲಾಟ, ಗೊಂಬೆಮೇಳ ಮಾಡುವ ಕಲಾವಿದರು ಸ್ವವಿವರ ಹಾಗೂ ತಂಡದ ವಿವರಗಳನ್ನು ಪಾಸ್ ಪೋರ್ಟ್ ಸೈಜ್ ಭಾವ ಚಿತ್ರದೊಂದಿಗೆ 15 ರಿಂದ 30 ವರ್ಷದ ವಯೋಮಾನದ ಪ್ರತಿಭಾವಂತ ಯುವ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದ್ದು ವಯಸ್ಸಿನ ದೃಢೀಕರಣದೊಂದಿಗೆ ಜುಲೈ 6ರ ಒಳಗೆ ಸಹಾಯಕ ನಿರ್ದೇಶಕರ ಕಛೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯಾದಗಿರಿ ಜಿಲ್ಲೆಗೆ ತಮ್ಮ ಸ್ವವಿವರವನ್ನು ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಿಗುರು ಕಾರ್ಯಕ್ರಮ :ಯಾದಗಿರಿ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2025-26ನೇ ಸಾಲಿನ 'ಚಿಗುರು' ಕಾರ್ಯಕ್ರಮವನ್ನು ಜಿಲ್ಲಾ ಮಟ್ಟದಲ್ಲಿ ಏರ್ಪಡಿಸಲಾಗುತ್ತಿದೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ಶಾಸ್ತ್ರೀಯ ಸಂಗೀತ, ಕರ್ನಾಟಕ, ಹಿಂದೂಸ್ಥಾನಿ, ಗಾಯನ ವಾದ್ಯ ಸಂಗೀತ, ಸುಗಮ ಸಂಗೀತ, ವಚನ ಸಂಗೀತ, ಜನಪದ ಗೀತೆಗಳು, ಸಮೂಹ ನೃತ್ಯ, ನೃತ್ಯರೂಪಕ, ನಾಟಕ, ಯಕ್ಷಗಾನ, ಮೂಡಲಪಾಯ, ಬಯಲಾಟ, ಗೊಂದ ವೇಳೆ ಹಾಗೂ ಏಕಪಾತ್ರಾಭಿನಯ ಮಾಡುವ ಕಲಾವಿದರು 8 ರಿಂದ 14 ವರ್ಷ ಒಳಗೆ ಪ್ರತಿಭಾವಂತ ಮಕ್ಕಳು ಭಾಗವಹಿಸಬೇಕು, ವಯಸ್ಸಿನ ದೃಢೀಕರಣ ಪತ್ರ ಹಾಗೂ ಪ್ರದರ್ಶಿಸಲಿರುವ ಕಲೆಯ ವಿವರವನ್ನು ಪಾಸ್ ಪೋರ್ಟ್ ಸೈಜ್ ಭಾವ ಚಿತ್ರದೊಂದಿಗೆ ಶಾಲಾ ಮುಖ್ಯಸ್ಥರಿಂದ ದೃಢೀಕರಿಸಿ ಜುಲೈ 6ರ ಒಳಗೆ ಸಹಾಯಕ ನಿರ್ದೇಶಕರ ಕಛೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯಾದಗಿರಿ ಜಿಲ್ಲೆಗೆ ತಮ್ಮ ಸ್ವ ವಿವರವನ್ನು ಇಲ್ಲಿಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜು.10 ರಂದು ಶ್ರೀ ಹಡಪದ ಅಪ್ಪಣ್ಣ ಜಯಂತ್ಯೋತ್ಸ

# ಪೂರ್ವಸಿದ್ಧತಾ ಸಭೆಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 30-: ಇದೇ 2025ರ ಜುಲೈ 10 ರಂದು ಶ್ರೀ ಹಡಪದ ಅಪ್ಪಣ್ಣ ಜಯಂತ್ಯೋತ್ಸವನ್ನು ಆಚರಣೆ ಹಿನ್ನೆಲೆ ಪೂರ್ವಸಿದ್ಧತಾ ಸಭೆಯನ್ನು ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ ಅವರ ಅಧ್ಯಕ್ಷತೆಯಲ್ಲಿ 2025ರ ಜುಲೈ 3ರ ಗುರುವಾರ ರಂದು ಬೆಳಿಗ್ಗೆ 11 ಗಂಟೆಗೆ ಯಾದಗಿರಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ.

ಶ್ರೀ ಹಡಪದ ಅಪ್ಪಣ್ಣ ಜಯಂತ್ಯೋತ್ಸವನ್ನು ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗುತ್ತಿದ್ದು, ಈ ಜಯಂತಿ ಆಚರಣೆಯ ಪೂರ್ವಸಿದ್ಧತಾ ಸಭೆಗೆ ಅಂದು ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಹಾಗೂ ಸಮಾಜದ ಬಾಂಧವರು ಕನ್ನಡಪರ ಸಂಘಟನೆಗಳು ಮತ್ತು ಸಾರ್ವಜನಿಕರು ತಪ್ಪದೇ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರುನಾಡು ವಿಜಯಸೇನೆ ನಾಡು ನುಡಿಗಾಗಿ ಸದಾಸಿದ್ಧರೆಂದ -ಸುಲ್ತಾನಪುರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಕರುನಾಡು ವಿಜಯಸೇನೆ ಅಫಜಲಪುರ ತಾಲೂಕು ಅಧ್ಯಕ್ಷರಾಗಿ ಸಿದ್ದಾರಾಮ ಸುಲ್ತಾನಪುರ ಸರ್ವಾನುಮತದಿಂದ ಕಲಬುರಗಿ ನಗರದ ಜಿಲ್ಲಾ ಕಚೇರಿಯಲ್ಲಿ ಜಿಲ್ಲಾಧ್ಯಕ್ಷರು ಹಾಗೂ ಸರ್ವಸದಸ್ಯರ ಸಮುಖದಲ್ಲಿ ಆಯ್ಕೆ ಮಾಡಿ ಆದೇಶ ಪತ್ರ ನೀಡಲಾಯಿತು.

ನೂತನವಾಗಿ ಆಯ್ಕೆಯಾದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ತಾಲೂಕು ಅಧ್ಯಕ್ಷ ಸಿದ್ದು ಸುಲ್ತಾನಪುರ ಗಡಿನಾಡಿಗೆ ಹೊಂದಿಕೊಂಡ ಕಲಬುರಗಿ ಜಿಲ್ಲೆಯ ಹಲವು ತಾಲೂಕುಗಳಿಗೆ ಮಹಾರಾಷ್ಟ್ರದ ನಂಟು ಹೆಚ್ಚಾಗಿದೆ. ಇದರಿಂದ ಬಹುತೇಕ ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಕನ್ನಡ ಪದ ಬಳಕೆ ಕಡಿಮೆಯಾಗುತ್ತಿರುವುದು ಶೋಚನೀಯ ಸಂಗತಿಯಾಗಿದೆ. ಕನ್ನಡ ನಾಡು ನುಡಿಗಾಗಿ ನಮ್ಮ ಉಸಿರು ಇರೋವರೆಗೂ ಹೋರಾಡಬೇಕು ಎನ್ನುವ ಕಿಚ್ಚು ಕನ್ನಡಿಗರೆಲ್ಲರಲ್ಲೂ ಇದೆ. ಆದರೆ ಸರಿಯಾದ ಮಾರ್ಗ ಸಿಗದಿದ್ದಲ್ಲ. ಅಲ್ಪಮಟ್ಟದ ಹಿಂಜರಿಕೆಗೆ ಕಾರಣವಾಗಿದೆ. ಇನ್ನೂಮುಂದೆ ಕರುನಾಡು ವಿಜಯಸೇನೆಯ ಸಂಘಟನೆಯ ಸಹಕಾರದಲ್ಲಿ ಗಡಿನಾಡಲ್ಲಿ ಕನ್ನಡದ ಬಾವೂಟ ಹಾರಿಸಲು ಸದಾ ಸಿದ್ದನಾಗಿರುತ್ತೆನೆ. ನಾಡು ನುಡಿಗಾಗಿ ಜೀವ ತ್ಯಾಗ ಮಾಡಲು ಸಿದ್ದನಿರುತ್ತೆನೆ. ನನ್ನ ತಾಲೂಕಿಗೆ ಹೊಂದಿಕೊಂಡಿರುವ ಮಹಾರಾಷ್ಟ್ರದ ಪ್ರಭಾವ ಯಾವುದೇ ಕಾರಣಕ್ಕೂ ಮುಂದುವರೆಯಲು ಬಿಡುವುದಿಲ್ಲ. ಪ್ರತಿ ಗ್ರಾಮಗಳಿಗೆ ತೆರಳಿ ಅಲ್ಲಿರುವ ಕನ್ನಡದ ಕಟ್ಟಾಳುಗಳನ್ನು ಹುರಿದುಂಬಿಸಿ ನಾಡು ನುಡಿಗಾಗಿ ಹೋರಾಡಲು ಸನ್ನದ್ದರನ್ನಾಗುವಂತೆ ಪ್ರೇರೆಪಿಸುತ್ತೆನೆ. ತಾಲೂಕಿನ ಎಲ್ಲಾ ಗ್ರಾಮಗಳಲ್ಲಿ ಕರುನಾಡ ವಿಜಯಸೇನೆ ಗ್ರಾಮ ಘಟಕಗಳನ್ನು ಮಾಡಲು ಪ್ರಯತ್ನಿಸುತ್ತೆನೆ. ನನ್ನ ಮೇಲೆ ಭರವಸೆಯನ್ನಿಟ್ಟು ತಾಲೂಕು ಅಧ್ಯಕ್ಷರ ಜವಾಬ್ದಾರಿ ನೀಡಿದ ಜಿಲ್ಲಾಧ್ಯಕ್ಷರು ಹಾಗೂ ರಾಜ್ಯಧ್ಯಕ್ಷರಿಗೂ ಕೃತಜ್ಞರಾಗಿದ್ದು, ಅವರ ಮಾರ್ಗದರ್ಶನದಲ್ಲಿ ಕನ್ನಡ ತಾಯಿಯ ಋಣ ತಿರಿಸುತ್ತೆನೆ ಎಂದರು. ನಂತರ ಜಿಲ್ಲಾ ಸಂಘಟನಾ ಸಲಹೆಗಾರರಾಗಿ ಗಣಪತಿ ಪುಲಾರಿ ಅವರನ್ನು ಆಯ್ಕೆ ಮಾಡಿ ಆದೇಶ ಪತ್ರ ನೀಡಲಾಯಿತು. ಜಿಲ್ಲಾಧ್ಯಕ್ಷರಾದ ಪೃಥ್ವಿರಾಜ ರಾಂಪುರೆರವರ ನೇತೃತ್ವದಲ್ಲಿ ಆದೇಶ ಪತ್ರ ನೀಡಲಾಯಿತು. ಇದೆ ಸಂದರ್ಭದಲ್ಲಿ ಕನ್ನಡದ ಕಟ್ಟಾಳುಗಳಾದ ದತ್ತಾತ್ರೇಯ ಹರಿಜನ, ಪ್ರಮೋದ ಭೋವಿ, ಬೈಲಪ್ಪ ಗೌರ, ಜಗದೀಶ ತಳವಾರ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕರುನಾಡು ವಿಜಯಸೇನೆ ನಾಡು ನುಡಿಗಾಗಿ ಸದಾಸಿದ್ದರೆಂದ -ಸುಲ್ತಾನಪುರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಕರುನಾಡು ವಿಜಯಸೇನೆ ಅಫಜಲಪುರ ತಾಲೂಕು ಅಧ್ಯಕ್ಷರಾಗಿ ಸಿದ್ದಾರಾಮ ಸುಲ್ತಾನಪುರ ಸರ್ವಾನುಮತದಿಂದ ಕಲಬುರಗಿ ನಗರದ ಜಿಲ್ಲಾ ಕಚೇರಿಯಲ್ಲಿ ಜಿಲ್ಲಾಧ್ಯಕ್ಷರು ಹಾಗೂ ಸರ್ವಸದಸ್ಯರ ಸಮುಖದಲ್ಲಿ ಆಯ್ಕೆ ಮಾಡಿ ಆದೇಶ ಪತ್ರ ನೀಡಲಾಯಿತು. ನೂತನವಾಗಿ ಆಯ್ಕೆಯಾದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ತಾಲೂಕು ಅಧ್ಯಕ್ಷ ಸಿದ್ದು ಸುಲ್ತಾನಪುರ ಗಡಿನಾಡಿಗೆ ಹೊಂದಿಕೊಂಡ ಕಲಬುರಗಿ ಜಿಲ್ಲೆಯ ಹಲವು ತಾಲೂಕುಗಳಿಗೆ ಮಹಾರಾಷ್ಟ್ರದ ನಂಟು ಹೆಚ್ಚಾಗಿದೆ. ಇದರಿಂದ ಬಹುತೇಕ ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಕನ್ನಡ ಪದ ಬಳಕೆ ಕಡಿಮೆಯಾಗುತ್ತಿರುವುದು ಶೋಚನೀಯ ಸಂಗತಿಯಾಗಿದೆ. ಕನ್ನಡ ನಾಡು ನುಡಿಗಾಗಿ ನಮ್ಮ ಉಸಿರು ಇರೋವರೆಗೂ ಹೋರಾಡಬೇಕು ಎನ್ನುವ ಕಿಚ್ಚು ಕನ್ನಡಿಗರೆಲ್ಲರಲ್ಲೂ ಇದೆ. ಆದರೆ ಸರಿಯಾದ ಮಾರ್ಗ ಸಿಗದಿದ್ದಲ್ಲ. ಅಲ್ಪವುಟ್ಟದ ಹಿಂಜರಿಕೆಗೆ ಕಾರಣವಾಗಿದೆ. ಇನ್ನೂಮುಂದೆ ಕರುನಾಡು ವಿಜಯಸೇನೆಯ ಸಂಘಟನೆಯ ಸಹಕಾರದಲ್ಲಿ ಗಡಿನಾಡಲ್ಲಿ ಕನ್ನಡದ ಬಾವೂಟ ಹಾರಿಸಲು ಸದಾ ಸಿದ್ದನಾಗಿರುತ್ತೆನೆ. ನಾಡು ನುಡಿಗಾಗಿ ಜೀವ ತ್ಯಾಗ ಮಾಡಲು ಸಿದ್ದನಿರುತ್ತೆನೆ. ನನ್ನ ತಾಲೂಕಿಗೆ ಹೊಂದಿಕೊಂಡಿರುವ ಮಹಾರಾಷ್ಟ್ರದ ಪ್ರಭಾವ ಯಾವುದೇ ಕಾರಣಕ್ಕೂ ಮುಂದುವರೆಯಲು ಬಿಡುವುದಿಲ್ಲ. ಪ್ರತಿ ಗ್ರಾಮಗಳಿಗೆ ತೆರಳಿ ಅಲ್ಲಿರುವ ಕನ್ನಡದ ಕಟ್ಟಾಳುಗಳನ್ನು ಹುರಿದುಂಬಿಸಿ ನಾಡು ನುಡಿಗಾಗಿ ಹೋರಾಡಲು ಸನ್ನದ್ದರನ್ನಾಗುವಂತೆ ಪ್ರೇರೆಪಿಸುತ್ತೆನೆ. ತಾಲೂಕಿನ ಎಲ್ಲಾ ಗ್ರಾಮಗಳಲ್ಲಿ ಕರುನಾಡ ವಿಜಯಸೇನೆ ಗ್ರಾಮ ಘಟಕಗಳನ್ನು ಮಾಡಲು ಪ್ರಯತ್ನಿಸುತ್ತೆನೆ. ನನ್ನ ಮೇಲೆ ಭರವಸೆಯನ್ನಿಟ್ಟು ತಾಲೂಕು ಅಧ್ಯಕ್ಷರ ಜವಾಬ್ದಾರಿ ನೀಡಿದ ಜಿಲ್ಲಾಧ್ಯಕ್ಷರು ಹಾಗೂ ರಾಜ್ಯಧ್ಯಕ್ಷರಿಗೂ ಕೃತಜ್ಞರಾಗಿದ್ದು, ಅವರ ಮಾರ್ಗದರ್ಶನದಲ್ಲಿ ಕನ್ನಡ ತಾಯಿಯ ಋಣ ತಿರಿಸುತ್ತೆನೆ ಎಂದರು. ನಂತರ ಜಿಲ್ಲಾ ಸಂಘಟನಾ ಸಲಹೆಗಾರರಾಗಿ ಗಣಪತಿ ಪುಲಾರಿ ಅವರನ್ನು ಆಯ್ಕೆ ಮಾಡಿ ಆದೇಶ ಪತ್ರ ನೀಡಲಾಯಿತು. ಜಿಲ್ಲಾಧ್ಯಕ್ಷರಾದ ಪೃಥ್ವಿರಾಜ ರಾಂಪುರೆರವರ ನೇತೃತ್ವದಲ್ಲಿ ಆದೇಶ ಪತ್ರ ನೀಡಲಾಯಿತು. ಇದೆ ಸಂದರ್ಭದಲ್ಲಿ ಕನ್ನಡದ ಕಟ್ಟಾಳುಗಳಾದ ದತ್ತಾತ್ರೇಯ ಹರಿಜನ, ಪ್ರಮೋದ ಭೋವಿ, ಬೈಲಪ್ಪ ಗೌರ, ಜಗದೀಶ ತಳವಾರ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಆರೋಗ್ಯ ಇಲಾಖೆಯಿಂದ ಜಾಗೃತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳ ಕಛೇರಿ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ, ಕೊಪ್ಪಳ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಚಂದ್ರಮುಖಿ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜ್, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಕಾಲೇಜಿನ ಸಭಾಭವನದಲ್ಲಿ ಗುರುವಾರದಂದು ಅಂತರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಮತ್ತು ಅಕ್ರಮ ಕಳ್ಳ ಸಾಗಾಣಿಕೆ ವಿರೋಧಿ ದಿನಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.


ಮಾನಸಿಕ ರೋಗ ತಜ್ಞರಾದ ಡಾ॥ಲಕ್ಷ್ಮೀದೇವಿ ಪಾಟೀಲ್ ಇವರು ಕಾರ್ಯಕ್ರಮ ಕುರಿತು ಮಾತನಾಡಿ, ಮನುಷ್ಯನ ಆರೋಗ್ಯ ಬಹಳ ಮುಖ್ಯ. ಅದರಲ್ಲಿ ವಿಶೇಷವಾಗಿ ಇಂದು ಯುವಜನತೆ ದುಷ್ಟ ಚಟಗಳ ದಾಸರಾಗಿದ್ದಾರೆ. ಮಾದಕ ವಸ್ತುಗಳಾದ ಗಾಂಜಾ, ಅಫೀಮ್, ಕುಡಿತ, ಡ್ರಗ್ಸ್‌ಸೇವನೆ, ಬೀಡಿ, ಸಿಗರೇಟ್, ತಂಬಾಕು ಸೇವನೆ ಮಾಡುವವರ ಸಂಖ್ಯೆ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ಹೆಚ್ಚಾಗಿ ಕಂಡುಬರುತ್ತದೆ. ಇದನ್ನು ತಡೆಗಟ್ಟುವ ಮತ್ತು ಯುವಜನತೆಗೆ ಅರಿವು ಮೂಡಿಸುವ ಉದ್ದೇಶದಿಂದ ಪ್ರತಿ ವರ್ಷ ಜೂನ್ 26 ರಂದು ಈ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಭಾರತವನ್ನು ನಶೆಮುಕ್ತ ಮಾಡಲು ಪ್ರತಿಯೊಬ್ಬರು ತಿಳಿದುಕೊಂಡು ತಮ್ಮ ತಮ್ಮ ಗ್ರಾಮ ಮತ್ತು ವಾರ್ಡ್‌ಗಳಲ್ಲಿ ಅರಿವು ಮೂಡಿಸುವಂತೆ ತಿಳಿಸಿದರು.

ಈ ಮಾದಕ ವಸ್ತುಗಳಿಗೆ ಹೆಚ್ಚಾಗಿ ಹದಿ-ಹರೆಯದವರು, ವಿದ್ಯಾರ್ಥಿಗಳು, ಕಾರ್ಮಿಕರು, ಶ್ರಮಜೀವಿಗಳು, ನಿರುದ್ಯೋಗಿಗಳು, ಒಂಟಿಯಾಗಿ ಜೀವಿಸುವವರು, ಪದೇ ಪದೇ ನೋವು ನಿರಾಸೆಗೆ ಒಳಗಾದವರು ತುತ್ತಾಗುತ್ತಿದ್ದಾರೆ. ಇದರಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗಿ ಜಠರ ಸಮಸ್ಯೆ, ವಿಟಮಿನ್ ಕೊರತೆ, ಲಿವರ್ ಖಾಯಿಲೆ, ಹೃದಯರೋಗ, ಮೆದುಳು ಮತ್ತು ಮೂತ್ರ ಜನಕಾಂಗಗಳಿಗೆ ಸಂಬಂಧಿಸಿದ ಖಾಯಿಲೆ, ಅಪಘಾತ, ಸಾವು ನೋವು ಹೆಚ್ಚಳ ಉಂಟಾಗುತ್ತವೆ. ಆದ್ದರಿಂದ ಎಲ್ಲಾ ವಿದ್ಯಾರ್ಥಿಗಳು ಇದರ ಬಗ್ಗೆ ತಿಳಿದುಕೊಂಡು ಪ್ರತಿಯೊಬ್ಬ ನಾಗರಿಕರಿಗೆ ಅರಿವು ಮೂಡಿಸುವಂತೆ ಕರೆ ನೀಡಿದರು.

ಜಿಲ್ಲಾ ಆರೋಗ್ಯಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ ಇವರು ಮಾತನಾಡಿ, ಮಾದಕ ವಸ್ತುಗಳ ಸೇವನೆಯಿಂದ ದೂರವಿದ್ದು, ದೇಶದ ಅಭಿವೃದ್ಧಿಯತ್ತ ಗಮನ ಹರಿಸಬೇಕು. ಮಾದಕ ವಸ್ತುಗಳ ಸೇವನೆಗೆ ತುತ್ತಾದವರನ್ನ ಚಿಕಿತ್ಸೆ ಬಗ್ಗೆ ಮೊದನೇ ಹಂತದಲ್ಲಿ ಖಾಯಿಲೆ ಗುರುತಿಸಿ ಆಸ್ಪತ್ರೆಗೆ ಕಳುಹಿಸಬೇಕು. ಮಾನಸಿಕ ತಜ್ಞರನ್ನು ಭೇಟಿ ಮಾಡಬೇಕು. ವ್ಯಸನಮುಕ್ತ ಕೇಂದ್ರ ಹಾಗೂ ಟಿ.ಸಿ.ಸಿ ಕೇಂದ್ರಗಳಲ್ಲಿ ನೀಡುವ ಚಿಕಿತ್ಸೆ ಬಗ್ಗೆ ಮಾಹಿತಿ ನೀಡಬೇಕು. ಆಪ್ತ ಸಮಾಲೋಚನೆಗೆ ಒಳಪಡಿಸಬೇಕು ಮತ್ತು ತಾವು ವಾಸಿಸುವ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವ್ಯಸನಕ್ಕೆ ಬಲಿಯಾದವರನ್ನ ಮೇಲ್ಕಾಣಿಸಿದ ಚಿಕಿತ್ಸಾ ಕೇಂದ್ರಗಳಿಗೆ ಕಳುಹಿಸಿ, ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವುದು ಮತ್ತು ವ್ಯಸನಮುಕ್ತ ಕೊಪ್ಪಳ ಜಿಲ್ಲೆ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ಹೇಳಿದರು. ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ॥ಮಹೇಶ ಉಮಚಗಿ, ಇವರು ಕ್ಷಯರೋಗ ನಿರ್ಮೂಲನೆ, ಕುಷ್ಠರೋಗ ನಿರ್ಮೂಲನೆ ಕುರಿತು ವಿವರವಾಗಿ ಮಾತನಾಡಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಗಂಗಮ್ಮ ಸಾಂಕ್ರಾಮಿಕ/ಅಸಾಂಕ್ರಾಮಿಕ ರೋಗಗಳ ಬಗ್ಗೆ, ಕುಟುಂಬ ಕಲ್ಯಾಣ ಕಾರ್ಯಕ್ರಮ ಬಗ್ಗೆ ವಿವರಿಸಿದರು.

ಕಾರ್ಯಕ್ರಮದಲ್ಲಿ ಮನಶಾಸ್ತ್ರಜ್ಞರಾದ ಪುಷ್ಪಾ ತೆರೇಸಾ, ಕಾಲೇಜಿನ ಆಡಳಿತಾಧಿಕಾರಿಗಳಾದ ರಕ್ಷಿತ್ ವಸ್ತ್ರದ್, ಪ್ರಾಂಶುಪಾಲರಾದ ಆನಂದ ಹಳ್ಳಿಗುಡಿ, ಸಿಬ್ಬಂದಿಗಳಾದ ಉದಯ, ಪರಶುರಾಮ, ಶ್ರೀನಿವಾಸ, ಕಾಲೇಜಿನ ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಭಾಗವಹಿಸಿದ್ದರು.

# ಯಾದಗಿರಿ ವಾರ್ತಾ ಇಲಾಖೆಯ ಗುರುನಾಥ ವಯೋನಿವೃತ್ತಿ : ಸಿಬ್ಬಂದಿಯಿಂದ ಹೃದಯಸ್ಪರ್ಶಿ ಬೀಳ್ಕೊಡುಗೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಜೂ.30-ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸುಮಾರು 32 ವರ್ಷಕ್ಕೂ ಹೆಚ್ಚಿನ ಸೇವೆ ಸಲ್ಲಿಸಿ ಸೋಮವಾರ ವಯೋನಿವತ್ತಿಯಾದ ಹಿರಿಯ ವಾಹನ ಚಾಲಕ ಗುರುನಾಥ ಅವರಿಗೆ ಇಲಾಖೆಯ ಸಿಬ್ಬಂದಿಗಳಿಂದ ಆತ್ಮೀಯವಾಗಿ ಬೀಳ್ಕೊಡಲಾಯಿತು. ನಗರದ ಜಿಲ್ಲಾಡಳಿತ ಭವನದಲ್ಲಿರುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಲ್ಲಿ ನಡೆದ ಸರಳ ಸಮಾರಂಭದಲ್ಲಿ ಗುರುನಾಥ ಮತ್ತು ಅವರ ಧರ್ಮ ಪತ್ನಿಯವರಿಗೆ ಹಿರಿಯ ಸಹಾಯಕ ನಿರ್ದೇಶಕ ಸುಲೈಮಾನ್ ಡಿ. ನದಾಫ್ ಅವರು ಶಾಲು ಹೊದಿಸಿ, ಫಲ ತಾಂಬೂಲ ಹಾಗೂ ಸ್ಮರಣಿಕೆ ನೀಡಿ ಸತ್ಕರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಿರಿಯ ಸಹಾಯಕ ನಿರ್ದೇಶಕ ಸುಲೈಮಾನ್ ಡಿ. ನದಾಫ್ ಅವರು, ಗುರುನಾಥ ಅವರು ಸೇವೆಯುದ್ದಕ್ಕೂ ಅಧಿಕಾರಿಗಳೊಂದಿಗೆ ಅನ್ಯೋನ್ಯತೆಯಿಂದ ಕಾರ್ಯನಿರ್ವಹಿಸಿ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದ್ದಾರೆ. 32 ವರ್ಷ ಸೇವೆ ಸಲ್ಲಿಸಿ ಇಂದು ನಿವೃತ್ತಿಯಾಗುತ್ತಿದ್ದು, ಅವರ ನಿವೃತ್ತಿ ಜೀವನ ಸಂತೋಷದಿಂದಿರಲಿ ಎಂದು ಹಾರೈಸಿದರು.


ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷ ಇಂದುಧರ ಸಿನ್ನೂರ, ಪತ್ರಕರ್ತರಾದ ನಾಗಪ್ಪ ಮಾಲಿಪಾಟೀಲ, ಅಮೀನ್ ಹೊಸೂರು, ವೈಜನಾಥ ಹಿರೇಮಠ ಅವರು ಸಹ ಗುರುನಾಥ ಅವರೊಂದಿಗಿನ ಸೇವಾ ಒಡನಾಟವನ್ನು ಹಂಚಿಕೊಂಡರು.

1992ರಲ್ಲಿ ವಾಹನ ಚಾಲಕರಾಗಿ ನೇಮಕಗೊಂಡು ಕಲಬುರಗಿ ಕಚೇರಿಯಲ್ಲಿ ಸೇವೆ ಆರಂಭಿಸಿದ ಗುರುನಾಥ ಅವರು, ನಂತರ ರಾಯಚೂರು, ಬಳ್ಳಾರಿಯಲ್ಲಿಯೂ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದಾರೆ. ಹಿರಿಯ ವಾಹನ ಚಾಲಕರಾಗಿ ಬಡ್ತಿ ಪಡೆದಿದ್ದ ಇವರು 32 ವರ್ಷ ಸೇವೆ ಸಲ್ಲಿಸಿ ಯಾದಗಿರಿ ಕಚೇರಿಯಿಂದ ವಯೋನಿವೃತ್ತಿಗೊಂಡಿದ್ದಾರೆ.

ಈ ಸಂದರ್ಭದಲ್ಲಿ ಇಲಾಖೆಯ ಸಿಬ್ಬಂದಿಗಳಾದ ರವಿ ಮಿರಸ್ಕರ್, ಭೀಮಣ್ಣ ನಾಯಕ್, ಲಕ್ಷ್ಮೀ, ಪತ್ರಕರ್ತರಾದ ರಾಜೇಶ ಪಾಟೀಲ, ಮಲ್ಲಿಕಾರ್ಜುನ ಆಶನಾಳ, ರಾಜಕುಮಾರ ನಲ್ಲಿಕರ್, ಶಂಕ್ರಪ್ಪ ಅರುಣಿ, ರಫೀಕ್ ಮುಲ್ಲಾ, ದೇವರಾಜ ವರ್ಕನಳ್ಳಿ, ಅಮರೇಶ ಬೊಮರೆಡ್ಡಿ, ಭೀರಲಿಂಗಪ್ಪ ಹಾಗೂ ಕುಟುಂಬಸ್ಥರು ಇದ್ದರು.

### ಜುಲೈ 2 ರಂದು ಶ್ರೀ ಪ್ರಣವ ನಿರಂಜನ ಮಹಾಸ್ವಾಮಿಗಳ

# 25 ನೇ ಜನ್ಮ ವರ್ಧಂತೀ ಮಹೋತ್ಸವ.



ಮಲ್ಲಮ್ಮ ನುಡಿ ವಾರ್ತೆ

ಅಫಜಲಪೂರ : ಪರಮ ಪೂಜ್ಯ ಶ್ರೀ ಪ್ರಣವ ನಿರಂಜನ ಮಹಾಸ್ವಾಮಿಗಳ 25 ನೇ ಜನ್ಮ ವರ್ಧಂತೀ ಹಾಗೂ ರಜತ ಮಹೋತ್ಸವ ಇದೆ ಜುಲೈ 2 ರಂದು ಪಟ್ಟಣದ ಶೆಟ್ಟಿ ಫಂಕ್ಷನ್ ಹಾಲ್ ನಲ್ಲಿ ನಡೆಯಲಿದೆ ಎಂದು ಪರಮ ಪೂಜ್ಯ ಪ್ರಣವ ನಿರಂಜನ ಮಹಾ ಸ್ವಾಮೀಜಿ ಹೇಳಿದರು. ಪಟ್ಟಣದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಇದೆ ದಿನಾಂಕ ಜುಲೈ 2 ರಂದು ಬುಧವಾರ ಬೆಳಿಗ್ಗೆ 6 ಗಂಟೆಗೆ ವಿವಿಧ ಕಾರ್ಯಕ್ರಮ ಗಳಾದ ಸುಪ್ರಭಾತ, ಗಣಪತಿ ಪೂಜೆ, ಗೋ ಪೂಜೆ, ಪಂಚಬ್ರಹ್ಮ, ನವಗ್ರಹ, ದಿಕ್ಪಾಲಕ ಸಹಿತ ವಿಶ್ವಕರ್ಮ ಪೂಜೆ, ನಂತರ ಯಜ್ಞದೇವತಾ ಹೋಮ ಸೇರಿದಂತೆ ಅನೇಕ ಕಾರ್ಯಕ್ರಮಗಳು ಜರುಗುವದು ಹಾಗೂ ಬೆಳಿಗ್ಗೆ 11 ಗಂಟೆಗೆ ಸಂಗೀತ ಕಾರ್ಯಕ್ರಮದೊಂದಿಗೆ ಧರ್ಮ ಸಭೆ ಜರುಗುವದು, ಧರ್ಮ ಸಭೆಯ ದಿವ್ಯ ಸಾನಿಧ್ಯ ಪ.ಪೂ.ಶ್ರೀ ಕಾಳ ಹಸ್ತೇಂದ್ರ ಮಹಾಸ್ವಾಮಿಗಳು ಶಹಾಪುರ, ದಿವ್ಯ ಸಮ್ಮುಖ ಪ. ಪೂ. ಶ್ರೀ ಮೌನೇಶ್ವರ ಮಹಾಸ್ವಾಮಿಗಳು ಅಫಜಲಪೂರ, ಡಾ. ಶ್ರೀ ಚನ್ನಮಲ್ಲ ಶಿವಯೋಗಿ ಶಿವಾಚಾರ್ಯರು ತೇರಿನ ಮಠ ಬಡದಾಳ, ಶ್ರೀ ವಿಶ್ವರಾಧ್ಯ ಮಳೇಂದ್ರ ಶಿವಾಚಾರ್ಯರು ಸಂಸ್ಥಾನ ಹಿರೇಮಠ ಅಫಜಲಪೂರ ಹಾಗೂ ಹವಾಮಲ್ಲಿನಾಥ ಮಹಾರಾಜರು, ಶ್ರೀಕಂಠ ಶಿವಾಚಾರ್ಯರು ರೇವೂರ, ಸೇರಿದಂತೆ ಅನೇಕ ಮಠದ ಮಹಾಸ್ವಾಮಿಗಳು ಹಾಗೂ ಶಾಸಕರಾದ ಎಂ ವೈ ಪಾಟೀಲ್, ಮಾಜಿ ಶಾಸಕ ಸುಭಾಷ ಗುತ್ತೇದಾರ, ಮಾಜಿ ಜಿಲ್ಲಾ ಪಂಚಾಯತ ಅಧ್ಯಕ್ಷ ನಿತೀನ ಗುತ್ತೇದಾರ, ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಶಿವಕುಮಾರ ನಾಟಿಕಾರ, ದಕ್ಷ ಅಧಿಕಾರಿ ಪಿಎಸ್ಐ ಸೋಮಲಿಂಗ ಒಡೆಯರ, ಸೇರಿದಂತೆ ಅನೇಕ ತಾಲೂಕಿನ ಅಧಿಕಾರಿಗಳು, ರಾಜಕೀಯ ಗಣ್ಯರು, ಉದ್ಯಮಿಗಳು ಹಾಗೂ ಸಮಾಜ ಸೇವಕರು, ಹೊರಾಟಗಾರರು ಈ ಕಾರ್ಯಕ್ರಮದಲ್ಲಿ ಭಾಗವಹಿಸುವರು, ಅಷ್ಟೇ ಅಲ್ಲದೆ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಗುವದು ಹಾಗಾಗಿ ಕಾರ್ಯಕ್ರಮಕ್ಕೆ ಸುತ್ತಮುತ್ತಲಿನ ಹಾಗೂ ತಾಲೂಕಿನ ಎಲ್ಲ ಗಣ್ಯರು ಆಗಮಿಸಿ ಶುಭ ಹಾರೈಸಬೇಕು ಎಂದು ಕರೆ ನೀಡಿದರು.

## ಕುರುಗೋಡು: ವಸತಿ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.30–ಕುರುಗೋಡು ಪುರಸಭೆ ವ್ಯಾಪ್ತಿಯಲ್ಲಿ 2025–26ನೇ ಸಾಲಿಗೆ ಪ್ರಧಾನಮಂತ್ರಿ ಆವಾಸ್ (ನಗರ) 2.0 ಯೋಜನೆಯಡಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಒಂಟಿ ಮಹಿಳೆಯರು,ಅಂಗವಿಕಲರು,ಹಿರಿಯ ನಾಗರಿಕರು,ತೃತೀಯಲಿಂಗಿಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ,ಹಿಂದುಳಿದ,ಅಲ್ಪಸಂಖ್ಯಾತ ವರ್ಗ, ಸ್ವಚ್ಛತಾ ಕಾರ್ಮಿಕರು, ಪಿಎಂ ಸ್ವಾನಿಧಿ ಯೋಜನೆಯಡಿ ಗುರುತಿಸಲ್ಪಟ್ಟಬೀದಿ ವ್ಯಾಪಾರಿಗಳು ಮತ್ತು ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿ ಗುರುತಿಸಿದ ಕುಶಲಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕರು, ವಲಸೆ ಬಂದ ಕುಟುಂಬದವರು ಅರ್ಜಿ ಸಲ್ಲಿಸಬಹುದು.

ಆನ್‌ಲೈನ್ ವೆಬ್‌ಸೈಟïhttps://pmay-urban.gov.inಗೆ ಭೇಟಿನೀಡಿ ಅರ್ಜಿ ಸಲ್ಲಿಸಬಹುದು. ಜುಲೈ 15 ಅರ್ಜಿ ಸಲ್ಲಿಸಲು ಕೊನೆಯ ದಿನ.

*ಬೇಕಾದ ದಾಖಲೆ:*

ಆಧಾರ್ ಕಾರ್ಡ್ (ಮನೆಯ ಯಜಮಾನ/ನಿ ಹಾಗೂ ತಂದೆ/ತಾಯಿಯ ಮತ್ತು ಪಡಿತರ ಚೀಟಿಯಲ್ಲಿರುವಂತೆ) ಮತ್ತು ಕುಟುಂಬ ಸದಸ್ಯರ ಆಧಾರ್ ಕಾರ್ಡ್ಗಳು. ವಸತಿ ರಹಿತರಾದಲ್ಲಿ ನಿವೇಶನಕ್ಕೆ ಸಂಭಂದಿಸಿದ ದಾಖಲೆಗಳು (ಹಕ್ಕು ಪತ್ರ, ಕ್ರಯ ಪತ, ದಾನ ಪತ್ರ, ಉಡುಗೋರೆ ಪತ್ರ, ಖಾತಾ ನಕಲು ಫಾರಂ–3).

ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಪಡಿತರ ಚೀಟಿ, ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ನಿಗದಿತ ನಮೂನೆ (ಂಟಿಟಿಜಥಣಡಿಜ–2೦/2ಃ/2ಅ) ಯಲ್ಲಿ "ಖಜಟಜಿ ಗಟಿಜಜಡಿಣಚಿಇಾಟಿರ" ಸಲ್ಲಿಸುವುದು. ಮೊಬೈಲ್ ಸಂಖ್ಯೆ, ಪ್ಯಾನ್ ಕಾರ್ಡ್ (ಲಭ್ಯವಿದ್ದಲ್ಲಿ ಮಾತ್ರ).

ಅವಧಿ ಮೀರಿ ಬಂದತಹ ಅರ್ಜಿಗಳನ್ನು ಪರಿಗಣಿಸ ಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕುರುಗೋಡು ಪುರಸಭೆ ಕಾರ್ಯಾಲಯ ಕಚೇರಿಗೆ ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ; ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.30–ತಾಲ್ಲೂಕಿನ ಸಂಗನಕಲ್ಲು ಗ್ರಾಮದ 4ನೇ ವಾರ್ಡ್ನ ಭೋವಿ ಕಾಲೋನಿಯ ನಿವಾಸಿಯಾದ ವಿ.ಗೋವಿಂದರಾಜ ಎನ್ನುವ 30 ವರ್ಷದ ವ್ಯಕ್ತಿಯು ಜೂ.14ರಂದು ಕಾಣೆಯಾಗಿರುವ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು,ಪತ್ತೆಗೆಸಹಕರಿಸಬೇಕು ಎಂದು ಪೊಲೀಸ್ ಠಾಣಾಧಿಕಾರಿ ತಿಳಿಸಿದ್ದಾರೆ.

ಚಹರೆ:

ಅಂದಾಜು 5.8 ಅಡಿ ಎತ್ತರ, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ತೆಳ್ಳನೆಯ ಮೈಕಟ್ಟು ಹೊಂದಿದ್ದು, ಬಾಂಡ್ಲಿ ತಲೆಯ ಹಿಂದೆ ಕಪ್ಪು ಕೂದಲು ಮತ್ತು ಬಲಗಾಲು ಸ್ವಲ್ಪ ದಪ್ಪ ಇರುತ್ತದೆ. ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ತುಂಬುತೋಳಿನ ಅಂಗಿ ಮತ್ತು ಕಂದು ಬಣ್ಣದ ಪ್ಯಾಂಟ್ ಮತ್ತು ಟೋಪಿ ಧರಿಸಿರುತ್ತಾನೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾನೆ.

ಮೇಲ್ಕಂಡ ಚಹರೆಗುರುತುಗಳುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392–276461, ಮೊ.9480803049 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೃತ ಅನಾಮಧೇಯ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.30–ನಗರದ ರಾಧಿಕಾ ಸಿನಿಮಾ ಮಂದಿರ ಹತ್ತಿರ ಸುಮಾರು 60 ವರ್ಷದ ಅನಾಮಧೇಯ ವ್ಯಕ್ತಿಯು ಯಾವುದೋ ಖಾಯಿಲೆಯಿಂದ ಅಸ್ವಸ್ಥವಾಗಿ ಮಲಗಿದ್ದು ಜೂ.24 ರಂದು ಸಾರ್ವಜನಿಕರು ಆಸ್ಪತ್ರೆಗೆ ದಾಖಲಿಸಿದ್ದು ಚಿಕಿತ್ಸೆಫಲಕಾರಿಯಾಗದೆ ಮೃತಪಟ್ಟಿರುತ್ತಾನೆ. ಮೃತನ ವಾರಸುದಾರರು ತಿಳಿದಿರುವುದಿಲ್ಲ. ಈ ಕುರಿತು ಬ್ರೂಸ್‌ಪೇಟೆ ಪೊಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಎತ್ತರ 5.5 ಅಡಿ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ, ತೆಳುವಾದ ಮೈಕಟ್ಟು ಹೊಂದಿದ್ದು, ತಲೆಯಲ್ಲಿ ಬಿಳಿ ಕೂದಲು ಮತ್ತು ಮುಖದಲ್ಲಿ ಬಿಳಿ ಗಡ್ಡ, ಮೀಸೆ ಹೊಂದಿರುತ್ತಾನೆ. ನೀಲಿ ಬಣ್ಣದ ಚಡ್ಡಿ ಧರಿಸಿರುತ್ತಾನೆ.

ಈ ಮೇಲ್ಕಂಡ ಚಹರೆಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100, 258102 ಅಥವಾ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ದೂ.08392–272022, ಪಿ.ಐ ಮೊ.9480803045, ಪಿಎಸ್‌ಐ ಮೊ.9480803081 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತೋಟಗಾರಿಕೆ ಇಲಾಖೆಯಿಂದ ಸಹಾಯಧಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 30– ಇಲ್ಲಿನ ತೋಟಗಾರಿಕೆ ಇಲಾಖೆಯಿಂದ ರಾಷ್ಟ್ರೀಯ ತೋಟಗಾರಿಕೆ ಮಿಷನ್, ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ, ತಾಳೆಬೆಳೆ, ಸಮಗ್ರ ತೋಗಟಗಾರಿಕೆ ಅಭಿವೃದ್ಧಿ ಹಾಗೂ ಹನಿ ನೀರಾವರಿ ಯೋಜನೆಗಳಿಗೆ ಸಹಾಯಧಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ತೆ–ೂಟಗಾರಿಕೆ ಮಿಷನ್ ಯೋಜನೆ ಅಡಿಯಲ್ಲಿ ಜಿಲ್ಲೆಗೆ ಹಣ್ಣಿನ ಬೆಳೆಗಳಾದ ಬಾಳೆ, ಮಾವು, ಹಾಗೂ ಪಪಾಯ, ಕೃಷಿಹೊಂಡಾ, ಮಿನಿ ಟ್ರಾಕ್ಟರ್ ಖರೀದಿಗೆ, ತೋಟಗಾರಿಕೆಯಲ್ಲಿ ಬಳಸುವ ಔಷದಗಳಿಗೆ ಮತ್ತು ಈರಳ್ಳಿ ಶೇಖರಣ ಘಟಕ, ಫಾರ್ಮಗೇಟ್ ಪ್ಯಾಕಹೌಸ್ ನಿರ್ಮಾಣ ಮಾಡಿದ ಸಾಮಾನ್ಯ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ರೈತರಿಗೆ ತೋಟಗಾರಿ–ಕೆ ಇಲಾಖೆಯಿಂದ ಸಹಾಯಧನ ನೀಡಲಾಗುತ್ತಿದ್ದು, ಆಸಕ್ತ ರೈತರು ಅರ್ಜಿಗಳು ಸಂಬಂಧಿಸಿದ ಹಿರಿಯ ಸಹಾಯಕ ತೆ–ೂಟಗಾರಿಕೆ ನಿರ್ದೇಶಕರು ತಾಲೂಕು ಕಚೇರಿಗಳಿಗೆ ಸಲ್ಲಿಸಬಹುದಾಗಿದೆ ಎಂದು ತೋಟಗಾರಿಕೆ ಇಲಾಖೆಯ ಉಪ ನಿರ್ದೇಶದಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೋಷ ರಹಿತ ಮತದಾರರ ಪಟ್ಟಿ ತಯಾರಿಸಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮತದಾರರ ಪಟ್ಟಿ ಪರಿಷ್ಕರಣೆ ಸಮಯದಲ್ಲಿ ಬಿ.ಎಲ್.ಓ.ಗಳ ಮೂಲಕ ಪ್ರತಿ ಮನೆ ಮನೆಗೆ ಸಮೀಕ್ಷೆ ನಡೆಸಿ, ದೋಷ ರಹಿತ ಮತದಾರರ ಪಟ್ಟಿಯನ್ನು ತಯಾರಿಸುವಂತೆ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.ಅವರು ಶುಕ್ರವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ವಿಧಾನಸಭಾ ಕ್ಷೇತ್ರದ ಮಾಸ್ಟರ್ ಟ್ರೈನರ್ ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಜನವರಿ, ಏಪ್ರಿಲ್, ಜುಲೈ ಮತ್ತು ಅಕ್ಟೋಬರ್ ತಿಂಗಳುಗಳ ಮೊದಲವಾರದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ನಡೆಯಲಿದ್ದು, ತಿದ್ದುಪಡಿ ಮತ್ತು ಹೊಸ ಮತದಾರರ ಸೇರ್ಪಡೆಗೆ ಅವಕಾಶವಿರುತ್ತದೆ. ಮತದಾರರ ಪಟ್ಟಿ ಪರಿಷ್ಕರಣೆಗೆ ನೇಮಕಗೊಂಡಿರುವ ಬಿ.ಎಲ್.ಓ.ಗಳು ತಮಗೆ ವಹಿಸಿದ ಪಟ್ಟಿಯನ್ನು ತೆಗೆದುಕೊಂಡು ಕೂಲಂಕಷವಾಗಿ ಪರಿಶೀಲಿಸಿ, ಪ್ರತಿ ಮನೆ ಮನೆಗೆ ಹೋಗಿ ಪರಿಶೀಲನೆ ಮಾಡಬೇಕು. ಇದರಲ್ಲಿ 18 ವರ್ಷ ಪೂರ್ಣಗೊಂಡಿರುವ ಹೊಸ ಮತದಾರರ ಹೆಸರನ್ನು ಸೇರಿಸಲು ಮತ್ತು ಸ್ಥಳಾಂತರಗೊಂಡ ಹಾಗೂ ಮರಣ ಹೊಂದಿದ ಮತದಾರರ ಹೆಸರನ್ನು ತೆಗೆದು ಹಾಕಲು ಅವಕಾಶವಿರುತ್ತದೆ. ಈ ಹಿನ್ನೆಲೆಯಲ್ಲಿ ಎಲ್ಲಾ ಬಿ.ಎಲ್.ಓ.ಗಳಿಗೆ ಸೂಕ್ತ ತರಬೇತಿ ನೀಡಿ, ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಯನ್ನು ಯಶಸ್ವಿಯಾಗಿ ನಿರ್ವಹಿಸಬೇಕು ಎಂದು ಮಾಸ್ಟರ್ ಟ್ರೈನರ್ ಗಳಿಗೆ ಸೂಚನೆ ನೀಡಿದರು. ಚುನಾವಣಾ ನೋಂದಣಾಧಿಕಾರಿ (ಇ.ಆರ್.ಓ) ಅಥವಾ ಸಹಾಯಕ ಚುನಾವಣಾ ನೋಂದಣಾಧಿಕಾರಿ(ಎ.ಇ.ಆರ್.ಓ) ರವರ ನಿಯಂತ್ರಣ ಮತ್ತು ಮೇಲ್ವಿಚಾರಣೆಯಲ್ಲಿ ಬಿಎಲ್‌ಓ ತನಗೆ ನಿಯೋಜಿಸಲಾದ ಭಾಗ, ಮತಗಟ್ಟೆ, ಮತದಾನ ಪ್ರದೇಶದ ಮತದಾರರ ಪಟ್ಟಿಯನ್ನು ನವೀಕರಿಸಬೇಕು.ಮೊದಲನೆಯದಾಗಿ ಬಿ.ಎಲ್.ಓ.ಗಳು ಮತದಾರರ ಪಟ್ಟಿಯಲ್ಲಿ ಉಲ್ಲೇಖಿಸಲಾದ ಪ್ರದೇಶ ಅಥವಾ ಭಾಗಕ್ಕೆ ಭೇಟಿ ನೀಡಬೇಕು.

ತಮಗೆಒದಗಿಸಲಾದ ಮತದಾರರ ಪಟ್ಟಿಯು ಪ್ರಸ್ತುತ ಮತದಾರರ ಪಟ್ಟಿಯಾಗಿದೆ ಎಂದು ಖಚಿತಪಡಿಸಿ ಕೊಳ್ಳಬೇಕು. ಮತದಾರರ ಪಟ್ಟಿಯ ವಿಭಾಗಗಳು, ಮತಗಟ್ಟೆಯ ಪ್ರದೇಶಗಳು ಮತ್ತು ಸಂಬಂಧಪಟ್ಟ ಪ್ರದೇಶ, ಭಾಗಕ್ಕೆ ಹಂಚಿಕೆಯಾದ ಮತದಾರರ ಸಂಖ್ಯೆಯ ಬಗ್ಗೆ ಮಾಹಿತಿಯನ್ನು ಪಡೆಯುವುದು ಅಗತ್ಯವಾಗಿರುತ್ತದೆ ಎಂದರು.

ಬಿ.ಎಲ್.ಓ.ಗಳು ತಮಗೆ ನಿಯೋಜಿಸಲಾದ ಭಾಗಕ್ಕೆ ಸಂಬಂಧಿಸಿದ ಪಟ್ಟಿಯನ್ನು ಪರಿಶೀಲನೆ ಮಾಡಬೇಕು. ಮತಗಟ್ಟೆ ಭಾಗದ ಪ್ರದೇಶಗಳಿಗೆ ಆಗಾಗ್ಗೆ ಭೇಟಿ ನೀಡುವುದು ಮತ್ತು ಸ್ಥಳೀಯ ಜನರೊಂದಿಗೆ, ವಿಶೇಷವಾಗಿ ಹಿರಿಯರು ಮತ್ತು ಸ್ಥಳೀಯ ಚುನಾಯಿತ ಪ್ರತಿನಿಧಿಗಳೊಂದಿಗೆ ಸಂವಹನ ನಡೆಸಬೇಕು.

ತೆಗೆದು ಹಾಕಬೇಕಾದ ಪಟ್ಟಿಯಲ್ಲಿರುವ ಮೃತ, ಸ್ಥಳಾಂತರಗೊಂಡ ಅಥವಾ ಪುನರಾವರ್ತಿತ ನಕಲಿ ಮತದಾರರ ಹೆಸರುಗಳನ್ನು ಗುರುತಿಸುವುದು ಹಾಗೂ ಮತದಾರರ ಪಟ್ಟಿಯಲ್ಲಿ ಗುರುತಿಸಿರುವ ಪಿಎಸ್‌ಇ&ಡಿಎಸ್‌ಇ ಮಾಹಿತಿಯ ವರದಿಯನ್ನು ಇ.ಆರ್.ಓ.ಗಳಿಗೆ ಸಲ್ಲಿಸಬೇಕು. ರಾಜ್ಯ ಮತ್ತು ರಾಷ್ಟ್ರೀಯ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಬಿ.ಎಲ್.ಎ.ಗಳಿಗೆ ಕರಡು ಮತದಾರರ ಪಟ್ಟಿಯನ್ನು ಪರಿಶೀಲಿಸಲು ಅನುವು ಮಾಡಿಕೊಡಬೇಕು ಮತ್ತು ತಿದ್ದುಪಡಿಗಳನ್ನು ಗುರುತಿಸಬೇಕು. ಅಂಚೆಕಚೇರಿಯಿಂದ ಹಿಂತಿರುಗಿಸಲಾದ ಮತದಾರರ ಗುರುತಿನ ಚೀಟಿ (ಇಪಿಐಸಿ) ಗಳನ್ನು ವಿತರಿಸಬೇಕಾಗಿದ್ದು, ಈ ಬಗ್ಗೆ ಎಲ್ಲಾ ಬಿ.ಎಲ್.ಎ.ಗಳಿಗೆ ಸೂಕ್ತ ಮಾರ್ಗದರ್ಶನ ಮಾಡಬೇಕು ಎಂದು ಹೇಳಿದರು. ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ ಅವರು ಮಾತನಾಡಿ, ಬೂತ್ ಮಟ್ಟದ ಅಧಿಕಾರಿಗಳು ಇ.ಆರ್.ಓ / ಎ.ಇ.ಆರ್.ಓ ಪರವಾಗಿ ಅರ್ಜಿದಾರ–ರಿಂದ (ಮತದಾರರು ಮತ್ತು ನಿರೀಕ್ಷಿತ ಮತದಾರರು) ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಅರ್ಜಿ ನಮೂನೆ 6, 7 ಮತ್ತು 8 ರಲ್ಲಿ ಸ್ವೀಕರಿಸಬೇಕು. ಹಕ್ಕುಗಳು ಮತ್ತು ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಕ್ಷೇತ್ರ ಪರಿಶೀಲನೆ ಮಾಡಿ ಮತ್ತು ಕ್ಷೇತ್ರ ಭೇಟಿಯ ನಂತರ, ವರದಿಯನ್ನು ಇ.ಆರ್.ಓ.ಗೆ ಸಲ್ಲಿಸಬೇಕು. ಮನೆ ಮನೆಗೆ ಭೇಟಿ ನೀಡಿ, ಒಂದಕ್ಕಿಂತ ಹೆಚ್ಚು ಬಾರಿ ಕಾಣಿಸಿಕೊಳ್ಳುತ್ತಿರುವ ಹೆಸರುಗಳು, ವರ್ಗಾವಣೆಗೊಂಡ, ಸ್ಥಳಾಂತರಗೊಂಡ, ವಲಸೆ ಬಂದ ಅಥವಾ ಮೃತ ಮತದಾರರನ್ನು ಪರಿಶೀಲಿಸಿ ವರದಿ ಸಲ್ಲಿಸಬೇಕು. ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಲು ಆಕ್ಷೇಪಣೆಗಳನ್ನು ಸ್ವೀಕರಿಸಿದ ಮತದಾರರಿಗೆ ನೋಟಿಸ್ ನೀಡಲು ವರದಿ ಅಥವಾ ನಮೂನೆಗಳನ್ನು ಇ.ಆರ್.ಓ.ಗಳಿಗೆ ಸಲ್ಲಿಸಬೇಕು. ಗೊತ್ತುಪಡಿಸಿದ ಸ್ಥಳಗಳಲ್ಲಿ ಕರಡು ಮತದಾರರ ಪಟ್ಟಿ ಹಾಗೂ ನಿಗದಿತ ಪ್ರಕಟಣೆಗಳನ್ನು ಪ್ರದರ್ಶಿಸಬೇಕು. ಮನೆ ಸಂಖ್ಯೆಗಳು ಲಭ್ಯವಿಲ್ಲದ ಮನೆಗಳಿಗೆ ಕಾಲ್ಪನಿಕ ಸಂಖ್ಯೆ ನೀಡಿ. ಮನೆ ಮನೆಗೆ ಭೇಟಿ ನೀಡುವ ಮೂಲಕ ಹಕ್ಕುಗಳು ಅಥವಾ ಆಕ್ಷೇಪಣೆಗಳ ಕುರಿತು ಸ್ಥಳ ಪರಿಶೀಲನೆ ಮಾಡಿ ನಂತರ ಇ.ಆರ್.ಓ.ಗಳಿಗೆ ತಮ್ಮ ವರದಿಯನ್ನು ಸಲ್ಲಿಸಬೇಕು. ಬಿ.ಎಲ್.ಎ.ಗಳ ಜೊತೆ ಸಮನ್ವಯ ಸಾಧಿಸಬೇಕು. ನಜ್ರನಕ್ಷೆಯನ್ನು ಸಿದ್ಧಪಡಿಸಬೇಕು. ಮೃತ ಮತ್ತು ಸ್ಥಳಾಂತರಗೊಂಡ ಮತದಾರರನ್ನು ಗುರುತಿಸುವಂತೆ ಕ್ರಮ ವಹಿಸಲು ಸಂಬಂಧಿಸಿದ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದರು. ಮನೆ–ಮನೆ ಸಮೀಕ್ಷೆಯ ದಾಖಲೆಯನ್ನು ಬಿ.ಎಲ್.ಓ ರಿಜಿಸ್ಟರ್‌ನಲ್ಲಿ ನಿರ್ವಹಿಸಬೇಕು. ಮತದಾರರ ಪಟ್ಟಿಯನ್ನು ಪರಿಷ್ಕರಿಸುವ ಮೊದಲು, ಬಿ.ಎಲ್.ಓ.ಗಳು ಸಂಬಂಧಪಟ್ಟ ಮತದಾನ ಕೇಂದ್ರದ ಮತದಾರರ ಮಾಹಿತಿಯನ್ನು ಮತ್ತು ನಮೂನೆ 1–8 ಅನ್ನು ನಿರ್ವಹಿಸಬೇಕು. ಬಿ.ಎಲ್.ಓ ರಿಜಿಸ್ಟರ್ 'ಬಿ.ಎಲ್.ಓ ಆ್ಯಪ್' ನಲ್ಲಿ ಲಭ್ಯವಿದೆ ಎಂದು ಹೇಳಿದರು. ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ ಅವರು ಮಾತನಾಡಿ, ಬೂತ್ ಮಟ್ಟದ ಅಧಿಕಾರಿಗಳು ಭಾರತ ಚುನಾವಣಾ ಆಯೋಗ ನೀಡಿರುವ ಕ್ರಮಗಳನ್ನು ಅನುಸರಿಸಬೇಕು. ಮನೆ ಮನೆ ಸಮೀಕ್ಷೆ ವೇಳೆ ಮೊದಲು ಸ್ವ–ಂತ ಪರಿಚಯ ಮಾಡಿಕೊಂಡು ತಮ್ಮ ಗುರುತಿನ ಚೀಟಿಯನ್ನು ಅಥವಾ ನೇಮಕಾತಿ ಪತ್ರವನ್ನು ತೋರಿಸಬೇಕು ಹಾಗೂ ಭಾರತ ಚುನಾವಣಾ ಆಯೋಗದ ಪ್ರತಿನಿಧಿಯಾಗಿ ಮನೆಗೆ ಬಂದಿರುವ ಉದ್ದೇಶವನ್ನು ತಿಳಿಸಬೇಕು. ನಿಮ್ಮ ಮೇಲಾಧಿಕಾರಿಯ (ಇ.ಆರ್.ಓ) ಹೆಸರು, ಹುದ್ದೆ, ವಿಳಾಸ ಮತ್ತು ಮೊಬೈಲ್ ನಂಬರನ್ನು ಮತದಾರರಿಗೆ ಒದಗಿಸಬೇಕು. ಮನೆ ಮನೆಗೆ ಭೇಟಿ ನೀಡಿದಾಗ, ಮೊದಲು ಮತದಾರರ ಪಟ್ಟಿಯನ್ನು ತೋರಿಸಿ, ಪಟ್ಟಿಯಲ್ಲಿರುವ ಮನೆಯ ಎಲ್ಲಾ ಮತದಾರರ ಹೆಸರುಗಳನ್ನು ಓದಿ ಹೇಳಿ, ಮನೆಯಲ್ಲಿರುವ ಯಾವುದೇ ಸದಸ್ಯರ ಹೆಸರು ಬಿಟ್ಟುಹೋಗಿದೆಯೇ?, 18 ವರ್ಷಕ್ಕಿಂತ ಮೇಲ್ಪಟ್ಟವರ ಹೆಸರು ಮತದಾರರ ಪಟ್ಟಿಯಲ್ಲಿ ಸೇರಿಸಬೇಕೇ?, ಹೀಗೆ ನೀಡಿರುವ ಪ್ರಶ್ನೆಗಳನ್ನು ಕೇಳಿ, ಮಾಹಿತಿಯನ್ನು ಸಂಗ್ರಹಿಸಬೇಕು. ಯಾವುದೇ ಮತದಾರರು ಅವರ ಮನೆಯಲ್ಲಿ ಇರದಿದ್ದರೆ, ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ ನಂತರ, ನಿಗದಿತ ನಮೂನೆಯಲ್ಲಿ ಮತದಾರರ ಮನೆಯಲ್ಲಿ ನೋಟಿಸ್ ಅಂಟಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಕಛೇ–ರಿಯ ಚುನಾವಣಾ ತಹಶಿಲ್ದಾರ ರವಿ ವಸ್ತ್ರದ್ ಸೇರಿದಂತೆ ವಿವಿಧ ತಾಲ್ಲೂಕುಗಳ ತಹಶಿಲ್ದಾರರು, ಜಿಲ್ಲಾಧಿಕಾರಿ ಕಛೇರಿಯ ಚುನಾವಣಾ ಶಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ, ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರದ ಮಾಸ್ಟರ್ ಟ್ರೈನರ್ ಗಳು ಹಾಗೂ ಮತ್ತಿತರರಿದ್ದರು.

## ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ : ಸಂಸದ ಕೆ.ರಾಜಶೇಖರ ಹಿಟ್ನಾಳ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜನರಆರ್ಶಿವಾದದಿಂದ 2024ರ ಜೂನ್‌ನಲ್ಲಿ ಸಂಸದನಾಗಿ ಆಯ್ಕೆಯಾದ ನಂತರ ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುತ್ತಿದೆ ಎಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾಡಳಿತಭವದಲ್ಲಿರುವ ಲೋಕಸಭಾ ಸದಸ್ಯರ ಕಛೇರಿಯಲ್ಲಿ ತಾವು ಸಂಸದರಾಗಿ ಒಂದು ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ಈ ಅವಧಿಯಲ್ಲಿ ಮಾಡಿದ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಲು ಕರೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಎನ್.ಹೆಚ್.ಎ.ಐ ರಸ್ತೆಗಳಲ್ಲಿ ಕೆಲವು ಸಮಸ್ಯೆಗಳಿದ್ದು, ವಿಶೇಷವಾಗಿ ಎನ್.ಹೆಚ್–50ರಲ್ಲಿ ಟೋಲ್‌ಗೇಟ್ ನಿಂದ ಟನಲ್ ಬಳಿ ಬಹಳಷ್ಟು ಅಪಘಾತಗಳಾಗುತ್ತಿದ್ದವು. ಇದ–ರಿಂದ ಪ್ರತಿವರ್ಷ 100 ಜನರ ಸಾವು ಉಂಟಾಗುತ್ತಿತ್ತು. ಈ ಸಮಸ್ಯೆಯನ್ನು ತಡೆಯಲು ಓವರ್ ಬ್ರಿಡ್ಜ್ ಮಾಡಬೇಕೆಂದು ಮಾಜಿ ಸಂಸದರಾದ ಕರಡಿ ಸಂಗಣ್ಣನವರು ಪ್ರಯತ್ನ ಮಾಡಿದ್ದರು. ನಾನು ಸಂಸದನಾದ ನಂತರ ಟೆಂಡರ್ ಮಾಡಿಸಿ, ಹೊಸಲಿಂಗಾಪುರ ಕ್ರಾಸ್, ಹೊಸಳ್ಳಿ ಕ್ರಾಸ್, ಹಿಟ್ನಾಳ್ ಕ್ರಾಸ್ ಮೆತಗಲ್ ಕ್ರಾಸ್ ಸೇರಿದಂತೆ ರೂ. 1190 ಲಕ್ಷಗಳ ಅನುದಾನದಲ್ಲಿ ನಾಲ್ಕು ಫ್ಲೈಓವರ್ ನಿರ್ಮಾಣ ಮಾಡಲಾಗುತ್ತಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಪ್ರಸ್ತುತ ಅಪಘಾತ ಪ್ರಮಾಣ ಶೇ.70ರಷ್ಟು ಕಡಿಮೆಯಾಗಿದ್ದು, ರಸ್ತೆ ಅಪಘಾತ ಪ್ರಮಾಣವನ್ನು ಶೂನ್ಯಕ್ಕೆ ತರುವ ಪ್ರಯತ್ನ ಮಾಡಲಾಗುವುದು. ರಾಷ್ಟ್ರೀಯ ಹೆದ್ದಾರಿ 50ರಲ್ಲಿ ರಸ್ತೆ ಅಪಘಾತಗಳನ್ನು ತಡೆಗಟ್ಟಲು ವಾಹನ ವೇಗ ನಿಯಂತ್ರಣ ಮಾಡಲು ಸೆಕ್ಯೂರಿಟಿ ಸಿಸ್ಟಮ್ & ಸಿಸಿ ಟಿವಿ ಅಳವಡಿಕೆಗಾಗಿ ಕೇಂದ್ರ ಸಾರಿಗೆ ಸಚಿವರಾದ ನಿತೀನ್ ಗಡ್ಕರಿ ಅವರಿಗೆ ಮನವಿ ಮಾಡಿದ್ದು, ಇದಕ್ಕಾಗಿ ರೂ. 2 ಕೋಟಿಗಳನ್ನು ಮಂಜೂರು ಮಾಡಿದ ಕೇಂದ್ರ ರಸ್ತೆ ಸಾರಿಗೆ ಸಚಿವರಿಗೆ ಅಭಿನಂದನೆಯನ್ನು ಸಲ್ಲಿಸಲು ಬಯಸುತ್ತೇನೆ. ಈ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದರು.

ಅಂಚೆ ಇಲಾಖೆಯಿಂದ ಇನ್ಶೂರೆನ್ಸ್, ಪಿಂಚಣಿ, ಆರ್.ಡಿ ಸೇರಿದಂತೆ ಹಲವಾರು ಪೋಸ್ಟಲ್ ಸೇವೆಗಳು ಸಾರ್ವಜನಿಕರಿಗೆ ಸಿಗುತ್ತಿವೆ. ಆದರೆ, ಅಂಚೆ ಕಛೇರಿಗೆ ಬರುವ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳ ಕೊರತೆಯಿದ್ದು, ಸಿ.ಎಸ್.ಆರ್ ಅನುದಾನದಲ್ಲಿ ರೂ. 13.50 ಲಕ್ಷಗಳ ವೆಚ್ಚದಲ್ಲಿ ಪ್ರಾಥಮಿಕ ಹಂತದಲ್ಲಿ ಕುಣಿಕೇರಿ ಮತ್ತು ಹಿರೇಬಗನಾಳ ಗ್ರಾಮಗಳಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ಮತ್ತು ಗುಳದಳ್ಳಿ ಗ್ರಾಮದಲ್ಲಿ ಭೂಮಿ ಪೂಜೆ ಮಾಡಲಾಗಿದೆ. ನಮ್ಮ ಜಿಲ್ಲೆಯಲ್ಲಿ 182 ಪೋಸ್ಟ್ ಆಫೀಸ್‌ಗಳಿದ್ದು, ಇವುಗಳ ಅಭಿವೃದ್ಧಿಗಾಗಿ ಜಿಲ್ಲೆಯ ವಿವಿಧ ಕಂಪನಿಗಳಿಗೆ ಮನವಿ ಮಾಡಲಾಗಿದೆ. ಎಕ್ಸ್ ಇಂಡಿಯಾದವರು ಮತ್ತು ಮುಕುಂದ್ಸ್ ಕಂಪನಿಯವರು ತಲಾ ಎರಡು ಅಂಚೆ ಕಛೇರಿಯ ಕಟ್ಟಡಗಳನ್ನು ಮಾಡುತ್ತಿದ್ದಾರೆ ಹಾಗೂ ಕಿರ್ಲೋಸ್ಕರ್ ಮತ್ತು ಕಲ್ಯಾಣಿ ಕಂಪನಿಯವರು ತಲಾ 15 ಅಂಚೆ ಕಛೇರಿಯ ಕಟ್ಟಡಗಳನ್ನು ಮಾಡುವುದಾಗಿ ಹೇಳಿದ್ದಾರೆ. ಈ ವರ್ಷ ಸುಮಾರು 35 ರಿಂದ 40 ಪೋಸ್ಟ್ ಆಫೀಸ್ ಕಟ್ಟಡಗಳನ್ನು ನಿರ್ಮಾಣ ಮಾಡಿ, ಜನರಿಗೆ ಅನುಕೂಲ ಮಾಡಿಕೊಡಲಾಗುವುದು ಎಂದು ಹೇಳಿದರು.

ಎಂ.ಜಿ.ಎನ್.ಆರ್.ಇ.ಜಿ ಅನುದಾನದಲ್ಲಿ ಕೊಪ್ಪಳ ಜಿಲ್ಲಾ ಪಂಚಾಯತ್ ದತ್ತುಗ್ರಾಮ ಯೋಜನೆಯ ಮೊದಲ ಹಂತದಲ್ಲಿ ಕಾಮನೂರ ಮತ್ತು ಮೋರನಾಳ ಗ್ರಾಮಗಳನ್ನು ದತ್ತು ತಗೆದು–ಕೊಂಡು ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ. ಎರಡನೇ ಹಂತದಲ್ಲಿ ಜಿಲ್ಲೆಯ ಆಯಾ ವಿಧಾನಸಭಾ ವ್ಯಾಪ್ತಿಯಲ್ಲಿ ಕುಷ್ಟಗಿ ತಾಲ್ಲೂಕಿನ ಹುಯಿಲಗೇರಿ ಮತ್ತು ಮುದೇನೂರ, ಗಂಗಾವತಿ ತಾಲ್ಲೂಕಿನ ಸಂಗಾಪೂರ, ಕಾರಟಗಿ ತಾಲ್ಲೂಕಿನ ಬೇನ್ನೂರ ಮತ್ತು ಕಕ್ಕರಗೋಳ್ಳ, ಯಲಬುರ್ಗಾ ತಾಲ್ಲೂಕಿನ ಹಿರೇಮ್ಯಾಗೇರಿ ಹಾಗೂ ಕೊಪ್ಪಳ ತಾಲ್ಲೂಕಿನ ಮಾದಿನೂರ, ಈ ಎಲ್ಲಾ ಗ್ರಾಮಗಳನ್ನು ದತ್ತು ಗ್ರಾಮಗಳಾಗಿ ಆಯ್ಕೆ ಮಾಡಲಾಗಿದ್ದು, ಕ್ರೀಯಾ ಯೋಜನೆ ಅನುಮೋದನೆಗೆ ಬಾಕಿ ಇರುತ್ತದೆ ಎಂದರು.

ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಕೊಪ್ಪಳ ಜಿಲ್ಲೆಯ ಫಲಿತಾಂಶವು ಕಡಿಮೆಯಿದ್ದು, ಈ ಪ್ರಮಾಣವನ್ನು ಹೆಚ್ಚಿಸಲು ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಏಕಮಾದರಿಯ ತರಗತಿ ಮತ್ತು ಸ್ಮಾರ್ಟ ಕ್ಲಾಸ್ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿವೆ. ಜಿಲ್ಲೆಯ ಎಲ್ಲಾ ಶಾಲೆಗಳಿಗೆ ಬಿ.ಎಸ್.ಎನ್.ಎಲ್ ಮೂಲಕ ಅಂತರ್ಜಾಲ ಸಂಪರ್ಕ ಕಲ್ಪಿಸಲು ಮನವಿ ಮಾಡಿದ್ದೇವೆ. ಈಗಾಗಲೇ ಪ್ರಾಥಮಿಕ ಹಂತದಲ್ಲಿ 43 ಶಾಲೆಗಳಿಗೆ ಅಂತರ್ಜಾಲ ಸಂಪರ್ಕ ಕಲ್ಪಿಸಲು ಶಾಲೆಗಳನ್ನು ಆಯ್ಕೆ ಮಾಡಲಾಗಿದೆ. ಬಾಕಿ ಶಾಲೆಗಳಿಗೆ ಅಂತರ್ಜಾಲ ಸೌಲಭ್ಯ ಕಲ್ಪಿಸಲು ಸರ್ವೇ ಕಾರ್ಯ ಪ್ರಗತಿಯಲ್ಲಿದೆ ಎಂದರು.

ರೈಲ್ವೆ ನಿಲ್ದಾಣಗಳ ಹೆಸರು ಬದಲಾವಣೆ ಮಾಡಲು ಭಾನಾಪೂರ ರೈಲು ನಿಲ್ದಾಣಕ್ಕೆ ಮಹಾತ್ಮ ಗಾಂಧಿ, ಗಂಗಾವತಿ ರೈಲು ನಿಲ್ದಾಣಕ್ಕೆ ಕಿಷ್ಕಿಂದಾ ಮತ್ತು ಮುನಿರಾಬಾದ್ ರೈಲು ನಿಲ್ದಾಣಕ್ಕೆ ಹುಲಿಗೆಮ್ಮದೇವಿ ರೈಲ್ವೆ ನಿಲ್ದಾಣ ಎಂದು ನಾಮಕರಣ ಮಾಡಲು ಮನವಿ ಸಲ್ಲಿಸಿದ್ದು, ರಾಜ್ಯ ಸರ್ಕಾರದಿಂದ ಕೇಂದ್ರಕ್ಕೆ ಪ್ರಸ್ತಾವನೆ ಹೋಗಬೇಕಿದೆ. ಈ ಹೆಸರುಗಳಿಂದ ಐತಿಹಾಸಿಕ ಸ್ಥಳಗಳ ಬಗ್ಗೆ ಜಾಗೃತಿ ಮೂಡಿಸಿದಂತಾಗುತ್ತದೆ. ಹುಲಿಗೆಮ್ಮದೇವಿ ದೇವಸ್ಥಾನ ಸಮಗ್ರ ಅಭಿವೃದ್ಧಿಗಾಗಿ ಪ್ರವಾಸೋದ್ಯೋಮ ಇಲಾಖೆಯಿಂದ ಕೇಂದ್ರ ಸರ್ಕಾರದ ಪ್ರಸಾದ್–2 ಯೋಜನೆಯಡಿ 169 ಕೋಟಿ ರೂ.ಗಳ ಅನುದಾನದಲ್ಲಿ ವಿಸ್ತೃತ ಯೋಜನಾ ವರದಿಯೊಂದಿಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ ಎಂದು ಹೇಳಿದರು.

ಸಿಂಧನೂರ ಪಟ್ಟಣದಲ್ಲಿ ಹೊಸ ಕೇಂದ್ರಿಯ ವಿದ್ಯಾಲಯ 2025–26ನೇ ಸಾಲಿನ ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಅನುಮೋದನೆಯಾಗಿದೆ. ಇದರ ಜೊತೆಗೆ ಬಾಗಲಕೋಟ–ಗಂಗಾವತಿ ಹೊಸ ರೈಲ್ವೆ ಲೈನ್ ನಿರ್ಮಾಣ ಕಾಮಗಾರಿಗೆ 2025–26ನೇ ಸಾಲಿನ ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಅನುಮೋದನೆ ದೊರೆತಿದೆ. ಸಂಸದರ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಡಿ ಕೆಲವು ರಸ್ತೆ ಮತ್ತು ಪೇವರ್ಸ್ ಅಳವಡಿಸುವ ಕಾಮಗಾರಿಗಳು ಮುಕ್ತಾಯಗೊಂಡಿರುತ್ತವೆ. ಕೊಪ್ಪಳ ಪಟ್ಟಣದ ಉಪಪ್ರಾದೇಶಿಕ ಕೇಂದ್ರದಲ್ಲಿ ತಾತ್ಕಾಲಿಕ ಕೌಶಲ್ಯಾಭಿವೃದ್ಧಿ ಕೇಂದ್ರ ನಿರ್ಮಾಣ ಕಾಮಗಾರಿಯಡಿ ಕೆ.ಆರ್.ಐ.ಡಿ.ಎಲ್ ಮೂಲಕ ಕೃತಕ ಬುದ್ದಿಮತ್ತೆ ತರಬೇತಿ ಕೇಂದ್ರ ಕಾಮಗಾರಿ ಭೂಮಿ ಪೂಜೆ ಮಾಡುವುದು ಬಾಕಿ ಇದೆ ಎಂದರು.

ಪವರ್ ಗ್ರಿಡ್ ಕಾರ್ಪೊರೇಷನ್ ಇವರಿಂದ ಸಿ.ಎಸ್.ಆರ್ ಅನುದಾನದಡಿ 2 ಮಾದರಿ ಶಾಲೆಗಳ ನಿರ್ಮಾಣ, ಲೋಕೋಪಯೋಗಿ ಇಲಾಖೆಯಿಂದ ರಾಷ್ಟ್ರೀಯ ಹೆದ್ದಾರಿ–150ಎ ರಲ್ಲಿ 7 ಮೇಲ್ಸೆತುವೆ ನಿರ್ಮಾಣ ಕಾಮಗಾರಿಗಳಿಗೆ ರೂ. 23.88 ಕೋಟಿ ಅನುದಾನದಡಿ ಗುಡದೂರ, ರಂಗಾಪೂರ, ಮುದ್ದಾಪೂರ ಕ್ರಾಸ್, ಎಲೆಕುಡ್ಲಗಿ, ಬಸಾಪೂರ, ಕಲ್ಲೂರ ಮತ್ತು ಸಿಂಧನೂರಗಳಲ್ಲಿ ಮೇಲ್ಸೆತುವೆ ನಿರ್ಮಾಣ ಕಾಮಗಾರಿ ಮಾಡಲಾಗುತ್ತದೆ. ಇದರ ಭೂಮಿ ಪೂಜೆ ಮಾಡುವುದು ಬಾಕಿ ಇರುತ್ತದೆ ಎಂದು ಹೇಳಿದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಸಿರಗುಪ್ಪ ಪಟ್ಟಣದಲ್ಲಿ ಒನ್ ಟೈಮ್ ಇಂಪ್ರುಮೆಂಟ್ ರೋಡ್ (ಔಟಿಜ ಣಟಜುಟಿಡಿಠತಜ–ಟಜಟಿಣ ಖಠಚಿಜ) ನಿರ್ಮಾಣ ಕಾಮಗಾರಿಗಾಗಿ ರೂ. 60 ಕೋಟಿ ವೆಚ್ಚದಲ್ಲಿ ಕೊಪ್ಪಳದಲ್ಲಿ ಈಗಾಗಲೇ ನಿರ್ಮಾಣ ಮಾಡಲಾಗಿರುವ ಸಿಮೆಂಟದ ರಸ್ತೆ ಮಾದರಿಯಲ್ಲಿ ಈ ಕಾಮಗಾರಿಯನ್ನು ಕೈಗೊಳ್ಳಲಾಗುವುದು. ನಬಾರ್ಡ ವತಿಯಿಂದ ಕೊಪ್ಪಳ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಮೆತಗಲ್ ಗ್ರಾಮದಲ್ಲಿ ಆಹಾರ ಸಂಸ್ಕರಣ ಘಟಕವನ್ನು 4 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲು ಯೋಜನೆ ರೂಪಿಸಲಾಗಿದ್ದು, ಕಾಮಗಾರಿ ಪ್ರಾರಂಭಿಸುವುದು ಬಾಕಿ ಇದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಸದರ ಆಪ್ತ ಸಹಾಯಕರಾದ ಅರುಣ, ವೀರಭದ್ರಪ್ಪನಾಯಕ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಡಾ. ಸುರೇಶ್ ಜಿ. ಸೇರಿದಂತೆ ವಿವಿಧ ಮಾಧ್ಯಮ ಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಆರ್ಯ ವೈಶ್ಯ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ರಾಯಚೂರು ಜೂನ್ 30–ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2025–26 ನೇ ಸಾಲಿಗೆ ಸಾಲ ಸೌಲಭ್ಯ ಒದಗಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ನಿಗಮದಿಂದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಆರ್ಯ ವೈಶ್ಯ ಆಹಾರ ವಾಹಿನಿ/ ವಾಹಿನಿ ಯೋಜನೆ, ವಾಸವಿ ಜಲಶಕ್ತಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಸಾಲ ಸೌಲಭ್ಯ ಕಲ್ಪಿಸಲಾಗುತ್ತಿದೆ. ಸಂಬಂಧಪಟ್ಟ ಯೋಜನೆ ಸೌಲಭ್ಯ ಪಡೆಯಲು ಅರ್ಹ ಅರ್ಜಿದಾರರು ಸಾಮಾನ್ಯ ವರ್ಗದಲ್ಲಿ ಆರ್ಯ, ವೈಶ್ಯ ಸಮುದಾಯಕ್ಕೆ ಸೇರಿರಬೇಕು, "ನಮೂನೆಜಿ"ಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಪಡೆದಿರಬೇಕು (ಪ್ರಮಾಣ ಪತ್ರ ಚಾಲ್ತಿಯ್ಲಿರಬೇಕು). ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿರಬೇಕು. ಹಾಗೇ ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಖಾತೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು. ಈ ಯೋಜನೆಯಲ್ಲಿ ಮಹಿಳೆಯರಿಗೆ ಶೇ.33%, ವಿಶೇಷಚೇತನರಿಗೆ ಶೇ.5% ಹಾಗೂ ತೃತೀಯ ಲಿಂಗಿಗಳಿಗೆ (ವರ್ಗ) ಶೇ.5% ಮೀಸಲಾತಿಯನ್ನು ನೀಡಲಾಗಿದೆ. ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹಗಿರುತ್ತಾರೆ, ಆದರೆ ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಮಾತ್ರ ಇಬ್ಬರಿಗೆ ಸಾಲ ಸೌಲಭ್ಯ ಪಡೆಯಲು ಅವಕಾವಿರುತ್ತದೆ. ಅರ್ಜಿಯನ್ನು ಅನ್ ಲೈನ್ ಮೂಲಕ http://kacdc.karnataka.gov.in./ ಅಧಿಕೃತ ಜಾಲತಾಣದಲ್ಲಿ ಜುಲೈ 31 ರೊಳಗೆ ಸಲ್ಲಿಸಿ, ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ: 9448451111ಗೆ ಕಚೇರಿಯ ಸಮಯದಲ್ಲಿ ಸಂಪರ್ಕಿ ಸಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪರಾಧ ತಡೆಯುವಲ್ಲಿ ಸಾರ್ವಜನಿಕರ ಸಹಕಾರ ಅಗತ್ಯ-ಸುತಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.30-ಸಮಾಜದಲ್ಲಿ ನಡೆಯುವ ಅಪರಾಧಗಳ ತಡೆಗೆ ಸಾರ್ವಜನಿಕರು ಸಹ ಪೋಲಿಸರೊಂದಿಗೆ ಸಹಕರಿಸಬೇಕು ಎಂದು ಬಾಗಲಕೋಟೆ ಡಿವೈಎಸ್ ಪಿ ಗಜಾನನ ಸುತಾರ ಹೇಳಿದರು.

ತಾಲೂಕಿನ ಶಿರೂರ ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ಶನಿವಾರ ಪೋಲಿಸ್ ಇಲಾಖೆ ಹಾಗೂ ಸ್ಥಳೀಯ ಪಟ್ಟಣ ಪಂಚಾಯತಿ ಸಹಯೋಗದಲ್ಲಿ ಅಪರಾಧ ತಡೆ ಮಾಸಾಚರಣೆ ಅಂಗವಾಗಿ ಶಾಲಾ ಮಕ್ಕಳು ಮತ್ತು ಸಾರ್ವಜನಿಕರಿಗಾಗಿ ಹಮ್ಮಿಕೊಂಡಿದ್ದ ಕಾನೂನು ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಮಾಜದಲ್ಲಿ ನಿತ್ಯ ನಡೆಯುವ ಅಪರಾಧಗಳನ್ನು ತಡೆಯುವ ನಿಟ್ಟಿನಲ್ಲಿ ಪೋಲಿಸರು ತಮ್ಮ ಕರ್ತವ್ಯ ನಿರ್ವಹಿಸುತ್ತಿದ್ದರೂ ಘಟನೆಗಳ ಬಗ್ಗೆ ಸಾರ್ವಜನಿಕರು ಮಾಹಿತಿ ನೀಡಿ ಸಹಕರಿಸಬೇಕು. ಜೊತೆಗೆ ಕಾನೂನಿನ ಅರಿವು ಎಲ್ಲರಿಗೂ ಇದ್ದಲ್ಲಿ ಅಪರಾಧಗಳ ಸಂಖ್ಯೆ ಕಡಿಮೆಯಾಗುತ್ತವೆ. ಹೀಗಾಗಿ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಕಾನೂನು ತಿಳುವಳಿಕೆ ಮೂಡಿಸುವುದು ಅಗತ್ಯವಾಗಿದೆ ಎಂದು ಸುತಾರ ಹೇಳಿದರು.

ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣಗಳ ಬಗ್ಗೆ ಬಹಳಷ್ಟು ಎಚ್ಚರ ವಹಿಸಬೇಕು. ವೈಯಕ್ತಿಕ ವಿಷಯ,ಭಾವಚಿತ್ರ ಹಂಚಿಕೊಳ್ಳುವುದು ತಮ್ಮನ್ನು ತೊಂದರೆಗೆ ಸಿಲುಕಿಸುತ್ತವೆ. ಮಾದಕ ದ್ರವ್ಯ ಸೇವನೆಯ ದುಶ್ಚಟಗಳಿಗೆ ಬಲಿಯಾಗದೇ ಆರೋಗ್ಯ ಕಾಪಾಡಿಕೊಂಡು ಬದುಕು ಸುಂದರಗೊಳಿಸಿಕೊಳ್ಳಬೇಕು ಎಂದು ಹೇಳಿದ ಡಿವೈಎಸ್.ಪಿ ಸುತಾರ, ಬಾಲ್ಯ ವಿವಾಹ ತಡೆಯುವ ನಿಟ್ಟಿನಲ್ಲಿ ಪಾಲಕರಿಗೆ ಕಾನೂನಿನ ತಿಳುವಳಿಕೆ ಮೂಡಿಸುವ ಕಾರ್ಯವನ್ನು ಯುವಕರು ಮಾಡಬೇಕು ಎಂದರು.

ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಶಿವಾನಂದ ಆಲೂರ, ನಾಮ ನಿರ್ದೇಶಿತ ಸದಸ್ಯರಾದ ಜಗದೀಶ ದೇಸಾನಿ, ಸಿದ್ದಪ್ಪ ಗಾಳಿ, ಪ್ರೌಢಶಾಲೆಯ ಮುಖ್ಯಗುರುಮಾತೆ ಎಲ್.ಟಿ.ಪೂಜಾರ, ಸಿದ್ದಪ್ಪ ಮೇಳಿ, ಧರ್ಮಣ್ಣ ಚಲವಾದಿ, ಸಂಜಯ ನಡುವಿನಮನಿ, ಪೋಲಿಸ್ ಇಲಾಖೆಯ ಎನ್.ಎಚ್.ನರಟ್ಟಿ, ಟಿಪ್ಪು ವಾಲಿಕಾರ ಇದ್ದರು.

# ಅರವಿಂದ ಅರಳಿ ಯವರಿಗೆ ಸನ್ಮಾನ.



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಬೀದರ ಮಾಜಿ ಎಂ.ಎಲ್.ಸಿ.ಗಳಾದ ಅರವಿಂದ ಅರಳಿ ಯವರಿಗೆ ಜಿಲ್ಲೆಯ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾದ ಮಿಥುನ್ ಡಿ. ಕೆ.ಯವರು ಭೇಟಿಯಾಗಿ ಸನ್ಮಾನಿಸಿದರು. ಮಾಜಿ ಎಂಎಲ್‌ಸಿ ಅರಳಿರವರು ಸನ್ಮಾನ ಸ್ವೀಕರಿಸಿ ಮಾತನಾಡಿ, ರಾಜಕೀಯದಲ್ಲಿ ನೀವು ಬೆಳೆಯಬೇಕು. ನಾವು ನಿಮ್ಮ ಜೊತೆಗೆ ಇದ್ದೇವೆ ಎಂದರು. ಮಿಥುನ್ ಅವರು ನಿಷ್ಠಾವಂತ ಕಾರ್ಯಕರ್ತ ಹಾಗೂ ಸಮಾಜ ಸೇವಕರಾಗಿ ಕಾರ್ಯಮಾಡಬೇಕು ಎಂದು ತಿಳಿಸಿದರು.

# ಅನಂತಮೂರ್ತಿ ಮನುಷ್ಯ ಪರಂಪರೆಯ ಬಹುದೊಡ್ಡ ಲೇಖಕರು-ರಾಗಂ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.30-ಯು.ಆರ್.ಅನಂತಮೂರ್ತಿ ವಿದ್ವತ್ ಪರಂಪರೆಗಿಂತ ಮನುಷ್ಯ ಪರಂಪರೆಯ ಬಹುದೊಡ್ಡ ಲೇಖಕರಾಗಿದ್ದು, ಲೋಕದ ಜೀವಿಗಳ ಸಂಕಟ ನನ್ನ ಸಂಕಟ ಎಂದು ಅರ್ಥ ಮಾಡಿಕೊಳ್ಳುವುದೇ ವೈಚಾರಿಕತೆ ಎಂದು ನಂಬಿದವರು ಎಂದು ಬೆಂಗಳೂರಿನ ವಿಜಯನಗರ ಸರಕಾರಿ ಕಾಲೇಜಿನ ಡಾ.ರಾಜಶೇಖರಯ್ಯ ಹಿರೇಮಠ(ರಾಗಂ) ಹೇಳಿದ್ದಾರೆ.

ನಗರದ ಶಿವಾನುಭವ ಸಮಿತಿ ಹಾಗೂ ಸಾಹಿತ್ಯ-ಸಂಸ್ಕೃತಿ ಸಂವಹನ ವೇದಿಕೆ ಚರಂತಿಮಠ ಇವರ ಸಹಯೋಗದಲ್ಲಿ ಚರಂತಿಮಠದ ಶಿವಾನುಭವ ಮಂಟಪದಲ್ಲಿ ಶನಿವಾರ ನಡೆದ ಭಾರತೀಯ ಜ್ಞಾನಪೀಠ ಪುರಸ್ಕೃತ ಸಾಹಿತ್ಯ ಸಂವಾದ 7ನೇ ತಿಂಗಳ ಉಪನ್ಯಾಸ ಮಾಲಿಕೆಯಲ್ಲಿ ಯು.ಆರ್. ಅನಂತಮೂರ್ತಿ ಸಾಹಿತ್ಯ ಅನನ್ಯತೆ ಕುರಿತು ಅವರು ಮಾತನಾಡಿದರು.

ಸಾಹಿತ್ಯ ಎಂದರೆ ತಿರುಚುವುದಲ್ಲ, ಅರಚುವುದಲ್ಲ, ಘೋಷಣೆ ಮಾಡುವದಲ್ಲ, ಅಭಿಪ್ರಾಯ ಸಮರ್ಪಣೆ ಮಾಡುವುದಲ್ಲ, ಶ್ರೇಷ್ಠ ಸಾಹಿತ್ಯವೆನ್ನುವುದು ಪಿಸು ಮಾತಿನಂತೆ. ವೈಚಾರಿಕತೆ ಮನುಷ್ಯತ್ವಕ್ಕೆ ಸಂಬಂಧಪಟ್ಟ ವಿಚಾರವೇ ವಿನ: ಪಂಥಕ್ಕೆ, ಪಂಗಡಕ್ಕೆ, ಪಕ್ಷಕ್ಕೆ ಅಲ್ಲ. ಇಲ್ಲಿ ಪಕ್ಷ ನಿಷ್ಠವಾದ ರಾಜಕೀಯ ಮತ್ತು ರಾಜಕಾರಣ ನಮ್ಮನ್ನು ಮತಭ್ರಷ್ಟರನ್ನಾಗಿ ಮಾಡುತ್ತಿದೆ ಎಂದ ರಾಗಂ, ಯುಗಧರ್ಮವನ್ನು ಕಟ್ಟಿಕೊಳ್ಳುವ ಲೇಖಕರ ಜವಾಬ್ದಾರಿ, ಓದು, ಅಭಿರುಚಿಗಳು ತುಂಬಾ ಭಿನ್ನವಾಗಿರಬೇಕು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಂಚಾಲಕ ಡಾ.ವಿಜಯಕುಮಾರ ಕಟಗಿಹಳ್ಳಿಮಠ, ಕನ್ನಡ ವಿಶ್ವ ಭಾಷೆಯನ್ನಾಗಿಸುವಲ್ಲಿ ಯು.ಆರ್. ಅನಂತಮೂರ್ತಿ ಅವರ ಕಾರ್ಯ ಅಪಾರ ಎಂದರು. ಬಸವರಾಜ ಖೋತ ಸ್ವಾಗತಿಸಿದರು. ಅಜಯ ಪುರಾಣಿಕ ಪರಿಚಯಿಸಿದರು. ಡಾ.ಎಸ್.ಡಿ.ಕೆಂಗಲಗುತ್ತಿ ವಂದಿಸಿದರು. ಐ.ಕೆ.ಮಠದ ಕಾರ್ಯಕ್ರಮ ನಿರೂಪಿಸಿದರು. ಬಸವರಾಜ ಭಗವತಿ, ಎಸ್.ಜಿ.ಕೋಟಿ, ಸಿದ್ದರಾಮ ಮನಹಳ್ಳಿ, ಡಾ,ಜಗನ್ನಾಥ ಚವ್ಹಾಣ, ಬಸವರಾಜ ತಿಪಶೆಟ್ಟಿ, ಡಾ.ಬಸವರಾಜ ಕುಂಬಾರ, ಡಾ.ಚಂದ್ರಶೇಖರ ಕಾಳನ್ನವರ, ಡಾ.ಸಣ್ಣವೀರಣ್ಣ ದೊಡಮನಿ, ಸಂಗಮೇಶ ಬ್ಯಾಳಿ ಸೇರಿದಂತೆ ಅನೇಕರು ಇದ್ದರು.

# ಜಿಲ್ಲಾ ಮಟ್ಟದ ಮೌಲಾನಾ ಆಜಾದ್ ಮಾದರಿ ಶಾಲೆ ನಿರ್ಮಾಣ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು ಕ್ಷೇತ್ರದಲ್ಲಿ ಮೌಲಾನಾ ಆಜಾದ್ ಮಾದರಿ ವಸತಿ ಶಾಲೆ ನಿರ್ಮಾಣಕ್ಕೆ 5 ಕೋಟಿ 20 ಲಕ್ಷ ಅನುದಾನವನ್ನು ರಾಜೀವ ಗಾಂಧಿ ವಸತಿ ಯೋಜನೆ ಅಡಿಯಲ್ಲಿ ನೀಡಲಾಗಿದೆ ಅಲ್ಪ ಸಂಖ್ಯಾತರ್ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಲು ಲಿಂಗಸುಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ವಜ್ಜಲ ಗುದ್ದಲಿ ಪೂಜೆ ಮಾಡಿ ಮಾತನಾಡಿದ ಅವರು ಕ್ಷೇತ್ರದಲ್ಲಿ ಶಿಕ್ಷಣ-ಕ್ಕಾಗಿ ಹೆಚ್ಚು ಮಹತ್ವ ವನ್ನು ನೀಡಲಾಗಿದೆ ಕ್ಷೇತ್ರದ ಮಕ್ಕಳು ಉತ್ತಮ ಶಿಕ್ಷಣವನ್ನು ಪಡೆದರೆ ಮುಂದೆ ಅವರ ಭವಿಷ್ಯ ಉಜ್ವಲ ವಾಗುವುದು ಎಂದು ಹೇಳಿದರು ಗುತ್ತಿಗೆದಾರರಿಗೆ ಉತ್ತಮ ಗುಣಮಟ್ಟದಲ್ಲಿ ಕಾಮಗಾರಿಯನ್ನು ಮಾಡಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ

ಜಿಲ್ಲಾ ಗ್ಯಾರಂಟಿ ಅಧ್ಯಕ್ಷರಾದ ಪಾಮಯ್ಯ ಮುರಾರಿ, ನಗರ ಪ್ರಾಧಿಕಾರದ ಅಧ್ಯಕ್ಷರಾದ ಭೂಪನಗೌಡ ಕರಡಕಲ್, ಬಸನಗೌಡ ಮೇಟಿ ಈಚನಾಳ್, ಅಯ್ಯಪ್ಪ ಮಾಳುರು, ಗಿರಿ ಮಲ್ಲನಗೌಡ ಕರಡಕಲ್, ಅಬ್ದುಲ್ ಸಾಬ್ ಬೇಕರಿ, ಸೇರಿದಂತೆ ಇಲಾಖೆಯ ಮುಖ್ಯಸ್ಥರಾದ ಷಡಕ್ಷರಯ್ಯ ಹಾಗೂ ಸಿಬ್ಬಂದಿ ವರ್ಗ ಗುತ್ತಿಗೆದಾರರು ಈ ಸಭೆಯಲ್ಲಿ ಭಾಗವಹಿಸಿದ್ದರು.

# ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ನೋಡಲ್ ಅಧಿಕಾರಿಗಳ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.30-ಪ್ರಸಕ್ತ ಸಾಲಿನ ಮುಂಗಾರಿನಲ್ಲಿ ಪ್ರಾಕೃತಿಕ ವಿಕೋಪದ ನಿರ್ವಹಣೆಗೆ ಜಿಲ್ಲಾಡಳಿತದೊಂದಿಗೆ ಸಮರ್ಪಕವಾಗಿ ಸ್ಪಂದಿಸಲು ಮತ್ತು ಮೇಲ್ವಿಚಾರಣೆ ನಡೆಸುವ ಉದ್ದೇಶದಿಂದ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ತಾಲೂಕಾ ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಿ ಜಿಲ್ಲಾಧಿಕಾರಿ ಸಂಗಪ್ಪ ಎಂ. ಆದೇಶ ಹೊರಡಿಸಿದ್ದಾರೆ.

ಜಿಲ್ಲೆಯಲ್ಲಿ ಕೆಲ ದಿನಗಳಿಂದ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗುತ್ತಿರುವದರಿಂದ ಕೃಷ್ಣಾ, ಘಟಪ್ರಭಾ ಹಾಗೂ ಮಲಪ್ರಭಾ ನದಿಗಳಿಗೆ ಜಲಾಶಯಗಳಿಂದ ಹೆಚ್ಚಿನ ನೀರನ್ನು ಹೊರಬಿಡಲಾಗುತ್ತಿದೆ. ಇದರಿಂದ ಜಿಲ್ಲೆಯ ಕೆಲವು ತಾಲೂಕುಗಳಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗುತ್ತಿದೆ. ಈ ಹಿನ್ನೆಲೆಯಲ್ಲಿ ಆಯಾ ತಾಲೂಕಿಗೆ ಒಬ್ಬರಂತೆ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ನೇಮಕ ಮಾಡಿದ್ದಾರೆ. ಬಾಗಲಕೋಟೆ ತಾಲೂಕಿಗೆ ಕಾರ್ಯನಿರ್ವಾಹಕ ಅಭಿಯಂತರರು,ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ (9972797178), ಬಾದಾಮಿ ತಾಲೂಕಿಗೆ ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ (9535207496), ಗುಳೇದಗುಡ್ಡ ತಾಲೂಕಿಗೆ ಉಪನಿರ್ದೇಶಕರು, ಕೃಷಿ ಇಲಾಖೆ (8277933501), ಹುನಗುಂದ ತಾಲೂಕಿಗೆ ಕಾರ್ಯನಿರ್ವಾಹಕ ಅಭಿಯಂತರರು,ಪಂಚಾಯತರಾಜ್ ಇಂಜಿನೀಯರಿಂಗ್ ವಿಭಾಗ (8660966508), ಇಲಕಲ್ಲ ತಾಲೂಕಿಗೆ ಉಪನಿರ್ದೇಶಕರು, ಗಣಿ ಮತ್ತು ಭೂ ವಿಜ್ಞಾನ ಇಲಾಖೆ (9740759899), ಜಮಖಂಡಿ ತಾಲೂಕಿಗೆ ಉಪನಿರ್ದೇಶಕರು, ಕೃಷಿ ಇಲಾಖೆ ಜಮಖಂಡಿ (8277933502), ರಬಕವಿ-ಬನಹಟ್ಟಿ ತಾಲೂಕಿಗೆ ಉಪ ನಿರ್ದೇಶಕರು, ಸಮಾಜಕಲ್ಯಾಣ ಇಲಾಖೆ (8296162624), ಮುಧೋಳ ತಾಲೂಕಿಗೆ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ (9731042063), ಬೀಳಗಿ ತಾಲೂಕಿಗೆ ಉಪನಿರ್ದೇಶಕರು, ತೋಟಗಾರಿಕೆ ಇಲಾಖೆ (9448999233) ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ನೇಮಕಗೊಂಡ ನೋಡಲ್ ಅಧಿಕಾರಿಗಳು ಆಯಾ ತಾಲೂಕಾ ವ್ಯಾಪ್ತಿಯಲ್ಲಿನ ಪ್ರವಾಹ ಪೀಡಿತ ಪ್ರದೇಶಗಳಿಗೆ ಸ್ಥಳೀಯ ತಾಲೂಕಾ ತಹಶೀಲ್ದಾರರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಪ್ರವಾಸ ಕೈಗೊಂಡು ಪರಿಸ್ಥಿತಿಯ ನಿರ್ವಹಣೆಗೆ ಕ್ರಮಕೈಗೊಳ್ಳಬೇಕು. ಜಲಾಶಯಗಳಿಂದ ಹೆಚ್ಚಿನ ಪ್ರಮಾಣದಲ್ಲಿ ನೀರು ಬಂದಲ್ಲಿ ಮುಳುಗಡೆಯಾಗುವ ಪ್ರದೇಶಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರನ್ನು ಕಡ್ಡಾಯವಾಗಿ ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಲು ಅಗತ್ಯ ಕ್ರಮವಹಿಸಬೇಕು. ಬಾಧಿತ ಕುಟುಂಬಗಳಿಗೆ ತುರ್ತು ಪರಿಹಾರ ಒದಗಿಸುವುದು, ಬೆಳೆಹಾನಿಗೆ ಸಂಬಂಧಿಸಿದಂತೆ ಪರಿಹಾರ ಒದಗಿಸುವ ಕಾರ್ಯ ಮಾಡಬೇಕು ಎಂದು ನೋಡಲ್ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ನಿವೃತ್ತ ಕೃಷಿ ಅಧಿಕಾರಿಗೆ ಬೀಳ್ಕೊಡುಗೆ

# ರೈತರಿಗೆ ಒಡನಾಡಿಯಾಗಿದ್ದ ಪಾಟೀಲ: ಕಳ್ಳೆನ್ನವರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.30-ಕೃಷಿ ಅಧಿಕಾರಿ ಆರ್.ಐ.ಪಾಟೀಲ ಪ್ರತಿ ಗ್ರಾಮಗಳಲ್ಲಿ ರೈತರ ಒಡನಾಡಿಯಾಗಿ ಜನಾನುರಾಗಿಯಾಗಿದ್ದರು ಎಂದು ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ ಹೇಳಿದರು.

ನಗರದ ರೂಪಲ್ಯಾಂಡನಲ್ಲಿರುವ ಕೃಷಿ ಸಹಾಯಕ ನಿರ್ದೇಶಕರ ಕಚೇರಿ ಆವರಣದಲ್ಲಿ ವಯೋ ನಿವೃತ್ತಿ ಹೊಂದಿದ ಕೃಷಿ ಅಧಿಕಾರಿ ಆರ್.ಆಯ್.ಪಾಟೀಲರಿಗೆ ಸೋಮವಾರ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ 30 ವರ್ಷಗಳಿಂದ ಸೇವೆ ಸಲ್ಲಿಸಿದ ಪಾಟೀಲರು ವಿವಿಧ ಹಂತದ ಅಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದರಿಂದ ರೈತರಿಗೆ ತುಂಬಾ ಹತ್ತಿರವಾಗಿದ್ದರು ಎಂದರು.

ರೈತರಿಗೆ ಉಪಯುಕ್ತ ಮಾಹಿತಿಯ ಜೊತೆಗೆ ಬೀಜ, ಗೊಬ್ಬರಗಳ ಬಳಕೆ, ಕೃಷಿ ಯಂತ್ರೋಪಕರಣಗಳ ತಲುಪಿಸುವದರೊಂದಿಗೆ ಕೃಷಿ ಕಾರ್ಯಗಳಲ್ಲಿ ಸಕ್ರಿಯರಾಗಿದ್ದರು. ಅಲ್ಲದೇ ಪಾಟೀಲರು ಒಬ್ಬ ಉತ್ತಮ ವಾಗ್ಮಿಗಳು ಆಗಿದ್ದರು. ಇದರಿಂದಾಗಿ ತಾಲೂಕಿನ ಎಲ್ಲ ಗ್ರಾಮಗಳ ರೈತರ ಪ್ರತಿಯೊಬ್ಬರ ಹೆಸರನ್ನು ಹೇಳುವಷ್ಟರ ಮಟ್ಟಿಗೆ ಚಿರಪರಿಚಿತರಾಗಿದ್ದರು. ಇದಕ್ಕೆ ಇಂದಿನ ಕಾರ್ಯಕ್ರಮದಲ್ಲಿ ಸೇರಿದ ಅಪಾರ ಅಭಿಮಾನಿಗಳೇ ಸಾಕ್ಷಿ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಆರ್.ಆಯ್.ಪಾಟೀಲ, ಇದುವರೆಗೆ ಕೃಷಿ ಇಲಾಖೆಯ ಅಧಿಕಾರಿ ಎಂಬುದನ್ನು ಮನದಲ್ಲಿಟ್ಟುಕೊಂಡು ಕಾರ್ಯನಿರ್ವಹಿಸುತ್ತಿರಲಿಲ್ಲ. ಕಚೇರಿಗೆ ಬರುವ ಪ್ರತಿಯೊಂದು ರೈತರ ಯೋಗಕ್ಷೇಮದ ಜೊತೆಗೆ ಅವರಿಗೆ ಕೃಷಿಗೆ ಸಂಬಂಧಿಸಿದ ಕಾರ್ಯಗಳನ್ನು ಮಾಡಿಕೊಡುತ್ತಿದ್ದೆ. ನನಗೆ ಕಳೆದ 30 ವರ್ಷಗಳಿಂದ ಸಹಕರಿಸಿದ ಅಧಿಕಾರಿಗಳು, ರೈತ ಭಾಂದವರು ಹಾಗೂ ಇತರರಿಗೆ ಧನ್ಯವಾದಗಳನ್ನು ಸಲ್ಲಿಸುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಕೃಷಿ ಉಪನಿರ್ದೇಶಕ ಎಲ್.ಐ.ರೂಢಗಿ, ಸಹಾಯಕ ನಿರ್ದೇಶಕ ಮಂಜುನಾಥ ಕೆ, ಸಹಾಯಕ ಕೃಷಿ ಅಧಿಕಾರಿ ಆರ್.ಎಸ್.ಸುರಪುರ, ಕೃಷಿ ತಾಂತ್ರಿಕ ಅಧಿಕಾರಿ ಜಗದೀಶ ಹಾದಿಮನಿ, ಕಲಾದಗಿ ಕೃಷಿ ಅಧಿಕಾರಿ ಪ್ರಸನ್ನ ಮಾನೆ ಸೇರಿದಂತೆ ರೈತರು, ಹಿತೈಷಿಗಳು ಉಪಸ್ಥಿತರಿದ್ದರು.

# ಲಿಂಗೈಕ್ಯ ವಿರಕ್ತ ಸ್ವಾಮಿಗಳ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮ ಪಟ್ಟಣದಲ್ಲಿ ಬೃಹತ್ ಬೈಕ್ ರ್‍ಯಾಲಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಆರಾಧ್ಯ ದೈವ ಶ್ರೀ ಖಾಸ್ಗತೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಲಿಂಗೈಕ್ಯ ಶ್ರೀ ವಿರಕ್ತ ಮಹಾಸ್ವಾಮಿಗಳ ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ರವಿವಾರ ಬೃಹತ್ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಯಿತು.

ಪಟ್ಟಣದ ಕೌಟಿಲ್ಯ ಅಕಾಡೆಮಿ ಅಧ್ಯಕ್ಷ ರಾಜಶೇಖರ ಸಜ್ಜನ ಅವರ ಕುಟುಂಬ ಸದಸ್ಯರು ಭಕ್ತಿಯಿಂದ ಕೊಡಮಾಡಿದ 4 ಅಡಿ ಎತ್ತರದ ಲಿಂಗೈಕ್ಯ ಶ್ರೀ ವಿರಕ್ತ ಶ್ರೀಗಳ ಮೂರ್ತಿಯ ಭವ್ಯ ಮೆರವಣಿಗೆಯ ಬೃಹತ್ ಬೈಕ್ ರ್‍ಯಾಲಿಗೆ ಪೂಜ್ಯ ಸಿದ್ದಲಿಂಗ ದೇವರು ಶ್ರೀ ಬಸವೇಶ್ವರ ವೃತ್ತದಲ್ಲಿ ಚಾಲನೆ ನೀಡಿದರು. ಅಲ್ಲಿಂದ ನೂರಾರು ಬೈಕ್ ಸವಾರರು ಓಂ ನಮಃ ಶಿವಾಯ ಶ್ರೀ ಖಾಸ್ಗತೇಶ್ವರ ಹಾಗೂ ಶ್ರೀ ವಿರಕ್ತ ಮಹಾ ಸ್ವಾಮಿಗಳ ಹೆಸರಲ್ಲಿ ಜಯ ಘೋಷಗಳನ್ನು ನಾಲ್ಕೂ ದಿಕ್ಕಿನಲ್ಲಿ ಮೊಳಗಿಸಿ ಆರಂಭಿಸಿದ ರ್‍ಯಾಲಿಯು ಬಸ್ ನಿಲ್ದಾಣ ಮಾರ್ಗವಾಗಿ ಮಹಾರಾಣಾ ಪ್ರತಾಪ್ ಸಿಂಹ ವೃತ್ತ ಶಿವಾಜಿ ವೃತ್ತ ಕತ್ರಿ ಬಜಾರ್ ರಸ್ತೆಯಿಂದ ಶ್ರೀ ಖಾಸ್ಗತೇಶ್ವರ ಮಠಕ್ಕೆ ತಲುಪಿತು ಅಲ್ಲಿ ಸಕಲ ಪೂಜಾ ವಿಧಿ ವಿಧಾನಗಳನ್ನು ಪೂರೈಸಿದ ನಂತರ ಮೂರ್ತಿಯ ಪ್ರತಿಷ್ಠಾಪನೆಯನ್ನು ಮಾಡಲಾಯಿತು. ಕಾರ್ಯಕ್ರಮದಲ್ಲಿ ಗಣ್ಯರಾದ ಪ್ರಭುಗೌಡ ಮದರಕಲ್ಲ, ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಎಸ್.ಬಿ.ಕಟ್ಟಿಮನಿ, ಪರಪ್ಪ ಸಂಗಪ್ಪ ಸಜ್ಜನ, ಕಾಶಿನಾಥ ಸಜ್ಜನ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಡಿ.ವಿ.ಪಾಟೀಲ, ಜೈಸಿಂಗ್ ಮೂಲಿಮನಿ, ಮಹಾಂತೇಶ ಮುರಾಳ, ರಾಜು ಸಜ್ಜನ, ಇಬ್ರಾಹಿಂ ಮನ್ಸೂರ, ಅಶೋಕ ಚಿನಗುಡಿ, ತಿಪ್ಪಣ್ಣ ಸಜ್ಜನ, ರವಿಕಾಂತ ಚಂದುಕರ್, ರಾಜು ಅಲ್ಲಾಪೂರ, ನದೀಮ ಕಡು ಮತ್ತಿತರರು ಇದ್ದರು.

## ನಿವೃತ್ತ ಶಿಕ್ಷಕ ಬಿ.ಎಂ.ಜಾನಮಟ್ಟಿಗೆ ಸನ್ಮಾನ

# ಅಸಹಾಯಕರಿಗೆ ಸಹಾಯ ಮಾಡುವುದರಲ್ಲಿ ತೃಪ್ತಿಯಿದೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.30-ಬಾಲ್ಯದಲ್ಲಿ ಕಷ್ಟದ ದಿನಗಳನ್ನು ಕಳೆದು ಪರಿಶ್ರಮದಿಂದ ಓದಿ ಶಿಕ್ಷಕನಾಗಿ ಉತ್ತಮ ಬದುಕು ಕಟ್ಟಿಕೊಂಡ ಶಿಕ್ಷಕ ಜಾನಮಟ್ಟಿ, ತಮ್ಮ ಸೇವಾ ಅವಧಿಯಲ್ಲಿ ವಿದ್ಯಾರ್ಥಿಗಳಿಗೂ ಉತ್ತಮ ಮಾರ್ಗದರ್ಶನ ನೀಡಿ ಮಾದರಿ ಎನಿಸಿದ್ದಾರೆ ಎಂದು ಬಿವಿವಿ ಸಂಘದ ನಿರ್ದೇಶಕ ರವಿ ಸಂಜಯ ಸಾವಳಗಿಮಠ ಹೇಳಿದರು.

ನವನಗರ ಸೆಕ್ಟರ್ 43ರ ಸರ್ಕಾರಿ ಪ್ರೌಢಶಾಲೆಯಲ್ಲಿ ಸೇವೆ ಸಲ್ಲಿಸಿ ಸೋಮವಾರ ನಿವೃತ್ತಿ ಹೊಂದಿದ ಶಿಕ್ಷಕ ಜಾನಮಟ್ಟಿ ಅವರಿಗೆ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಮ್ಮ ನೇರ ನುಡಿಯಿಂದಾಗಿ ಹಲವಾರು ತೊಂದರೆಗಳನ್ನು ಎದುರಿಸಿರುವ ಬಿ.ಎಂ.ಜಾನಮಟ್ಟಿ ಶಿಕ್ಷಕರು ಯಾವುದಕ್ಕೂ ರಾಜಿಯಾಗಲಿಲ್ಲ ಎಂದರು.

ಶಿಕ್ಷಕ ಬಿ.ಎಂ. ಜಾನಮಟ್ಟಿ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಹೆತ್ತ ತಂದೆ-ತಾಯಿ, ಕಲಿಸಿದ ಶಿಕ್ಷಕರನ್ನು ಮರೆಯಬಾರದು. ಅವರು ತೆ-ೂರಿದ ಮಾರ್ಗದಲ್ಲಿ ನಡೆದರೆ ಉತ್ತಮ ಬದುಕು ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಜೀವನದಲ್ಲಿ ಗಳಿಕೆ ಮಾಡುವುದೊಂದೇ ಸಾಧನೆಯಲ್ಲ. ಅಸಹಾಯಕರಿಗೆ ಸಹಾಯ ಮಾಡುವುದರಲ್ಲಿ ಅತ್ಯಂತ ತೃಪ್ತಿ ಕಾಣಬಹುದಾಗಿದೆ ಎಂದ ಜಾನಮಟ್ಟಿ, ತಾವು 10 ಮಕ್ಕಳನ್ನು ದತ್ತು ಪಡೆದು ಅವರ ಶಿಕ್ಷಣ ವೆಚ್ಚವನ್ನು ಭರಿಸುವುದಾಗಿ ತಿಳಿಸಿ, ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ತಲಾ 501 ರೂ.ಬಹುಮಾನ ನೀಡುವುದಾಗಿ ಪ್ರಕಟಿಸಿದರು.

ಚಿಕ್ಕಾಲಗುಂಡಿಯ ಮಲ್ಲಿಕಾರ್ಜುನ ಮಠದ ಶಿವಶರಣಾನಂದ ಸ್ವಾಮೀಜಿ, ಶಿರಕೋಳ ಹಿರೇಮಠದ ಗುರುಸಿದ್ದೇಶ್ವರ ಸ್ವಾಮೀಜಿ, ಪ್ರಭಾರಿ ಮುಖ್ಯ ಶಿಕ್ಷಕಿ ಆರ್.ಎಂ.ಕಿಲ್ಲೇದಾರ, ರುಕ್ಮಿಣಿಭಾಯಿ, ಪುಷ್ಪಾ ಇದ್ದರು. ಸಹ ಶಿಕ್ಷಕರು, ವಿದ್ಯಾರ್ಥಿಗಳು ಅನಿಸಿಕೆ ಹಂಚಿಕೊಂಡರು.

ನಂತರ ವಿದ್ಯಾರ್ಥಿಗಳು, ಸಹ ಶಿಕ್ಷಕರು, ಶಿಕ್ಷಕ ಸಂಘಟನೆಗಳ ಸದಸ್ಯರು, ಚಿಕ್ಕಾಲಗುಂಡಿಯ ಹಿರಿಯರು, ಸ್ನೇಹಿತರು ಸನ್ಮಾನಿಸಿದರು.

# ಶ್ರೀ ಖಾಸ್ಗತೇಶ್ವರ ಮಠಕ್ಕೆ ಡಾ.ಪ್ರಭುಗೌಡ ಲಿಂಗದಳ್ಳಿ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಐತಿಹಾಸಿಕ ಶ್ರೀ ಖಾಸ್ಗತೇಶ್ವರ ಮಠಕ್ಕೆ ಅನುಗ್ರಹ ಕಣ್ಣಿನ ಆಸ್ಪತ್ರೆ ಮುಖ್ಯಸ್ಥ, ನಾಡಿನ ಖ್ಯಾತ ನೇತ್ರ ತಜ್ಞ ಡಾ.ಪ್ರಭುಗೌಡ ಲಿಂಗದಳ್ಳಿ (ಚಬನೂರ) ಭೇಟಿ ನೀಡಿದರು. ಜೂನ್ 30 ರಿಂದ ಆರಂಭವಾದ ಶ್ರೀ ಖಾಸ್ಗತೇಶ್ವರ ಜಾತ್ರಾಮಹೋತ್ಸವದ ಹಿನ್ನೆಲೆಯಲ್ಲಿ ಭಾನುವಾರ ಶ್ರೀಮಠಕ್ಕೆ ಭೇಟಿ ನೀಡಿದ ಅವರು ಲಿಂಗೈಕ್ಯ ಶ್ರೀ ಖಾಸ್ಗತೇಶ್ವರ ಹಾಗೂ ಶ್ರೀ ವಿರಕ್ತ ಶ್ರೀಗಳ ಕರ್ತೃ ಗದ್ದುಗೆಯ ದರ್ಶನವನ್ನು ಪಡೆದು ವಿಶೇಷ ಪೂಜೆ ಸಲ್ಲಿಸಿದರು. ನಂತರ ಅವರು ಶ್ರೀ ಮಠದ ಪರಮಪೂಜ್ಯ ಶ್ರೀ ಸಿದ್ದಲಿಂಗ ದೇವರುನ್ನು ಭೇಟಿ ಮಾಡಿ ಅವರ ಆಶೀರ್ವಾದ ಪಡೆದುಕೊಂಡು ಜಾತ್ರೋತ್ಸವದಂಗವಾಗಿ ಜುಲೈ 5ರಂದು ಪಟ್ಟಣದಲ್ಲಿ ಶ್ರೀ ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಆಸ್ಪತ್ರೆ ಹಾಗೂ ಅನುಗ್ರಹ ಕಣ್ಣಿನ ಆಸ್ಪತ್ರೆ ವಿಜಯಪುರ ಇವರ ಸಹಯೋಗದಲ್ಲಿ ನಡೆಯಲಿರುವ ಬೃಹತ್ ಉಚಿತ ಆರೋಗ್ಯ, ಕಣ್ಣಿನ ತಪಾಸಣೆ ಶಸ್ತ್ರಚಿಕಿತ್ಸೆ ಮತ್ತು ಸ್ವ-ಯಂ ಪ್ರೇರಿತ ರಕ್ತದಾನ ಶಿಬಿರದ ಕುರಿತು ಚರ್ಚೆ ನಡೆಸಿದರು. ಇದೇ ಸಂದರ್ಭದಲ್ಲಿ ಡಾ.ಪ್ರಭುಗೌಡ ಲಿಂಗದಳ್ಳಿ ಇವರನ್ನು ಶ್ರೀಮಠದ ವತಿಯಿಂದ ಪೂಜ್ಯ ಸಿದ್ದಲಿಂಗ ದೇವರು ಸನ್ಮಾನಿಸಿ ಆಶೀರ್ವಾದ ನೀಡಿದರು. ಡಾ.ಪ್ರಭುಗೌಡ ಲಿಂಗದಳ್ಳಿ ಅವರ ಸಮಾಜಮುಖಿ ಸೇವಾ ಕಾರ್ಯಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿದ ಸಿದ್ದಲಿಂಗ ಶ್ರೀಗಳು ಡಾ.ಪ್ರಭುಗೌಡರು ಕೇವಲ ವೈದ್ಯಕೀಯ ಕ್ಷೇತ್ರದಲ್ಲಿ ಮಾತ್ರವಲ್ಲ ಸಮಾಜದ ಹಲವಾರು ಕ್ಷೇತ್ರದಲ್ಲಿಯೂ ನಿಸ್ವಾರ್ಥ ಭಾವದಿಂದ ಸೇವೆ ಸಲ್ಲಿಸುತ್ತಿದ್ದಾರೆ ಶ್ರೀ ಮಠದ ಆಶೀರ್ವಾದ ಸದಾ ಅವರ ಮೇಲಿದೆ ಎಂದರು.ಈ ವೇಳೆ ಮಲ್ಲನಗೌಡ ಬಿರಾದಾರ, ಶಿವನಗೌಡ ದೇಸಾಯಿ, ಪ್ರವೀಣ ರೆಡ್ಡಿ, ಮಹಾಂತೇಶ ಎಚ್.ನಬಿ ಕೊಂಡಗೂಳಿ ಮತ್ತಿತರರು ಇದ್ದರು.

# ಮಾಲೀಕರು, ಗುತ್ತಿಗೆದಾರರು ಕಾರ್ಮಿಕರಿಗೆ ಅವಶ್ಯಕ ಮಾಹಿತಿ ನೀಡುವಂತೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 30-ಇಲ್ಲಿನ ಕಾರ್ಮಿಕ ಇಲಾಖೆಯಿಂದ ಜಿಲ್ಲೆಯ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಣಿ ಸದಸ್ಯತ್ವ ಪಡೆದಿರುವ ಫಲಾನುಭವಿಗಳಿಗೆ ಯೋಜನೆಯ ವಿವಿಧ ಸೌಲಭ್ಯಗಳು ಒದಗಿಸಲಾಗುತ್ತಿದ್ದು, ಮಾಲೀಕರು ಮತ್ತು ಗುತ್ತಿಗೆದಾರರು ಕಾರ್ಮಿಕರಿಗೆ ಅವಶ್ಯಕ ಮಾಹಿತಿಯನ್ನು ನೀಡುವಂತೆ ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಮತಿ ಆರತಿ ಅವರು ಕೋರಿದ್ದಾರೆ. ಕಟ್ಟಡ ನಿರ್ಮಾಣ ಸ್ಥಳದ ಮಾಲೀಕರು ಮತ್ತು ಗುತ್ತಿಗೆದಾರರು ನಿಮ್ಮ ಸಂಪೂರ್ಣ ಹೆಸರು ಮತ್ತು ವಿಳಾಸ ದೂರವಾಣಿ ಸಂಖ್ಯೆಯನ್ನು ಉದ್ಯೋಗ ಪ್ರಮಾಣ ಪತ್ರದಲ್ಲಿ ಭರ್ತಿ ಮಾಡುವುದು ಅವಶ್ಯಕವಾಗಿದೆ. ಜಿಲ್ಲೆಯಲ್ಲಿ ಕೆಲವು ಮಾಲೀಕರು ಹಾಗೂ ಗುತ್ತಿಗೆದಾರರು ಉದ್ಯೋಗ ಪ್ರಮಾಣ ಪತ್ರದಲ್ಲಿನ ಅವಶ್ಯಕ ಮಾಹಿತಿಯನ್ನು ನೀಡಲು ನಿರಕರಿಸುತ್ತಾರೆಂದು ಕಾರ್ಮಿಕರು ಮತ್ತು ಸಂಘಟನೆಗಳು ದೂರು ನೀಡಿರುತ್ತಾರೆ.

ಆದ್ದರಿಂದ ಕಟ್ಟದಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಮಾಲೀಕರು ತಮ್ಮ ಕಟ್ಟಡ ನಿರ್ಮಾಣದ ವಿಳಾಸ ನೀಡುವುದರ ಮೂಲಕ ಸಹಕರಿಸಬೇಕೆಂದು ಕಾರ್ಮಿಕ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ದಶಕಗಳ ಕನಸು ನನಸು: ತಗಡೂರು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.30:ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜು.1ರಂದು ಮಾಧ್ಯಮ ಅಕಾಡೆಮಿ, ವಾರ್ತಾ ಇಲಾಖೆ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿರುವ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಅಧಿಕೃತವಾಗಿ ಚಾಲನೆ ನೀಡಲಿದ್ದಾರೆ. ಆ ಮೂಲಕ ಮೂರು ದಶಕಗಳ ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ಕನಸು ನನಸಾಗಲಿದೆ.

ಗ್ರಾಮೀಣ ಪತ್ರಕರ್ತರಿಗೂ ಉಚಿತವಾಗಿ ಬಸ್ ಪಾಸ್ ನೀಡಬೇಕು ಎನ್ನುವ ನಿಟ್ಟಿನಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಸತತ ನಡೆಸಿದ ಹೋರಾಟದ ಲವಾಗಿ ಈ ಯೋಜನೆ ಜಾರಿಗೆ ಬರುತ್ತಿದೆ.

ದಾವಣಗೆರೆಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ್ದ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಬಸ್ ಪಾಸ್ ನೀಡಬೇಕೆಂದು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಮುಖ್ಯಮಂತ್ರಿಗಳ ಮುಂದೆ ಹಕ್ಕೊತ್ತಾಯ ಮಂಡಿಸಿದ್ದರು. ವೇದಿಕೆಯಲ್ಲಿಯೇ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು ಸಿಎಂ ಮನವೊಲಿಕೆ ಮಾಡಿದರು. ಕೂಡಲೇ ಅದ-ಕ್ಕೆ ಸ್ಪಂಧಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಬಾರಿ ಉಚಿತ ಬಸ್ ಪಾಸ್ ಕೊಟ್ಟೇ ಕೊಡುತ್ತೇವೆ ಎಂದು ಭರವಸೆ ನೀಡಿದ್ದಲ್ಲದೆ, ಬಜೆಟ್‌ನಲ್ಲಿಯೂ ?ಷಣೆ ಮಾಡಿದ್ದು, ಮರೆಯಲಾಗದ ಕ್ಷಣವಾಗಿತ್ತು.

ಬಸ್ ಪಾಸ್ ಯೋಜನೆ ಜಾರಿಗೆ ನೀಡಲು ಮೊದಲ ಬಾರಿಗೆ ಮನಸ್ಸು ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಮಸ್ತ ಪತ್ರಕರ್ತರ ಪರವಾಗಿ ಧನ್ಯವಾದಗಳು. ಈ ಯೋಜನೆ ಜಾರಿ ಹಿಂದೆ ತೆರೆ ಮರೆಯ ಶಕ್ತಿಯಾಗಿ ಸಂಘಟನೆ ಮತ್ತು ಸರ್ಕಾರದ ನಡುವೆ ಸೇತುವೆಯಾಗಿ ಕೆಲಸ ಮಾಡಿದ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ವಾರ್ತಾ ಇಲಾಖೆ ಆಯುಕ್ತ ಹೇಮಂತ ನಿಂಬಾಳ್ಕರ್, ವಾರ್ತಾ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

# ಸಾಧನೆ ಮಾಡಿದರೆ ಮಾತ್ರ ಜಗತ್ತಲ್ಲಿ ಸನ್ಮಾನ: ಹೆಡಗಾಪುರ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 30 : ಭಾನುವಾರ ಸಂಜೆ ನಗರದ ಲಾಡಗೇರಿ ಹಿರೇಮಠ ಸಂಸ್ಥಾನದಲ್ಲಿ ಜಿಲ್ಲಾ ಜಂಗಮ ಸಮಾಜ ವತಿಯಿಂದ ಇತ್ತಿಚೀಗೆ ಝಿ ಕನ್ನಡ ಟಿ.ವಿ ವಾಹಿನಿಯಲ್ಲಿ ಸರಿಗಮಪ-21ರ ಸಿಸನ್‌ನಲ್ಲಿ ವಿಜೇತರಾದ ಕು.ಶಿವಾನಿ ಶಿವದಾಸ ಸ್ವಾಮಿಯವರ ಅಭಿನಂದನಾ ಸಮಾರಂಭ ಅರ್ಥಪೂರ್ಣವಾಗಿ ಜರುಗಿತು.

ಹೆಡಗಾಪುರ ಶ್ರೀ ಶಿವಲಿಂಗೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಷ.ಬ್ರ ದಾರೂಕಲಿಂಗ ಶಿವಾಚಾರ್ಯರು ಆಶೀರ್ವಚನ ನೀಡಿದರು.

ಮನುಷ್ಯನಾಗಿ ಹುಟ್ಟಿದ ಬಳಿಕ ಏನಾದರೊಂದು ಸಾಧನೆ ಮಾಡಬೇಕು. ಅದರ ಮುಖಾಂತರ ನಮ್ಮ ಹೆಜ್ಜೆ ಗುರುತು ಬಿಡಬೇಕು. ಸಾಧನೆ ಮಾಡಿದ ಪ್ರತಿಭೆಗಳಿಗೆ ಜಗತ್ತೆಲ್ಲ ಸನ್ಮಾನಿಸುತ್ತದೆ. ಸಾಧನೆ ಮಾಡಿ ಸತ್ತರೆ ಸ್ವರ್ಗದಲ್ಲೂ ಸನ್ಮಾನ ಸಿಗುತ್ತದೆ. ಸಾಧನೆ ಮಾಡದೇ ಸತ್ತರೆ ಅದು ಮನುಷ್ಯನಾಗಿ ಹುಟ್ಟಿ ಅವಮಾನ ಮಾಡಿಕೊಂಡಂತೆ. ಹಾಗಾಗಿ ನಮ್ಮ ಬದುಕು ಸದಾ ಬೆಳಗಬೇಕಾದರೆ ಸಾಧನೆ ಬಹಳ ಮುಖ್ಯ. ಈ ನಿಟ್ಟಿನಲ್ಲಿ ಬೀದರ್ ಜಿಲ್ಲೆಯ ಪ್ರತಿಭೆ ಕು.ಶಿವಾನಿ ನಾಡಿನ ಹಾಗೂ ದೇಶದ ಉದ್ದಗಲಕ್ಕೂ ತನ್ನ ಸಂಗೀತದ ಪ್ರತಿಭೆ ಪ್ರಸ್ತುತಪಡಿಸಿ ಜನ ಮನ ಗೆದ್ದಿದಲ್ಲದೆ ಜಗವೆಲ್ಲ ಗೆದ್ದಿದ್ದಾಳೆ. ಈ ಪ್ರತಿಭೆಗೆ ಗುರುತಿಸಿ ಜಿಲ್ಲಾ ಜಂಗಮ ಸಮಾಜ ಸನ್ಮಾನಿಸಿ ಅಭಿನಂದಿಸುವ ಮೂಖೇನ ಅತ್ಯಾದ್ಭುತ ಕಾರ್ಯ ಮಾಡಿದೆ ಎಂದು ಬಣ್ಣಿಸಿದರು.

ಸಾನಿಧ್ಯ ವಹಿಸಿದ ಹಲಬರ್ಗಾ ಶ್ರೀ ರಾಚೋಟೇಶ್ವರ ವಿರಕ್ತಮಠದ ಪೂಜ್ಯ ಷ.ಬ್ರ ಶ್ರೀ ಹಾವಗಿಲಿಂಗೇಶ್ವರ ಶಿವಾಚಾರ್ಯರು ಮಾತನಾಡಿ, ಸಂಗೀತದಲ್ಲಿ ಮುಳುಗಿ ತೇಲುವುದು ಅಷ್ಟು ಸುಲಭದ ಮಾತಲ್ಲ. ಅದ-ಕ್ಕೆ ಸಾಧನೆ ಜೊತೆಗೆ ಬಲ್ಲವರ ಮಾರ್ಗದರ್ಶನ ಬೇಕು. ಇದೆಲ್ಲದಕ್ಕೂ ಮಿಗಿಲಾಗಿ ಪೂರ್ವಜರು, ಸದ್ಯ ಪಾಲಕರು, ಸುತ್ತಲಿನ ಸಮಾಜ ಪ್ರೋತ್ಸಾಹಿಸಿ ಮೇಲಕ್ಕೆತ್ತಿದರೆ ಪ್ರತಿಭೆ ಸದಾ ಅರಳುತ್ತದೆ ಎಂಬುದಕ್ಕೆ ಕು.ಶಿವಾನಿ ಸ್ವಾಮಿ ನೇರ ಸಾಕ್ಷಿ. ಸಮಾಜದ ಈ ಪ್ರತಿಭೆಗೆ ಮಠಾಧೀಶರಾದ ನಾವುಗಳು, ಇಡೀ ಸಮಾಜ ಇನ್ನಷ್ಟು ಪ್ರೋತ್ಸಾಹಿಸಬೇಕಿದೆ ಎಂದರು.

ಅಧ್ಯಕ್ಷತೆ ವಹಿಸಿದ ಗಾನಯೋಗಿ ಪಂಚಾಕ್ಷರ ಗವಾಯಿ ಸೇವಾ ಸಂಘದ ಗೌರವಾಧ್ಯಕ್ಷ ಪ್ರೊ. ಎಸ್.ವಿ ಕಲ್ಮಠ ಮಾತನಾಡಿ, ಸಮಾಜವನ್ನು ಸಂಘಟಿಸುವಲ್ಲಿ ಮಠಗಳ ಪಾತ್ರ ಬಹಳಷ್ಟಿದೆ. ಇದರಿಂದ ಸಮಾಜದಲ್ಲಿರುವ ಕು.ಶಿವಾನಿಯಂತಹ ಪ್ರತಿಭೆಗಳು ಮುಂದೆ ಬರಲು ಸಾಧ್ಯವಾಗಲಿದೆ. ಧಾರ್ಮಿಕ ಚಟುವಟಿಕೆಗಳಲ್ಲದೇ ಧಾರ್ಮಿಕೇತರ ಕಾರ್ಯಗಳಾದ ಸಂಗೀತ, ಸಾಹಿತ್ಯ, ಕಲೆ, ಕ್ರೀಡೆಗಳಿಗೆ ಪ್ರೋತ್ಸಾಹಿಸಲು ಮಠಗಳು ಮುಂದೆ ಬರಬೇಕಿದೆ. ಲಾಡಗೇರಿ ಹಿರೇಮಠವು ಜಿಲ್ಲಾ ಜಂಗಮ ಸಮಾಜಕ್ಕೆ ಪ್ರೋತ್ಸಾಹಿಸಿದಕ್ಕೆ ಕು.ಶಿವಾನಿಯ ಅಭಿನಂದನೆ ಅರ್ಥಪೂರ್ಣವಾಗಲಿಕ್ಕೆ ಸಾಧ್ಯವಾಯಿತೆಂದರು.

ತನ್ನ ಸುಮಧುರ ಕಂಠದಿಂದ ಕು.ಶಿವಾನಿ ಹಾಡುಗಳು ಪ್ರಸ್ತುತಪಡಿಸಿ ನೆರೆದವರನ್ನೆಲ್ಲ ಮಂತ್ರಮುಗ್ಧವಾಗಿಸಿದಳು. ಸಂಗೀತ ವಿದ್ವಾಂಸ ಡಾ.ರಾಜೇಂದ್ರಸಿಂಗ ಪವಾರ ಮಾತನಾಡಿದರು. ಲಾಡಗೇರಿ ಹಿರೇಮಠ ಸಂಸ್ಥಾನದ ಪೂಜ್ಯ ಶ್ರೀ ಷ.ಬ್ರ ಗಂಗಾಧರ ಶಿವಾಚಾರ್ಯರು, ಚಾಂಬೋಳ ಶ್ರೀ ರುದ್ರಮುನೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಷ.ಬ್ರ ಅಭಿನವ ರುದ್ರಮುನಿ ಶಿವಾಚಾರ್ಯರು, ಏಕತಾ ಫೌಂಡೇಷನ್ ಅಧ್ಯಕ್ಷ ರವಿಂದ್ರ ಸ್ವಾಮಿ, ಶ್ರೀ ರೇಣುಕ ಮಹೇಶ್ವರ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತದ ಅಧ್ಯಕ್ಷ ಮಹೇಶ್ವರ ಸ್ವಾಮಿ, ಭಾರತ ಮಾತಾ ಸೇವಾ ಸಮಿತಿಯ ಗಂಗಧರ ಶಾಸ್ತ್ರಿಗಳು, ಲಾಡಗೇರಿ ಶ್ರೀಮಠದ ಭಕ್ತರಾದ ಮಲ್ಲಪ್ಪ ಹುಲೆಪ್ಪನೋರ್, ಚಂದ್ರಕಾಂತ ಅಷ್ಟುರ್, ಶಿವಾನಿಯ ತಂದೆ ತಾಯಿಗಳಾದ ಕವಿತಾ, ಶಿವದಾಸ ಸ್ವಾಮಿ, ಕಲಾವಿದರಾದ ಆಶ್ವಿನಿ, ರಾಜಕುಮಾರ ಸ್ವಾಮಿ ಬಂಪಳ್ಳಿ ವೇದಿಕೆಯಲ್ಲಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ಜಂಗಮ ಸಮಾಜ ವತಿಯಿಂದ ಕು.ಶಿವಾನಿ ಹಾಗೂ ಅವರ ತಂದೆ ತಾಯಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕು.ಸುಧಾರಾಣಿಯ ಭರತನಾಟ್ಯದೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಸಮಾಜದ ಮುಖಂಡರು ಪತ್ರಕರ್ತ ಶಿವಕುಮಾರ

ಸ್ವಾಮಿ ಸ್ವಾಗತಿಸಿ, ವಿದ್ಯಾವತಿ ಹಿರೇಮಠ ಕಾರ್ಯಕ್ರಮ ನಿರೂಪಿಸಿ, ಶ್ರೀಕಾಂತ ಸ್ವಾಮಿ ಸೋಲಪುರ ವಂದಿಸಿದರು.

ಸಮಾಜದ ಗಣ್ಯರಾದ ಕುಮಾರ ಸ್ವಾಮಿ ಹಿರೇಮಠ, ಕಾರ್ತಿಕ ಮಠಪತಿ, ರೇವಣಸಿದ್ದಯ್ಯ ಸ್ವಾಮಿ, ಸಂಗಮೇಶ ಸ್ವಾಮಿ, ಸೋಮನಾಥ ಸ್ವಾಮಿ, ಶಿವಾನಂದ ಸ್ವಾಮಿ, ಸುಭಾಷ ಅಷ್ಟುರ್ ಸೇರಿದಂತೆ ನೂರಾರು ಜಂಗಮ ಸಮಾಜ ಬಾಂಧವರು ಮತ್ತು ಲಾಡಗೇರಿ ಮಠದ ಸದ್ಭಕ್ತರು ಕಾರ್ಯಕ್ರಮದಲ್ಲಿದ್ದರು.

# ಸಮರ್ಪಕ ಮಾಂಸ ತ್ಯಾಜ್ಯ ವಿಲೇವಾರಿಗೆ ಆಗ್ರಹಿಸಿ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜೂ.30: ನಗರದಲ್ಲಿ ಅಸಮರ್ಪಕ ಮಾಂಸ ತ್ಯಾಜ್ಯ ವಿಲೇವಾರಿ ಮಾಡುತ್ತಿರುವುದನ್ನು ಖಂಡಿಸಿ ಸೋಮವಾರ ದಲಿತ ಸೇನೆ ಕಾರ್ಯಕರ್ತರು ಮಹಾನಗರ ಪಾಲಿಕೆಗೆ ಮುತ್ತಿಗೆ ಹಾಕಿ ಪ್ರತಿಭಟಿಸಿದರು. ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ, ನಗರದಲ್ಲಿನ ಚಿಕನ್, ಮಟನ್ ಅಂಗಡಿ ತ್ಯಾಜ್ಯವನ್ನು ಎಂಎಸ್‌ಡಬ್ಲೂಎಂ ಎಂಟರ್‌ಪ್ರೈಸಸ್ ಸಂಗ್ರಹಿಸುವ ಗುತ್ತಿಗೆಯನ್ನು ಮಹಾನಗರ ಪಾಲಿಕೆಯಿಂದ ಪಡೆದುಕೊಂಡು ಕಾನೂನು ಪ್ರಕಾರ ಸಂಗ್ರಹಿಸುತ್ತಿದೆ. ಆದಾಗ್ಯೂ, ಅನಧಿಕೃತವಾಗಿ ಮಾಂಸ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯುತ್ತಿರುವುದು ಖಂಡನಾರ್ಹ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಚಿಕನ್, ಮಟನ್ ತ್ಯಾಜ್ಯ ವಿಲೇವಾರಿಗೆ ಎಂಎಸ್‌ಡಬ್ಲೂಎಂ ಎಂಟರ್‌ಪ್ರೈಸಸ್‌ನ ಮಹ್ಮದ್ ಅಶ್ರಫ್ ಅವರಿಗೆ ಪಾಲಿಕೆಯಿಂದ 2023ರಲ್ಲಿ ಟೆಂಡರ್ ಆಗಿದೆ. ಅದರಂತೆ ಅವರು 6 ವಾಹನಗಳ ಮೂಲಕ ಚಿಕನ್, ಮಟನ್ ತ್ಯಾಜ್ಯ ವಿಲೇವಾರಿ ಮಾಡುತ್ತಿದ್ದು, ಈ ವಾಹನಗಳನ್ನು ಕೆಲವರು ತಡೆದು ಉಸ್ತುವಾರಿ ಸಚಿವರಿಗೆ ಮನವಿ ಸಲ್ಲಿಸಿದರೂ ಸ್ಪಂದಿಸುತ್ತಿಲ್ಲ ಎಂದು ಅವರು ದೂರಿದರು. ಕಾನೂನು ಪ್ರಕಾರ ಚಿಕನ್, ಮಟನ್ ತ್ಯಾಜ್ಯ ಸಂಗ್ರಹಿಸಿ, ಕ್ಯಾಟಲ್ ಫೀಡಿಂಗ್ ಕಂಪನಿ ಮತ್ತು ಫಿಶ್ ಫಾರ್ಮ್‌ಗಳಿಗೆ ವಿಲೇವಾರಿ ಮಾಡುತ್ತಿದ್ದೇನೆ. ಇದನ್ನು ಸಹಿಸದ ಕೆಲವರು ಅನಧಿಕೃತವಾಗಿ ವಾಹನಗಳ ಮೂಲಕ ತ್ಯಾಜ್ಯ ಸಂಗ್ರಹ ಮಾಡುತ್ತಿದ್ದಾರೆ. ಇದರಲ್ಲಿ ಅಧಿಕಾರಿಗಳು ಶಾಮೀಲಾಗಿದ್ದಾರೆ. ಇದರಿಂದ ವ್ಯಾಪಾರ ಸರಿಯಾಗಿ ನಡೆಯುತ್ತಿಲ್ಲ. ವಾಹನಗಳ ಇಎಂಐ ಭರಿಸಲು ಆಗುತ್ತಿಲ್ಲ ಎಂದು ಅವರು ಕಳವಳ ವ್ಯಕ್ತಪಡಿಸಿದರು. ಅನಧಿಕೃತ ವ್ಯವಹಾರದ ಬಗ್ಗೆ ಹೈಕೋರ್ಟ್‌ನಲ್ಲಿ ಪಾಲಿಕೆ ವಿರುದ್ಧ 2023ರಲ್ಲಿ ರಿಟ್ ಅರ್ಜಿ ಹಾಕಲಾಗಿತ್ತು. ಅನಧಿಕೃತ ಚಿಕನ್, ಮಟನ್ ತ್ಯಾಜ್ಯ ವಿಲೇವಾರಿ ತಡೆಗಟ್ಟುವಂತೆ ಆದೇಶ ಬಂದಿದೆ. ನ್ಯಾಯಾಲಯದ ಆದೇಶಕ್ಕೂ ಅಧಿಕಾರಿಗಳು ನಿರ್ಲಕ್ಷಿಸಿದ್ದಾರೆ ಎಂದು ಆರೋಪಿಸಿದ ಅವರು, ಅನಧಿಕೃತ ಕೆಲಸಕ್ಕೆ ಮಹಾನಗರ ಪಾಲಿಕೆಯ ನೈರ್ಮಲ್ಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಹೊಣೆಯಾಗಿದ್ದಾರೆ. ಕಾರಣ ಅಕ್ರಮ ಮಟನ್ ಮತ್ತು ಚಿಕನ್ ತ್ಯಾಜ್ಯ ವಿಲೇವಾರಿ ಮಾಡುವವರಿಗೆ ಸೀಜ್ ಮಾಡಿ, ವಾಹನಗಳನ್ನು ಯಾವುದೇ ಕಾರಣಕ್ಕೂ ಬಿಡುಗಡೆ ಮಾಡಬಾರದು ಹಾಗೂ ವಾಹನ ಮಾಲಿಕರ ವಿರುದ್ಧ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು. ದಲಿತ ಸೇನೆಯ ಜಿಲ್ಲಾಧ್ಯಕ್ಷ ಮಂಜುನಾಥ ಎಸ್. ಭಂಡಾರಿ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಜಿಲ್ಲಾ ಯುವ ಘಟಕದ ಅಧ್ಯಕ್ಷ ಮೊಹ್ಮದ್ ಆಶ್ರಫ್ ತಂದೆ ಮೊಹ್ಮದ್ ಅಬ್ದುಲ್ ಸತ್ತಾರ್, ಚನ್ನಬಸವ ಮುದ್ದಡಗಾ, ಸಂತೋಷ ಪಾಳಾ, ಸಲೀಮ್ ಗಬ್ಬೂರಿಯಾ, ಅರವಿಂದ ಕಮಲಾಪುರ, ಶ್ರೀಕಾಂತ-ರೆಡ್ಡಿ, ಗುರು ಮಾಳಗೆ, ಅಮೀರ್ ಅವಟಿ ಸರ್ಕಾರ ಮುಂತಾದವರು ಪಾಲ್ಗೊಂಡಿದ್ದರು.

# ಬಿಗ್ ಬಾಸ್' 12ನೇ ಸೀಸನ್‌ಗೂ ಕಿಚ್ಚನ ನಿರೂಪಣೆ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.30:ಕನ್ನಡದ ಹೆಸರಾಂತ ರಿಯಾಲಿಟಿ ಶೋ ಬಿಗ್‌ಬಾಸ್ ಕನ್ನಡ 11 ಸೀಸನ್‌ಗಳನ್ನ ಯಶಸ್ವಿಯಾಗಿ ಪೂರೈಸಿದೆ. ಇದೀಗ ಸೀಸನ್ 12ಕ್ಕೆ ಕೆಲವೇ ತಿಂಗಳು ಬಾಕಿ ಇರೋವಾಗಲೇ ಬಿಗ್‌ಬಾಸ್ ತಂಡದ ಕಡೆಯಿಂದ ಹಾಗೂ ಕಿಚ್ಚ ಸುದೀಪ್ ಅವರಿಂದ ಬಿಗ್ ಅಪ್‌ಡೇಟ್ ಸಿಕ್ಕಿದೆ. ಕಿಚ್ಚ ಸುದೀಪ್ ಅವರೇ 12ನೇ ಸೀಸನ್‌ಗೂ ನಿರೂಪಣೆ ಮಾಡುವುದಾಗಿ ಸ್ಪಷ್ಟನೆ ಸಿಕ್ಕಿದೆ. ಬಿಗ್‌ಬಾಸ್ ಸಂಯೋಜಕರು ಹಾಗೂ ಕಲರ್ಸ್ ತಂಡ ಸುದ್ದಿಗೋಷ್ಠಿಯಲ್ಲಿ ಅಧಿಕೃತವಾಗಿ ಈ ನಿರ್ಧಾರವನ್ನು ಪ್ರಕಟಿಸಿದೆ. 11ನೇ ಸೀಸನ್ ಸಂದರ್ಭದಲ್ಲಿ ನಿರೂಪಕ ಕಿಚ್ಚ ಸುದೀಪ್ ವಿದಾಯ ಹೇಳಿದ್ದರು. ಇದಾದ ಬಳಿಕ ಸಾಕಷ್ಟು ಚರ್ಚೆಗಳು ಶುರುವಾಗಿದ್ದು, ಈ ಬಗ್ಗೆ ಕಿಚ್ಚ ಸುದೀಪ್ ಕೂಡಾ ಕಾದು ನೋಡಿ ಅನ್ನೋ ಅಭಿಪ್ರಾಯ ಹಂಚಿಕೊಂಡಿದ್ರು. ಇದೀಗ ಮತ್ತೆ 12ನೇ ಸೀಸನ್ ನಡೆಸಿಕೊಡುವ ಬಗ್ಗೆ ಗುಡ್‌ನ್ಯೂಸ್ ಕೊಟ್ಟಿದ್ದಾರೆ ಕಿಚ್ಚ.

ಕಿಚ್ಚ ಸುದೀಪ್

ಇಲ್ಲದೇ ಬಿಗ್‌ಬಾಸ್ ನಿರೂಪಣೆಯನ್ನ ಊಹೆ ಮಾಡಿಕೊಳ್ಳುವುದಕ್ಕೂ ಆಗುವುದಿಲ್ಲ ಎನ್ನುವ ಅಭಿಪ್ರಾಯಗಳು ವ್ಯಕ್ತವಾಗಿದ್ದವು. ಹೀಗಾಗಿ

ಕಿಚ್ಚ ಸುದೀಪ್ ಈ ಬಾರಿಯ ಬಿಗ್‌ಬಾಸ್ ಕಾರ್ಯಕ್ರಮವನ್ನ ಮುಂದುವರಿಸಿದ್ದಾರೆ.

# ಆಕಸ್ಮಿಕವಾಗಿ ಶಾರ್ಟ್ ಸರ್ಕ್ಯೂಟ್ ನಿಂದ ಅಗ್ನಿ ಅವಘಡ: ಸುಟ್ಟ ಕರ್ಕಲಾದ ಅಂಗಡಿ



ಅಫಜಲಪೂರ:ಜೂ.30:ದೇವಣಗಾಂವ ಸಮೀಪದ ಕುಮಸಗಿ ಗ್ರಾಮದಲ್ಲಿ ಬೆಳಗಿನ ಜಾವ ಆಕಸ್ಮಿಕವಾಗಿ ಶಾರ್ಟ್ ಸರ್ಕ್ಯೂಟ್ ನಿಂದ ಅಗ್ನಿ ಅವಘಡ ಸಂಭವಿಸಿದ ಪರಿಣಾಮ ಬಟ್ಟೆ ಹಾಗೂ ಜನರಲ್ ಸ್ಟೋರ್ ರೈತರ ಉಪಕರಣಗಳ ಅಂಗಡಿಗೆ ಬೆಂಕಿ ಬಿದ್ದು ಸುಟ್ಟ ಘಟನೆ ನಡೆದಿದೆ.

ಆಲಮೇಲ ತಾಲೂಕಿನ ಕುಮಸಗಿ ಗ್ರಾಮದ ಅಂಬಾರಾಯ ಶಾಂತಪ್ಪ ಯರಗಲ್ ಎಂಬುವವರಿಗೆ ಸೇರಿದ ಅಂಗಡಿಯಲ್ಲಿ ಅಗ್ನಿ ಅವಘಡ ನಡೆದಿದೆ. 12 ರಿಂದ 15 ಲಕ್ಷ ರೂಪಾಯಿ ಮೌಲ್ಯದ ಬಟ್ಟೆ ಹಾಗೂ ರೈತರಿಗೆ ಉಪಯೋಗವಾಗುವ ಉಪಕರಣ ಪೆಟ್ರೋಲ್ ಪಂಪ್ ಚಿಕ್ಕ ಮಕ್ಕಳ ಸೈಕಲ್ ಟಾರ್ಚ್ ಬ್ಯಾಟರಿಗಳು ವಿವಿಧ ವಸ್ತುಗಳು ಬೆಂಕಿಗಾಹುತಿಯಾಗಿವೆ.

ಆಲಮೇಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಜಾರಿಯಲ್ಲಿದೆ.

# ಮಳೆ ಇಲ್ಲದೆ ಬೀದರ್ ರೈತ ಕಂಗಾಲು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 30: ರಾಜ್ಯದ ಕರಾವಳಿ, ಮಲೆನಾಡು ಸೇರಿದಂತೆ ಹಲವು ಪ್ರದೇಶಗಳಲ್ಲಿ ವ್ಯಾಪಕ ಮಳೆಯಾಗುತ್ತಿದೆ. ಹಲವೆಡೆ ಜನ - ಜೀವನ ಅಸ್ತವ್ಯಸ್ಥಗೊಂಡಿದೆ. ಆದರೆ, ಬೀದರ್ ಜಿಲ್ಲೆಯಲ್ಲಿ ಮಾತ್ರ ಮಳೆಯಾಗುತ್ತಿಲ್ಲ. ಇದರಿಂದಾಗಿ ರೈತರು ಹೈರಾಣಾಗಿದ್ದಾರೆ.

ಮಳೆ ಇಲ್ಲದೇ ಅನ್ನದಾತ ಚಿಂತಾಕ್ರಾಂತನಾಗಿದ್ದಾನೆ.

ಮಳೆ ಬಾರದ ಹಿನ್ನೆಲೆಯಲ್ಲಿ ರೈತರು ಹೊಲದಲ್ಲಿ ಬೆಳೆದ ಸೋಯಾ, ತೊಗರಿ ಸೇರಿದಂತೆ ಹಲವು ಬೆಳೆಗಳನ್ನು ಹರಗಿ ನಾಶ ಮಾಡಿದ್ದಾರೆ.

ಭಾಲ್ಕಿ ತಾಲೂಕಿನ ನೀಲಮನಳ್ಳಿ ಗ್ರಾಮದ ಸಂತೋಷ್ ಶಡೋಳೆ ಎಂಬ ರೈತರು ಕಳೆದ 15 ದಿನಗಳ ಹಿಂದೆ ಎರಡು ಎಕರೆ ಪ್ರದೇಶದಲ್ಲಿ ಸೋಯಾ, ತೊಗರಿ ಬೆಳೆ ಬಿತ್ತನೆ ಮಾಡಿದ್ದರು. ಆದರೆ, ಸಕಾಲಕ್ಕೆ ಮಳೆಯಾಗದ ಹಿನ್ನೆಲೆಯಲ್ಲಿ ತೇವಾಂಶ ಕಡಿಮೆಯಾಗಿ ಬೆಳೆ ಒಣಗುತ್ತಿದೆ. ಈ ಹಿನ್ನೆಲೆಯಲ್ಲಿ ಬಿತ್ತಿದ ಬೆಳೆಯನ್ನು ನಾಶ ಮಾಡಿದ್ದಾರೆ. ಪ್ರತಿ ಎಕ-ರೆಗೆ 10 ಸಾವಿರಕ್ಕೂ ಅಧಿಕ ಹಣ ಖರ್ಚು ಮಾಡಿ ಈಗ ರೈತ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸರ್ಕಾರವು ಪರಿಹಾರ ನೀಡಬೇಕೆಂದು ಆಗ್ರಹಿಸುತ್ತಿದ್ದಾರೆ.

# ಪ್ರಕೃತಿ ವಿಕೋಪದಿಂದ ಹಾನಿ ಸಂಭವಿಸದಂತೆ ಕ್ರಮಕ್ಕೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜೂ. 30: ಪ್ರಕೃತಿ ವಿಕೋಪದಿಂದ ಯಾವುದೇ ರೀತಿ ಹಾನಿ ಸಂಭವಿಸದಂತೆ ಅಗತ್ಯ ಕ್ರಮವಹಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳಬೇಕೆಂದು ಕೆಪಿಟಿಸಿಎಲ್. ವ್ಯವಸ್ಥಾಪಕ ನಿರ್ದೇಶಕ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಪಂಕಜ್ ಕುಮಾರ ಪಾಂಡೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕೆಸ್ವಾನ್ ವಿಡಿಯೋ ಕಾನ್ಫರೆನ್ಸ್ ಮೂಲಕ ಕಲಬುರಗಿ ಜಿಲ್ಲೆಯ 2025-26ನೇ ಸಾಲಿನ ಮುಂಗಾರು ಮಳೆ ಅವಧಿ ಪೂರ್ವ ಸಿದ್ಧತೆ ಹಾಗೂ ಮುಂಜಾಗೃತಾ ಕ್ರಮಕೈಗೊಳ್ಳುವ ಕುರಿತು ಜಿಲ್ಲಾಮಟ್ಟದ ಹಾಗೂ ತಾಲೂಕನ ಅಧಿಕಾರಿಗಳು, ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಳೆಗಾಲ ಇರುವುದರಿಂದ ಜಿಲ್ಲೆಯಲ್ಲಿ ಪ್ರಕೃತಿ ವಿಕೋಪಗಳು, ಪ್ರವಾಹ ಪೀಡಿತ ಪ್ರದೇಶಗಳು ಮತ್ತು ಬೆಳೆಹಾನಿ, ಪ್ರಾಣಿಹಾನಿ ಮತ್ತು ಜಿಲ್ಲೆಯಲ್ಲಿ ಕೃಷಿಯ ಉತ್ಪಾದನೆಗೆ ಬೇಕಾದ ರಸಗೊಬ್ಬರ ಪೂರೈಕೆ ಮಾಹಿತಿಯನ್ನು ಅಧಿಕಾರಿಗಳಿಂದ ಪಡೆದು ಕೊಂಡರು. ಕೃಷಿ ಇಲಾಖೆ ಜಂಟಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ, ಕಲಬುರಗಿ ಜಿಲ್ಲೆಯ 2025 ರ ಜನವರಿ 1 ರಿಂದ ಜೂನ್ 29 ರವರೆಗೆ ವಾಡಿಕೆಯಂತೆ 168.5 ಮೀಲಿ ಮೀಟರ ಮಳೆಯಾಗಬೇಕಾಗಿತ್ತು. 280.4 ಮಿ.ಮೀಟರ್ ಶೇ. 72 ಪ್ರತಿಶತ ಹೆಚ್ಚು ಮಳೆಯಾಗಿದೆ ಎಂದು ಹೇಳಿದರು.

ಜೂನ್. 29 ರಿಂದ ಇಲ್ಲಿಯವರೆಗೆ ವಾಡಿಕೆ ಮಳೆಯ 98.8 ಆಗಬೇಕಾಗಿತ್ತು. ಅದರಲ್ಲಿ 65.1 ಮಳೆಯಾಗಿರುತ್ತದೆ. ಶೇ.-34 ಪ್ರತಿಶತ ಕಡಿಮೆಯಾಗಿರುತ್ತದೆ. ಎಂದು ಸಭೆಯ ಗಮನಕ್ಕೆ ತಂದರು.

ಮುಂಗಾರು, 2025ರ ಬಿತ್ತನೆ ಬೀಜಗಳ ಸರಬರಾಜು ಹಾಗೂ ಬೀಜಗಳ ವಿತರಣೆ ಸಂಪೂರ್ಣ ಮಾಹಿತಿಯನ್ನು ಸಭೆಯ ಗಮನಕ್ಕೆ ತಂದರು.

ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಸಂತೋಷ ಇನಾಂದಾರ ಮಾತನಾಡಿ, ಕೃಷಿ ಸಂಜೀವಿನಿ ಅಡ್ಡಿಯಲ್ಲಿ ಕೃಷಿ ಇಲಾಖೆ ವಾಹನಗಳಿಂದ ಎಲ್ಲ ಪ್ರದೇಶಗಳಿಗೆ ಹೋಗಿ ರೈತರಿಗೆ ಕೃಷಿ ಚಟುವಟಿಕೆಗಳು ಬೀಜ ಗೊಬ್ಬರಗಳು ಕೃಷಿ ಬೇಕಾದ ಅಗತ್ಯ ಉಪಕರಣಗಳ ಕುರಿತು ರೈತರಿಗೆ ಅರಿವು ಮೂಡಿಸಲಾಯಿತು. ಒಂದು ಸಾವಿರ ಕ್ವಿಂಟಲ್ ಸೋಯಿಬಿನ್ ಬೀಜಗಳ ಸಂಗ್ರಹವಿದೆ ಜಿಲ್ಲೆಯಲ್ಲಿ ಶೇ. 45 ಪ್ರತಿಶತ ಬಿತ್ತನೆಯಾಗಿದೆ ಎಂದು ಹೇಳಿದರು.

ಕಲಬುರಗಿ ಜಿಲ್ಲೆಯಲ್ಲಿ ಅಮರ್ಜಾ ಜಲಾಶಯದಲ್ಲಿ ನೀರಿನ ಮಟ್ಟ 461.50 ಮೀಟರನಷ್ಟು ಸಂಗ್ರಹ ಸಾಮಾರ್ಥ್ಯ ಇದ್ದು. 458.57 ನೀರಿನ ಸಂಗ್ರಹಣೆಯಾಗಿದೆ ಬೆಣ್ಣೆ ತೋರಾ ಜಲಾಶಯದಲ್ಲಿ 438.89 ಸಂಗ್ರಹ ಸಾಮಾರ್ಥ್ಯ ವಿದ್ದು, ಪ್ರಸುತ್ತ 437.80 ನೀರಿನ ಸಂಗ್ರಹಣ ಸಾಮಾರ್ಥ್ಯ ವಿದೆ. ಭೀಮಾ ಜಲಾಶಯದಲ್ಲಿ 406.40 ರಷ್ಟು ನೀರಿನ ಸಂಗ್ರಹ ಸಾಮಾರ್ಥ್ಯ ವಿದೆ ಪ್ರಸುತ್ತ 404.60 ನೀರು ಸಂಗ್ರಹವಿದೆ ಸಣ್ಣ ನೀರಾವರಿ ಇಲಾಖೆಯ ಅಧಿಕಾರಿ ಸಭೆಗೆ ಮಾಹಿತಿ ನೀಡಿದರು.

# ನವಜಾತ ಶಿಶು ಪತ್ತೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.30-ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣ ಘಟಕ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಬಾಗಲಕೋಟ ಇವರ ಮೂಲಕ ಅಮೂಲ್ಯ(ಪಿ) ಸರ್ಚ ಸ್ವದೇಶಿ ದತ್ತು ಸ್ವೀಕಾರ ಕೇಂದ್ರ ಸೆಕ್ಟರ ನಂ-50, ನವನಗರ, ಬಾಗಲಕೋಟ ಸಂಸ್ಥೆಗೆ ಪರಿತ್ಯೆತ್ತ ಹೆಣ್ಣು ಮಗುವನ್ನು ನೀಡಲಾಗಿದೆ.

ಈ ಮಗು ಸೀಮಿಕೇರಿ ಪುನರ್ವಸತಿ ಕೇಂದ್ರದ ಸಮೀಪದ ಹುಚ್ಚಪ್ಪ ಕುಂಬಾರ ಎಂಬುವರ ಇಟ್ಟಂಗಿ ಭಟ್ಟಿ ಹತ್ತಿರ ಮುಳ್ಳಿನ ಕಂಟಿಯಲ್ಲಿ ಜೂ,28 ರಂದು ದೊರೆತಿದೆ. ಮಗು ಒಂದು ದಿನದ ಕೂಸಾಗಿದ್ದು, ಗೋಧಿ ಬಣ್ಣ ಹಾಗೂ 2.5 ಕೆ.ಜಿ ತೂಕ ಹೊಂದಿದ್ದು ಈ ಬಗ್ಗೆ ಕಲಾದಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮಗುವಿಗೆ ಸಂಬಂಧಿಸಿದವರು ಈ ವಿಷಯ ಕುರಿತು ಪತ್ರಿಕೆಯಲ್ಲಿ ಪ್ರಕಟವಾದ 60 ದಿನಗಳಲ್ಲಿ ಡಾ.ವೀಣಾ.ಎಂ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸ್ತ್ರೀ ಶಕ್ತಿ ಭವನ ಸೆಕ್ಟರ ನಂ.4 ನವನಗರದ ಕಛೇರಿಗೆ ಭೇಟಿ ನೀಡಬೇಕು. ಇಲ್ಲದಿದ್ದರೆ ಮಗುವನ್ನು ಕಾನೂನು ಪ್ರಕಾರ ದತ್ತು ಪ್ರಕ್ರಿಯೆ ಮಾಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354-295345 ಸಂಪರ್ಕಿಸಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ
**ಪುರಸಭೆ ಕಾರ್ಯಾಲಯ, ಭಾಲ್ಕಿ**

ಸಂಖ್ಯೆ: ಪುಸಭಾ/15ನೇ ಹಣಕಾಸು/ಸಿಆರ್- /2022-23 ದಿನಾಂಕ: 30-06-2025

**ಸಾರ್ವಜನಿಕ ಪ್ರಕಟಣೆ**

ಮಾನ್ಯ ಜಿಲ್ಲಾಧಿಕಾರಿಗಳು ಬೀದರ ಜಿಲ್ಲೆ ಬೀದರ ರವರ ಆದೇಶ ಸಂ/ಜಿನಕೋ/ಕಾಮಗಾರಿ/ಸಿಆರ್-55/2022-23 ದಿನಾಂಕ: 30-07-2022 ರಂತೆ 2022-23ನೇ ಸಾಲಿನ 15ನೇ ಹಣಕಾಸು ಯೋಜನೆಯಡಿ ವಾರ್ಡ ಸಂಖ್ಯೆ 06 ರಲ್ಲಿ ವೈಯುಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಸಹಾಯಧನ ನೀಡುವುದು ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ರೂ. 2.00 ಲಕ್ಷಗಳು ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿರುತ್ತಾರೆ. ಪ್ರಯುಕ್ತ ವಾರ್ಡ ಸಂಖ್ಯೆ 06 ರ ಓಣಿಗಳ ನಿವಾಸಿಗಳಿಗೆ ತಿಳಿಯಪಡಿಸುವುದೇನೆಂದರೆ, ವೈಯಕ್ತಿಕ ಗೃಹ ಬಳಕೆ ಶೌಚಾಲಯಗಳ ನಿರ್ಮಾಣಕ್ಕಾಗಿ ಉದ್ದೇಶಿಸಲ್ಪಡುವ ಸಮೂಹಗಳು; ಹೊಸ ಸ್ವತಂತ್ರ ಕುಟುಂಬಗಳು, ಈ ಯೋಜನೆಯಡಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ನಿಗದಿತ ಅರ್ಜಿ ನಮೂನೆಯನ್ನು ಪುರಸಭೆ ಕಾರ್ಯಾಲಯದಲ್ಲಿ ಪಡೆದುಕೊಂಡು ನಿಗದಿತ ನಮೂನೆಯಲ್ಲಿ ಸೂಚಿಸಿರುವ ಮಾಹಿತಿಯನ್ನು ಭರ್ತಿ ಮಾಡಿ ಈ ಪ್ರಕಟಣೆಯ ದಿನಾಂಕದಿಂದ 15 ದಿವಸಗಳ ಅವಧಿಯೊಳಗೆ ಅರ್ಜಿಯನ್ನು ಪುರಸಭೆ ಕಾರ್ಯಾಲಯದ ಆವಕ-ಜಾವಕ ಶಾಖೆಗೆ ಸಲ್ಲಿಸಲು ಸಾರ್ವಜನಿಕರಿಗೆ ತಿಳಿಯಪಡಿಸಿದೆ.

ಸಹಿ/- ಮುಖ್ಯಾಧಿಕಾರಿಗಳು
ಪುರಸಭೆ ಭಾಲ್ಕಿ

ವಾ.ಸಾ.ಸಂ.ಇ/ಬೀದರ/81/ಕೆ.ಎಸ್.ಎಂ.ಸಿ.&ಎ/2025-26

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.